
# ಬೆಳಗಾವಿ ವರದಿ

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 287 ₹4 TUESDAY, 9 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26

## ದೇಶದಲ್ಲಿ 682 ಜೆಎನ್.1 ಪ್ರಕರಣ ವರದಿ
## ನಂ.1 ಸ್ಥಾನದಲ್ಲಿ ಕರ್ನಾಟಕ



ನವದೆಹಲಿ: ಕೊರೋನಾ ವೈರಸ್ ರೂಪಾಂತರಿ JN.1 ಮೊದಲ ಪ್ರಕರಣ ಕೇರಳದಲ್ಲಿ ಪತ್ತೆಯಾದ ನಂತರ ದೇಶಾದ್ಯಂತ ಆತಂಕ ಹೆಚ್ಚಾಗತೊಡಗಿದ್ದು, ಕೋವಿಡ್ ಸೋಂಕಿತರ ಜೊತೆಗೆ ರೂಪಾಂತರಿ JN.1 ಪ್ರಕರಣಗಳ ಸಂಖ್ಯೆ 682ಕ್ಕೆ ಏರಿದೆ.

ದೇಶದ 12 ರಾಜ್ಯಗಳಲ್ಲಿ 682 ಜೆಎನ್.1 ಪ್ರಕರಣಗಳು ವರದಿಯಾಗಿದ್ದು, ಕರ್ನಾಟಕ 199 ಪ್ರಕರಣಗಳೊಂದಿಗೆ ಮೊದಲ ಸ್ಥಾನದಲ್ಲಿದೆ. ಕೇರಳದಿಂದ 148, ಮಹಾರಾಷ್ಟ್ರದಿಂದ 139, ಗೋವಾದಿಂದ 47, ಗುಜರಾತ್‌ನಿಂದ 36, ಆಂಧ್ರಪ್ರದೇಶದಿಂದ 30, ರಾಜಸ್ಥಾನದಿಂದ 30, ತಮಿಳುನಾಡಿನಿಂದ 26, ದೆಹಲಿಯಿಂದ 21, ಒಡಿಶಾದಿಂದ ಮೂರು, ತೆಲಂಗಾಣದಲ್ಲಿ ಎರಡು ಮತ್ತು ಹರಿಯಾಣದಲ್ಲಿ ಒಂದು ಪ್ರಕರಣ ವರದಿಯಾಗಿದೆ ಎಂದು ಸೋಮವಾರ ಅಧಿಕೃತ ಮೂಲಗಳು ತಿಳಿಸಿವೆ.

ದೇಶದಲ್ಲಿ ಕೋವಿಡ್ ಪಾಸಿಟಿವ್ ಪ್ರಕರಣಗಳ ಸಂಖ್ಯೆ ಮತ್ತು ಎ೦.1 ರೂಪಾಂತರಿ ಪ್ರಕರಣಗಳು ಹೆಚ್ಚಾಗುತ್ತಿದ್ದರೂ ತಕ್ಷಣಕ್ಕೆ ಆತಂಕ ಪಡುವ ಅಗತ್ಯ ಇಲ್ಲ. ಸೋಂಕಿತರಲ್ಲಿ ಹೆಚ್ಚಿನವರು ಮನೆಯಲ್ಲಿಯೇ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ. ಇದು ಸೌಮ್ಯ ಅನಾರೋಗ್ಯವನ್ನು ಸೂಚಿಸುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಮಧ್ಯೆ, ಕಳೆದ 24 ಗಂಟೆಯಲ್ಲಿ ದೇಶದಲ್ಲಿ 605 ಹೊಸ ಕೋವಿಡ್–19 ಪ್ರಕರಣಗಳು ವರದಿಯಾಗಿದ್ದು, ನಾಲ್ವರು ಕೋವಿಡ್‌ನಿಂದ ಸಾವಿಗೀಡಾಗಿದ್ದಾರೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಮಾಹಿತಿ ನೀಡಿದೆ.

ಬೆಳಗ್ಗೆ 8 ಗಂಟೆಗೆ ಲಭ್ಯವಾದ ನವೀಕೃತ ಮಾಹಿತಿ ಪ್ರಕಾರ, ಈ ಮೂಲಕ ಸಕ್ರಿಯ ಪ್ರಕರಣಗಳ ಸಂಖ್ಯೆ 4,002 ಕ್ಕೆ ಏರಿದೆ. ದೇಶದ ಒಟ್ಟು ಕೋವಿಡ್ ಪ್ರಕರಣಗಳ ಸಂಖ್ಯೆ 4.5 ಕೋಟಿಗೆ (4,50,18,792) ಏರಿಕೆಯಾಗಿದೆ.

## ನಾಲ್ವರು ಮಾಜಿ ನಕ್ಸಲೀಯರನ್ನ ವಶಕ್ಕೆ ಪಡೆದ ಪಾವಗಡ ಪೊಲೀಸ್



ತುಮಕೂರು: 2005ರ ಪಾವಗಡ ವೆಂಕಟಮ್ಮನಹಳ್ಳಿ ಬ್ಲಾಸ್ಟ್ ಕೇಸ್ಗೆ ಸಂಬಂಧಿಸಿದಂತೆ ನಾಲ್ವರು ಮಾಜಿ ನಕ್ಸಲೀಯರನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ. ಪಾವಗಡ ತಾಲೂಕಿನ ನ್ಯಾಯಾಲಯದಲ್ಲಿ ಕೇಸ್ ನಡೆಯುತ್ತಿದೆ. ಆದರೆ ಕೋರ್ಟ್ ವಿಚಾರಣೆಗೆ ನೋಟಿಸ್ ನೀಡಿದ್ದರೂ ಪದೇ ಪದೇ ತನಿಖೆಗೆ ಗೈರಾಗುತ್ತಿದ್ದರು. ಕೋರ್ಟ್ ಸೂಚನೆ ಮೇರೆಗೆ 4 ಮಾವೋವಾದಿಗಳನ್ನು ಆಂಧ್ರ ಪ್ರದೇಶದ ವಿವಿಧ ಭಾಗದಲ್ಲಿ ಪತ್ತೆ ಹಚ್ಚಿ ಪಾವಗಡ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪಾವಗಡ ತಾಲೂಕಿನ ವೆಂಕಟಮ್ಮನಹಳ್ಳಿಯಲ್ಲಿ 2005ರಲ್ಲಿ ಬಾಂಬ್ ಬ್ಲಾಸ್ಟ್ ಆಗಿತ್ತು. ಇದೇ ಕೇಸ್ಗೆ ಸಂಬಂಧಿಸಿದಂತೆ ಒಟ್ಟು 16 ಜನರ ವಿರುದ್ಧ ಪ್ರಕರಣ ದಾಖಲಾಗಿತ್ತು. ಹೀಗಾಗಿ ನಾಲ್ಕು ಜನರನ್ನು ಮತ್ತೆ ವಶಕ್ಕೆ ಪಡೆದು ವಿಚಾರಣೆ ಮುಂದುವರಿಸಿದ್ದಾರೆ.

## 5ನೇ ಬಾರಿಗೂ ಬಾಂಗ್ಲಾದೇಶದ ಪ್ರಧಾನಿಯಾಗಿ ಶೇಖ್ ಹಸೀನಾ ಆಯ್ಕೆ



ಢಾಕಾ: ಬಾಂಗ್ಲಾದೇಶದಲ್ಲಿ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ಪ್ರಧಾನಿ ಶೇಖ್ ಹಸೀನಾ ದಾಖಲೆಯ ಜಯ ಸಾಧಿಸಿದ್ದು, ಸತತ 5ನೇ ಬಾರಿಗೆ ಮರು ಆಯ್ಕೆಯಾಗಿದ್ದಾರೆ ಎಂದು ಚುನಾವಣಾ ಆಯೋಗ ಪ್ರಕಟಿಸಿದೆ.

ಈ ಬೆನ್ನಲ್ಲೇ ಪ್ರತಿಪಕ್ಷಗಳು ಈ ಚುನಾವಣೆಯನ್ನು ಬಹಿಷ್ಕರಿಸಿದ್ದು, ವಿರೋಧ ಪಕ್ಷಗಳನ್ನು ಉಗ್ರಗಾಮಿ ಸಂಘಟನೆ ಎಂದು ಪ್ರಧಾನಿ ಟೀಕಿಸಿದ್ದಾರೆ.

ಒಟ್ಟು 300 ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಅವಾಮಿ ಲೀಗ್ ನೇತೃತ್ವದ ಪಕ್ಷವು ಸುಮಾರು 204 ಸ್ಥಾನಗಳನ್ನು ಗೆದ್ದುಕೊಂಡಿದೆ ಎಂದು ಚುನಾವಣಾ ಆಯೋಗ ಪ್ರಕಟಿಸಿದೆ. ಜೊತೆಗೆ ಮಿತ್ರ ಪಕ್ಷವಾದ ಜಾತಿಯಾ ಪಕ್ಷವು 9 ಸ್ಥಾನಗಳನ್ನು ಗೆದ್ದುಕೊಂಡಿದೆ ಎಂದು ತಿಳಿದು ಬಂದಿದೆ.

ಹಾಲಿ ಪ್ರಧಾನಿ ಹಸೀನಾ ಪ್ರತಿಸ್ಪರ್ಧಿ ಎಂ.ನಿಜಾಮ್ ಉದ್ದೀನ್ ಲಷ್ಕರ್ ವಿರುದ್ಧ 2,49,965 ಮತಗಳನ್ನು ಪಡೆದುಕೊಂಡಿದ್ದಾರೆ. ನಿಜಾಮ್ ಉದ್ದೀನ್ ಕೇವಲ 469 ಮತಗಳನ್ನು ಪಡೆಯುವ ಮೂಲಕ ಠೇವಣಿ ಕಳೆದುಕೊಂಡಿದ್ದಾರೆ.

## ಬೆಳಗಾವಿ ಮಹಾರಾಷ್ಟ್ರಕ್ಕೆ ಸೇರಿತ್ತು ಎಂದು ಹೇಳಿಕೆ ಕೊಟ್ಟ ಸಚಿವೆ ಹೆಬ್ಬಾಳಕರ



ಬೆಳಗಾವಿ: ಸ್ವಾತಂತ್ರ್ಯ ಪೂರ್ವದಲ್ಲಿ ಬೆಳಗಾವಿ ಮಹಾರಾಷ್ಟ್ರಕ್ಕೆ ಸೇರಿತ್ತು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ನಿಪ್ಪಾಣಿ ತಾಲ್ಲೂಕಿನ ಕಾರದಗಾ ಗ್ರಾಮದ ಅಲ್ಲಮಪ್ರಭು ಸ್ವಾಮೀಜಿ ವೇದಿಕೆಯಲ್ಲಿ ನಡೆದ 6ನೇ ಕನ್ನಡ ಸಮಾವೇಶದ ಸಮ್ಮೇಳನದಲ್ಲಿ ಮುಖ್ಯ ಅಥಿತಿಗಳಾಗಿ ಲಕ್ಷ್ಮಿ ಹೆಬ್ಬಾಳ್ಕರ್ ಭಾಗಿಯಾಗಿ ವೇದಿಕೆ ಮೇಲೆ ಮಾತಾಡೋ ಭರದಲ್ಲಿ ಲಕ್ಷ್ಮಿ ಹೆಬ್ಬಾಳ್ಕರ್ ಹೀಗೆ ವಿವಾದಾತ್ಮಕ ಹೇಳಿಕೆ ಕೊಟ್ಟಿದ್ದಾರೆ.

ಕನ್ನಡ ಭಾಷೆಗೆ ಬಹಳಷ್ಟು ವರ್ಷಗಳ ಇತಿಹಾಸವಿದೆ ಎಂಬುದನ್ನು ಸಾಹಿತಿಗಳು ತೋರಿಸಿದ್ದಾರೆ. ನಮ್ಮ ಭಾಷೆಗೆ ಎಂಟು ಜ್ಞಾನಪೀಠ ಪ್ರಶಸ್ತಿಗಳು ಲಭಿಸಿವೆ. ನಮ್ಮ ಭಾಷೆ, ಕಲೆ, ಸಂಸ್ಕೃತಿಯಲ್ಲಿ ಶ್ರೀಮಂತವಾಗಿದೆ. ನಾವು ಈ ನಾಡಿನಲ್ಲಿ ಜನ್ಮ ಪಡೆಯಲು ಪುಣ್ಯ ಮಾಡಿರಬೇಕು.

ಆದ್ರೆ ಸ್ವಾತಂತ್ರ್ಯ ಪೂರ್ವದಲ್ಲಿ ಬೆಳಗಾವಿ ಮಹಾರಾಷ್ಟ್ರಕ್ಕೆ ಸೇರಿತ್ತು ಎಂದಿದ್ದಾರೆ. ಈ ಹೇಳಿಕೆ ಎಲ್ಲೆಡೆ ವೈರಲ್ ಆಗಿದೆ.

### ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್‌ರನ್ನ ಕರೆದು ಸಿಎಂ ಬುದ್ಧಿ ಮಾತು ಹೇಳಲಿ: ಹೆಚ್‌ಡಿಕೆ



ಬೆಂಗಳೂರು: ಸ್ವಾತಂತ್ರ್ಯ ಪೂರ್ವದಲ್ಲಿ ಬೆಳಗಾವಿ ಮಹಾರಾಷ್ಟ್ರಕ್ಕೆ ಸೇರಿತ್ತು ಎಂಬ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿಕೆ ವಿರುದ್ಧ ಮಾಜಿ ಸಿಎಂ ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರಿನಲ್ಲಿಈ ಕುರಿತು ಮಾತನಾಡಿದ ಅವರು, ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿಕೆ ಅದು ಈಗ ಮುಗಿದು ಹೋಗಿರೋ ಅಧ್ಯಾಯ. ಮತ್ತೆ ಅದನ್ನು ನೆನಪು ಮಾಡಿಕೊಳ್ಳುತ್ತಿರುವುದು ಸಚಿವರಿಗೆ ಮಹಾರಾಷ್ಟ್ರದ ಮೇಲೆ ಇನ್ನೂ ವ್ಯಾಮೋಹ ಇದೆ ಅಂತ ಎದ್ದು ಕಾಣುತ್ತಿದೆ. ಜವಾಬ್ದಾರಿಯುತ ಸ್ಥಾನದಲ್ಲಿ ಇರೋ ಸಚಿವರೇ ಇಂತಹ ವಿಷಯಗಳನ್ನ ಮಾತಾಡಿದ್ರೆ ನೀವೇ ನೀರು ಎರೆದ ಹಾಗೆ ಅಲ್ಲವಾ? ಸಿಎಂ ಅವರಿಗೆ ಮಂತ್ರಿಗಳ ಬಗ್ಗೆ ಹಿಡಿತ ಇದ್ದರೆ ಅವರನ್ನ ಕರೆದು ಸರಿಯಾಗಿ ಬುದ್ಧಿ ಹೇಳೋದು ಒಳ್ಳೆಯದು ಎಂದು ಸಲಹೆ ನೀಡಿದರು.

## ಬೆಳಗಾವಿ: ವಿಮಾನ ನಿಲ್ದಾಣದಲ್ಲಿ ಜೀವಂತ ಗುಂಡು ಪತ್ತೆ



ಬೆಳಗಾವಿ: ಬೆಳಗಾವಿ ನಗರದ ಸಾಂಬ್ರಾ ವಿಮಾನ ನಿಲ್ದಾಣದಲ್ಲಿ ಜೀವಂತ ಗುಂಡು ಸಮೇತ ವಿಮಾನದಲ್ಲಿ ತೆರಳುತ್ತಿದ್ದ ವೇಳೆ ಸೇನಾಧಿಕಾರಿಯೊಬ್ಬರು ಸಿಕ್ಕಿಬಿದ್ದಿದ್ದಾರೆ.

ಸೇನಾಧಿಕಾರಿ ಬೆಳಗಾವಿ ಸಾಂಬ್ರಾ ವಿಮಾನ ನಿಲ್ದಾಣದಿಂದ ಹೈದ್ರಾಬಾದ್‌ಗೆ ಪ್ರಯಾಣಿಸುತ್ತಿದ್ದ ವೇಳೆ ವಿಮಾನ ನಿಲ್ದಾಣದ ಭದ್ರತಾ ಸಿಬ್ಬಂದಿ ಕೈಗೆ ಸಿಕ್ಕಾಕೊಂಡಿದ್ದಾರೆ.

ಸೇನಾಧಿಕಾರಿಗಳು ಪ್ರಸ್ತುತ ಡೆಹ್ರಾಡೂನ್‌ನಲ್ಲಿ ಭಾರತೀಯ ಸೇನೆಯಲ್ಲಿ ಕ್ಯಾಪ್ಟನ್ ಆಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಹೆಚ್ಚಿನ ತರಬೇತಿ ಪಡೆಯಲು ಬೆಳಗಾವಿಯ ಕಮಾಂಡೋ ಸೆಂಟರ್‌ಗೆ ಬಂದಿದ್ದ ಇವರು ತರಬೇತಿ ಮುಗಿಸಿ ವಾಪಸ್ಸು ತೆರಳುವಾಗ ಬ್ಯಾಗ್‌ನಲ್ಲಿ ಜೀವಂತ ಗುಂಡು ಪತ್ತೆಯಾಗಿದೆ.

ಸದ್ಯ ಅಧಿಕಾರಿಯನ್ನು ವಿಮಾನ ನಿಲ್ದಾಣ ಭದ್ರತಾ ಸಿಬ್ಬಂದಿಗಳು ಮಾರಿಹಾಳ ಠಾಣೆ ಪೊಲೀಸರಿಗೆ ಹಸ್ತಾಂತರಿಸಿದ್ದಾರೆ ಎಂದು ತಿಳಿದುಬಂದಿದೆ.

ಇನ್ನೂ ಸೇನಾಧಿಕಾರಿ ಬ್ಯಾಗ್‌ನಲ್ಲಿ ಜೀವಂತ ಗುಂಡು ಇರುವುದನ್ನು ಗಮನಿಸದೇ ಪ್ರಯಾಣಿಸ್ತಿದ್ದ ಬಗ್ಗೆ ಪೊಲೀಸರಿಗೆ ತಿಳಿಸಿದ್ದಾರೆ ಎನ್ನಲಾಗಿದೆ.

## ಸಿಎಂ ಸಿದ್ದರಾಮಯ್ಯ ತಾಲಿಬಾನ್ ಸರ್ಕಾರ ನಡೆಸುತ್ತಿದ್ದಾರೆ: ಹೇಳಿಕೆಗೆ ಬದ್ಧ; ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಾಲಿಬಾನ್ ರೀತಿ ಸರ್ಕಾರ ನಡೆಸುತ್ತಿದ್ದಾರೆಂಬ ಹೇಳಿಕೆಗೆ ನಾನು ಬದ್ಧನಾಗಿದ್ದೇನೆಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಸೋಮವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸಿದ್ದರಾಮಯ್ಯ ಅವರು ಇಸಿಸ್ ಉಗ್ರ ಸಂಘಟನೆಯಂತೆ ಸರ್ಕಾರ ನಡೆಸುತ್ತಿರುವುದ್ದಾರೆ.

ಈ ಹೇಳಿಕೆಯನ್ನು ನಿರಾಕರಿಸುವುದಿಲ್ಲ. ನನ್ನ ಹೇಳಿಕೆಗೆ ನಾನು ಬದ್ಧನಾಗಿದ್ದೇನೆ. ಸರ್ಕಾರದ ನಡೆಸುತ್ತಿರುವ ರೀತಿಗೆ ಅಧಿಕಾರ ಕೊಟ್ಟವರು ಯಾರು ಪ್ರಶ್ನಿಸಿದರು.

ಹುಬ್ಬಳ್ಳಿಯಲ್ಲಿ ಸಾಕಷ್ಟು ಮಂದಿಯನ್ನು ಬಂಧನಕ್ಕೊಳಪಡಿಸಲು ಮುಂದಾಗಿದ್ದರು.

ನಂತರ ಅಲ್ಲಿನ ಆಯುಕ್ತರನ್ನು ಸಂಪರ್ಕಿಸಿದ್ದೆ. ಬಂಧನಕ್ಕೊಳಪಡಿಸಿದ್ದೇ ಆದರೆ, ದೊಡ್ಡ ಮಟ್ಟದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದ್ದೆ. ನಂತರ ಈ ಯೋಜನೆಯನ್ನು ಕೈಬಿಡಲಾಗಿತ್ತು ಎಂದು ಹೇಳಿದ್ದಾರೆ.

## ರಾಮಮಂದಿರ ನಿರ್ಮಾಣಕ್ಕೆ ನಾನೂ ದೇಣಿಗೆ ಕೊಟ್ಟಿದ್ದೇನೆ: ಡಾ. ಜಿ. ಪರಮೇಶ್ವರ್



ಬೆಂಗಳೂರು: ಅಯೋಧ್ಯೆ ರಾಮಮಂದಿರ ನಿರ್ಮಾಣಕ್ಕೆ ನಾನು ಸಹ ದೇಣಿಗೆ ಕೊಟ್ಟಿದ್ದೇನೆ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ದೇಣಿಗೆ ಕೊಟ್ಟಿದ್ದೇನೆ. ಇದು ನನ್ನ ವೈಯಕ್ತಿಕ ವಿಚಾರ. ಎಷ್ಟು ದೇಣಿಗೆ ನೀಡಿದ್ದೇನೆ ಎಂದು ಹೇಳಿಕೊಳ್ಳಬಾರದು ಎಂದರು.

ಅಯೋಧ್ಯೆ ಪೂಜೆಯಲ್ಲಿ ಭಾಗಿಯಾಗುವ ಬಗ್ಗೆ ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳಲಿದೆ.

ಪ್ರತ್ಯೇಕ ದಿನ ಹೋಗಿ ಪೂಜೆ ಸಲ್ಲಿಸುವ ಬಗ್ಗೆ ಹೈಕಮಾಂಡ್ ನಿರ್ಧರಿಸಿದರೆ ಅದಕ್ಕೂ ಸಿದ್ಧ. ವಿಶೇಷ ಪೂಜೆ ಸಲ್ಲಿಸುತ್ತೇವೆ.

ನಾವು ಹಿಂದುಗಳಲ್ವ? ನಮ್ಮ ಪಕ್ಷದಲ್ಲಿಯೂ ಹಿಂದುಗಳಿಲ್ಲವೇ? ಅದರಲ್ಲೇನು ತಪ್ಪಿದೆ ಎಂದಿದ್ದಾರೆ.

## ಮನೆಗಳಲ್ಲಿರುವ ಅಂಗಡಿಗಳು ಕೂಡ ತೆರಿಗೆ ಪಾವತಿಸಬೇಕು: ಬಿಬಿಎಂಪಿ ನೋಟೀಸ್

ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) 6 ಲಕ್ಷಕ್ಕೂ ಹೆಚ್ಚು ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡಿರುವವರಿಗೆ ನೋಟೀಸ್ ಕಳುಹಿಸುತ್ತಿದೆ. ಇದರ ಜೊತೆಗೆ ವಸತಿ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗಡಿಗಳಿಗೂ ತೆರಿಗೆ ಪಾವತಿಸುವಂತೆ ನೋಟಿಸ್ ಕಳುಹಿಸುತ್ತಿದೆ.

ನಿಯಮದ ಪ್ರಕಾರ, ವಸತಿ ಪ್ರದೇಶದಲ್ಲಿ ಕಾರ್ಯನಿರ್ವಹಿಸುವ ಅಂಗಡಿಗಳು ಮತ್ತು ಸಣ್ಣ ಹೋಟೆಲ್‌ಗಳನ್ನು 'ವಾಣಿಜ್ಯ' ಎಂದು ವರ್ಗೀಕರಿಸಬೇಕು, ಅವುಗಳಿಗೆ ವಾಣಿಜ್ಯ ಘಟಕವಾಗಿ ತೆರಿಗೆ ಪಾವತಿಸಬೇಕು ಎಂದು ಬಿಬಿಎಂಪಿ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆಸ್ತಿ ತೆರಿಗೆ ಸಂಗ್ರಹವನ್ನು ಸುಧಾರಿಸಲು ನಾಗರಿಕ ಸಂಸ್ಥೆ ಎಲ್ಲಾ ಆಯ್ಕೆಗಳನ್ನು ಪ್ರಯತ್ನಿಸುತ್ತಿದೆ.

ಇದಲ್ಲದೆ, ತಮ್ಮ ಆಸ್ತಿಗಳನ್ನು ಕಡಿಮೆ ಮೌಲ್ಯಮಾಪನ ಮಾಡಿರುವ ಮತ್ತು ಹೊಸ ಸೇರ್ಪಡೆಗಳನ್ನು (ಹೆಚ್ಚುವರಿ ಮಹಡಿಗಳು ಅಥವಾ ಕೊಠಡಿಗಳು) ಘೋಷಿಸದ ಮತ್ತು ತೆರಿಗೆ ವಂಚಿಸಿದ ಆಸ್ತಿಗಳಿಗೂ ಬಿಬಿಎಂಪಿ ನೋಟಿಸ್ ನೀಡುತ್ತಿದೆ.

ನನ್ನ ಅನೇಕ ನೆರೆಹೊರೆಯವರು 2 ಲಕ್ಷ ಮತ್ತು ಅದಕ್ಕಿಂತ ಹೆಚ್ಚಿನ ಮೊತ್ತದ ಆಸ್ತಿ ತೆರಿಗೆಯನ್ನು ಪಾವತಿಸುವಂತೆ




ನೋಟಿಸ್‌ಗಳನ್ನು ಸ್ವೀಕರಿಸಿದ್ದಾರೆ. ಕೆಲವು ಆಸ್ತಿ ಮಾಲೀಕರು ಹೆಚ್ಚುವರಿ ಮಹಡಿಗಳನ್ನು ನಿರ್ಮಿಸುವ ಮೂಲಕ ಕಟ್ಟಡಗಳಿಗೆ ಹೊಸ ಸೇರ್ಪಡೆಗಳನ್ನು ಮಾಡಿದ್ದಾರೆ, ಕೆಲವರು ತಮ್ಮ ಜಾಗಗಳನ್ನು ವಾಣಿಜ್ಯ ಉದ್ದೇಶಗಳಿಗಾಗಿ ಬಾಡಿಗೆಗೆ ನೀಡಿದ್ದಾರೆ. ಹೆಚ್ಚುವರಿ ನಿರ್ಮಾಣ ಮಾಡಿದ ಸಮಯದಿಂದ ಆಸ್ತಿ ತೆರಿಗೆಯಲ್ಲಿನ ವ್ಯತ್ಯಾಸಗಳನ್ನು ಸೆಸ್‌ನೊಂದಿಗೆ ಪಾವತಿಸಲು ಆಸ್ತಿ ಮಾಲೀಕರಿಗೆ ತಿಳಿಸಲಾಗಿದೆ. ಅಂದಿನಿಂದ, ಆಸ್ತಿಗಳು ವಾಣಿಜ್ಯ ವಿದ್ಯುತ್ ಸಂಪರ್ಕವನ್ನು ಪಡೆದಿವೆ ಎಂದು ಬಿಬಿಎಂಪಿಯ ಗಾಂಧಿನಗರ ಕಂದಾಯ ವಿಭಾಗದ ವ್ಯಾಪ್ತಿಗೆ ಬರುವ ಶ್ರೀರಾಂಪುರದ ಆಸ್ತಿ ಮಾಲೀಕರು ತಿಳಿಸಿದ್ದಾರೆ.

ಕಮರ್ಷಿಯಲ್ ಆಗಿ ಕಾರ್ಯನಿರ್ವಹಿಸುತ್ತಿರುವ ಘಟಕಗಳಿಗೆ ಆಸ್ತಿ ತೆರಿಗೆ ಪಾವತಿಸಲು ಮತ್ತು ಬಡ್ಡಿಯೊಂದಿಗೆ ಆಸ್ತಿ ತೆರಿಗೆ ಮೌಲ್ಯಮಾಪನದಲ್ಲಿನ ವ್ಯತ್ಯಾಸಗಳನ್ನು ಪಾವತಿಸಲು ಬಿಬಿಎಂಪಿಯಿಂದ ನೋಟಿಸ್ ಜಾರಿಗೊಳಿಸಿದ ಅನೇಕ ಆಸ್ತಿ ಮಾಲೀಕರಿದ್ದಾರೆ. ಬಿಬಿಎಂಪಿ ಕ್ರಮಕ್ಕೆ ಹೆದರಿ ಕೆಲವು ಆಸ್ತಿ ತೆರಿಗೆ ಮಾಲೀಕರು ಬಾಕಿ ಪಾವತಿಸಿದ್ದಾರೆ. ಆದರೆ, ಕೆಲವರು ಲಕ್ಷಗಟ್ಟಲೆ ಬಾಕಿ ಉಳಿಸಿಕೊಂಡಿದ್ದಾರೆ ಎಂದು ಬಿಬಿಎಂಪಿ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಅಂಗಡಿಗಳು ವಾಣಿಜ್ಯ ವರ್ಗದಡಿ ಬೆಸ್ಕಾಂನಿಂದ ವಿದ್ಯುತ್ ಸರಬರಾಜು ಪಡೆದಿವೆ. ಅದೇ ರೀತಿಯಲ್ಲಿ, ಅವರು ವಾಣಿಜ್ಯ ಘಟಕಗಳಾಗಿ ತೆರಿಗೆಯನ್ನು ಪಾವತಿಸಬೇಕು ಎಂದು ಹೇಳಿದ್ದಾರೆ.

## ತಂದೆ–ತಾಯಿ ವೃದ್ಧಾಶ್ರಮಕ್ಕೆ ಸೇರಿಸಿದ್ರೆ ಕ್ರಿಮಿನಲ್ ಕೇಸ್: ಪೊಲೀಸರಿಂದ ಖಡಕ್ ಎಚ್ಚರಿಕೆ



ಬೆಂಗಳೂರು: ನಗರದಲ್ಲಿ ಇನ್ಮುಂದೆ ವೃದ್ಧಾಶ್ರಮಕ್ಕೆ ತಂದೆ–ತಾಯಿಗಳನ್ನು ಸೇರಿಸಿದ್ರೆ ಕ್ರಿಮಿನಲ್ ಕೇಸ್ ಹಾಕುವುದಾಗಿ ಬೆಂಗಳೂರು ನಗರ ಪೊಲೀಸರು ಖಡಕ್ ಸೂಚನೆ ನೀಡಿದ್ದಾರೆ.

ಜೊತೆಗೆ ಈಗಾಗಲೇ ವೃದ್ಧಾಶ್ರಮಕ್ಕೆ ಸೇರಿಸಿರೋ ತಂದೆ–ತಾಯಿಗಳನ್ನು ಕರೆದೊಯ್ಯುವಂತೆಯೂ ಎಚ್ಚರಿಕೆ ನೀಡಿದ್ದಾರೆ.

ಬೆಂಗಳೂರು ನಗರದಲ್ಲಿ ವೃದ್ಧಾಶ್ರಮಕ್ಕೆ ತಂದೆ–ತಾಯಿಗಳನ್ನು ಸೇರಿಸಿದ್ರೆ ಅಂಥವರ ವಿರುದ್ಧ ಕ್ರಿಮನಲ್ ಕೇಸ್ ಬುಕ್ ಮಾಡೋದಕ್ಕೆ ತಯಾರಿ ನಡೆಸಿದ್ದಾರೆ.ಈಗಾಗಲೇ ಈ ಸಂಬಂಧ ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರು ಪೊಲೀಸರಿಗೆ ಖಡಕ್ ಸೂಚನೆ ನೀಡಿದ್ದಾರೆ. ಅವರ ಸೂಚನೆಯ ಮೇರೆಗೆ ಪೋಷಕರನ್ನು ವೃದ್ಧಾಶ್ರಮಕ್ಕೆ ಸೇರಿಸುವವರ ವಿರುದ್ಧ ಕ್ರಿಮಿನಲ್ ಕೇಸ್ ಹಾಕೋದಕ್ಕೆ ಮುಂದಾಗಿದ್ದಾರೆ.

ಬೆಂಗಳೂರಿನ ವೃದ್ಧಾಶ್ರಮಗಳಲ್ಲಿ ತಮ್ಮ ತಂದೆ–ತಾಯಿಗಳನ್ನು ಮನೆಗೆ ಕರೆದೊಯ್ಯಬೇಕು. ಇಲ್ಲವಾದಲ್ಲಿ ಅಂಥವರ ವಿರುದ್ಧ ಕಾನೂನು ಕ್ರಮ ಜರುಗಿಸೋ ಎಚ್ಚರಿಕೆಯನ್ನು ನೀಡಿದ್ದಾರೆ.

## ಜ.22ರಂದು ರಾಜ್ಯದ ದೇವಾಲಯಗಳಲ್ಲಿ ವಿಶೇಷ ಪೂಜೆ ಸರ್ಕಾರದ ನಡೆ ಸ್ವಾಗತಿಸಿದ ಬಿಜೆಪಿ




ಬೆಂಗಳೂರು: ಉತ್ತರ ಪ್ರದೇಶದ ಅಯೋಧ್ಯೆಯ ರಾಮ ಮಂದಿರದಲ್ಲಿ ಜನವರಿ 22ರಂದು ಮೂರ್ತಿ ಪ್ರತಿಷ್ಠಾಪನೆ ಕಾರ್ಯಕ್ರಮ ನಡೆಯಲಿದ್ದು, ಈ ಸಂದರ್ಭದಲ್ಲಿ ರಾಜ್ಯದ ಎಲ್ಲಾ ದೇವಾಲಯಗಳಲ್ಲೂ ವಿಶೇಷ ಪೂಜೆ ನೆರವೇರಿಸುವಂತೆ ರಾಜ್ಯ ಸರ್ಕಾರದ ನಿರ್ಧಾರವನ್ನು ಬಿಜೆಪಿ ಸ್ವಾಗತಿಸಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಸಿಟಿ ರವಿಯವರು, ಇದು ಉತ್ತಮ ನಿರ್ಧಾರ. ಇದಕ್ಕೆ ಸರ್ಕಾರಕ್ಕೆ ಧನ್ಯವಾದಗಳನ್ನು ಹೇಳುತ್ತೇವೆ. ಹಲವು ವರ್ಷಗಳ ಬಳಿಕ ಕಾಂಗ್ರೆಸ್ ಪಕ್ಷಕ್ಕೆ ಇದೀಗ ಬುದ್ಧಿ ಬಂದಿದೆ. ರಾಮ ಎಲ್ಲರಿಗೂ ಸೇರಿದವನಾಗಿದ್ದಾನೆ. ರಾಮನನ್ನು ತೊರೆದಿದ್ದ ಕಾಂಗ್ರೆಸ್ ಇದೀಗ ರಾಮನ ಬಳಿಗೆ ಬರುತ್ತಿದೆ. ಇದು ಒಳ್ಳೆಯದು. ದೇಶಕ್ಕೂ ಒಳ್ಳೆಯದಾಗುತ್ತದೆ ಎಂದು ಹೇಳಿದ್ದಾರೆ.

ಬಿಜೆಪಿ ಶಾಸಕ ಸಿ.ಎನ್. ಅಶ್ವತ್ಥನಾರಾಯಣ್ ಅವರು ಮಾತನಾಡಿ, ಸರ್ಕಾರ ಉತ್ತಮ ನಿರ್ಧಾರ ತೆಗೆದುಕೊಂಡಿದೆ. ರಾಜ್ಯದಾದ್ಯಂತ ಎಲ್ಲಾ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಲು ಸರ್ಕಾರ ತೆಗೆದುಕೊಂಡ ನಿರ್ಧಾರವನ್ನು ನಾನು ಪ್ರಶಂಸಿಸುತ್ತೇನೆಂದು ಹೇಳಿದ್ದಾರೆ.

## ಸ್ಪಾ ಹೆಸರಿನಲ್ಲಿ ವೇಶ್ಯಾವಾಟಿಕೆ
### 44 ಮಹಿಳೆಯರ ರಕ್ಷಣೆ, 34 ಮಂದಿ ಸಿಸಿಬಿ ವಶಕ್ಕೆ



ಬೆಂಗಳೂರು: ಸ್ಪಾ ಹೆಸರಿನಲ್ಲಿ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ ಅಡ್ಡ ಮೇಲೆ ಕೇಂದ್ರ ಅಪರಾಧ ವಿಭಾಗ (ಸಿಸಿಬಿ) ಪೊಲೀಸರು ದಾಳಿ ನಡೆಸಿದ್ದು, 44 ಮಂದಿ ಮಹಿಳೆಯರನ್ನು ರಕ್ಷಣೆ ಮಾಡಿದ್ದಾರೆ.

ಮಹದೇವಪುರ ಪೊಲೀಸ್ ಠಾಣಾ ವ್ಯಾಪ್ತಿಯ ಬಹುಮಹಡಿಯ ಕಟ್ಟಡವೊಂದರ 1 ಮತ್ತು 6ನೇ ಅಂತಸ್ತಿನಲ್ಲಿ ಅನಿಲ್ ಎಬಾತ ನಿರ್ವಾಣ ಇಂಟರ್ ನ್ಯಾಷನಲ್ ಸ್ಪಾ ಪ್ರೈವೇಟ್ ಲಿಮಿಟೆಡ್ ಹೆಸರಿನಲ್ಲಿ ಸ್ಪಾ ನಡೆಸುತ್ತಿದ್ದ.

ಈ ಸ್ಪಾದಲ್ಲಿ ರಾಜ್ಯ ಹಾಗೂ ಹೊರ ರಾಜ್ಯಗಳ ಯುವತಿಯರು, ಮಹಿಳೆಯರನ್ನು ಇರಿಸಿಕೊಂಡು ವೇಶ್ಯಾವಾಟಿಕೆ ನಡೆಸುತ್ತಿದ್ದ ಎಂಬ ಆರೋಪ ಕೇಳಿ ಬಂದಿತ್ತು.

ಇದರಂತೆ ಶನಿವಾರ ತಡರಾತ್ರಿ ಸಿಸಿಬಿ ಪೊಲೀಸರು ಸ್ಪಾ ಮೇಲೆ ದಾಳಿ ಮಾಡಿ, ಪರಿಶೀಲನೆ ನಡೆಸಿದಾಗ ವೇಶ್ಯಾವಾಟಿಕೆ ದಂಧೆ ಬೆಳಕಿಗೆ ಬಂದಿದೆ.

ದಾಳಿ ವೇಳೆ 44 ಮಂದಿ ಮಹಿಳೆಯರನ್ನು ರಕ್ಷಣೆ ಮಾಡಲಾಗಿದೆ. ಅಂತೆಯೇ ಸ್ಪಾ ಮಾಲೀಕ ಅನಿಲ್ ಸೇರಿ 34 ಮಂದಿ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದ್ದಾರೆ.

ಆರೋಪಿಗಳು ಉದ್ಯೋಗ, ಹೆಚ್ಚಿನ ದುಡ್ಡಿನ ಆಸೆ ತೋರಿಸಿ ರಾಜ್ಯ ಹಾಗೂ ಹೊರರಾಜ್ಯಗಳಿಂದ ಯುವತಿಯರನ್ನು ಕರೆಸಿಕೊಂಡು ಬಳಿಕ ಒತ್ತಾಯಪೂರ್ವಕವಾಗಿ ವೇಶ್ಯಾವಾಟಿಕೆ ದಂಧೆಗೆ ನೂಕಿ ಅಕ್ರಮವಾಗಿ ಹಣ ಸಂಪಾದಿಸುತ್ತಿದ್ದರು ಎಂಬುದು ವಿಚಾರಣೆಯಿಂದ ಬೆಳಕಿಗೆ ಬಂದಿದೆ. ಈ ಸಂಬಂಧ ಮಹದೇವಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಮಾಲ್ಡೀವ್ಸ್ ಅಧಿಕಾರಿಗಳಿಂದ ಭಾರತ ವಿರೋಧಿ ಹೇಳಿಕೆ
## ಉಡುಪಿ ಬೀಚ್ ಚಿತ್ರ ಶೇರ್ ಮಾಡಿಕೊಂಡು ಸೆಹ್ವಾಗ್ ವಾಗ್ದಾಳಿ



ನವದೆಹಲಿ: ಮಾಲ್ಡೀವ್ಸ್ ಸರ್ಕಾರದ ಅಧಿಕಾರಿಗಳಿಂದ ಭಾರತ ವಿರೋಧಿ ಹೇಳಿಕೆ ವಿರುದ್ಧ ಭಾರತದ ಕ್ರಿಕೆಟ್ ಹಾಗೂ ಬಾಲಿವುಡ್ ಸ್ಟಾರ್ ಗಳು ಕಿಡಿಕಾರಿದ್ದಾರೆ.

ಮಾಜಿ ಟೀಂ ಇಂಡಿಯಾ ಆರಂಭಿಕ ಆಟಗಾರ ವಿರೇಂದ್ರ ಸೆಹ್ವಾಗ್, ಭಾರತ ಮತ್ತು ಪ್ರಧಾನಿ ಮೋದಿ ವಿರುದ್ಧ ಅನಗತ್ಯ ಹೇಳಿಕೆ ಹಿನ್ನೆಲೆಯಲ್ಲಿ ಉಡುಪಿ, ಅಂಡಮಾನ್ ಬೀಚ್ ಮತ್ತಿತರ ಸುಂದರ ಬೀಚ್ ಗಳ ಫೋಟೋಗಳನ್ನು ಹಂಚಿಕೊಳ್ಳುವ ಮೂಲಕ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ.

ಸ್ವದೇಶಿ ಬೀಚ್ ಗಳ ಅಭಿವೃದ್ಧಿ ಕುರಿತು ಸಾಮಾಜಿಕ ಜಾಲತಾಣದಲ್ಲಿ ಅಭಿಯಾನ ನಡೆಯುತ್ತಿದ್ದು, ಸಚಿನ್ ತೆಂಡೂಲ್ಕರ್, ಸುರೇಶ್ ರೈನಾ, ಇರ್ಫಾನ್ ಪಠಾಣ್, ಬಾಲಿವುಡ್ ಬಿಗ್ ಬಿ ಅಮಿತಾಬ್ ಬಚ್ಚನ್, ಅಕ್ಷಯ್ ಕುಮಾರ್ ಮತ್ತಿತರರು ಕೈ ಜೋಡಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಉಡುಪಿಯ ಮರವಂತೆ, ಪೊಂಡಿಯ ಪ್ಯಾರಡೈಸ್, ಅಂಡಮಾನ್‌ನ ನೀಲ್ ಮತ್ತು ಹ್ಯಾವ್‌ಲಾಕ್ ಬೀಚ್ ಗಳ ಫೋಟೋಗಳನ್ನು ಹಂಚಿಕೊಂಡಿರುವ ಸೆಹ್ವಾಗ್, ದೇಶದಲ್ಲಿ ಅನ್ವೇಷಿಸದ ಹಲವಾರು ಸ್ಥಳಗಳಿದ್ದು, ಮೂಲಸೌಕರ್ಯ ಒದಗಿಸುವುದರೊಂದಿಗೆ ಅವುಗಳನ್ನು ಅಭಿವೃದ್ಧಿಪಡಿಸಬೇಕಾಗಿದೆ ಎಂದು ಒತ್ತಾಯಿಸಿದ್ದಾರೆ.

ವಿರೇಂದ್ರ ಸೆಹ್ವಾಗ್ ಅವರ ಟ್ವೀಟ್ ಗೆ ಪ್ರತಿಕ್ರಿಯಿಸಿರುವ ಬಾಲಿವುಡ್ ಬಿಗ್ ಬಿ ಅಮಿತಾಬ್ ಬಚ್ಚನ್, ಇದು ತುಂಬಾ ಪ್ರಸ್ತುತವಾಗಿದೆ ಮತ್ತು ನಮ್ಮದೇ ಅತ್ಯಂತ ಉತ್ತಮವಾಗಿದೆ.

ಲಕ್ಷದ್ವೀಪ ಮತ್ತು ಅಂಡಮಾನ್‌ಗಳಿಗೆ ಹೋಗಿದ್ದು, ಅವುಗಳು ಆಶ್ಚರ್ಯಕರವಾದ ಸುಂದರವಾದ ಸ್ಥಳಗಳಾಗಿವೆ. ಬೆರಗುಗೊಳಿಸುವ ಕಡಲತೀರಗಳು ಮತ್ತು ನೀರೊಳಗಿನ ಅನುಭವವು ನಂಬಲಾಗದ್ದು ಎಂದಿದ್ದಾರೆ.

ಸಚಿನ್ ತೆಂಡೊಲ್ಕರ್ ಟ್ವೀಟ್:

ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೊಲ್ಕರ್ ಮಹಾರಾಷ್ಟ್ರದ ಕರಾವಳಿ ತೀರ ಪ್ರದೇಶ ಸಿಂಧುದುರ್ಗ ಬೀಚ್ ನಲ್ಲಿ ಕ್ರಿಕೆಟ್ ಆಡುವ ಫೋಟೋ ಹಂಚಿಕೊಳ್ಳುವ ಮೂಲಕ ಅದರ ಪ್ರಾಮುಖ್ಯತೆ ಕುರಿತು ವಿವರಿಸಿದ್ದಾರೆ.

ಭಾರತದ ಮಾಜಿ ಆಟಗಾರರಾದ ಇರ್ಫಾನ್ ಪಠಾಣ್, ಸುರೇಶ್ ರೈನಾ ಮತ್ತಿತರರು ಮಾಲ್ಡೀವ್ಸ್ ವಿರುದ್ಧ ಕಿಡಿಕಾರಿದ್ದಾರೆ.

ಪ್ರಧಾನಿ ಮೋದಿ ಅವರು ಜನವರಿ 2 ರಂದು ಕೇಂದ್ರಾಡಳಿತ ಪ್ರದೇಶವಾದ ಲಕ್ಷದ್ವೀಪಕ್ಕೆ ಭೇಟಿ ನೀಡಿದ್ದರು ಮತ್ತು ಸ್ನಾರ್ಕೆಲಿಂಗ್‌ನಲ್ಲಿ ಕೈ ಪ್ರಯತ್ನಿಸಿದ ನಂತರ 'ಉಲ್ಲಾಸದಾಯಕ ಅನುಭವ' ಸೇರಿದಂತೆ ಹಲವಾರು ಚಿತ್ರಗಳನ್ನು ಹಂಚಿಕೊಂಡಿದ್ದಾರೆ.

## ಹಣ ಅಕ್ರಮ ವರ್ಗಾವಣೆ ಪ್ರಕರಣ: ಕಾಂಗ್ರೆಸ್ ಶಾಸಕ ಕೆವೈ ನಂಜೇಗೌಡ ನಿವಾಸದ ಮೇಲೆ ಇ.ಡಿ ದಾಳಿ




ಬೆಂಗಳೂರು: ಹಣ ಅಕ್ರಮ ವರ್ಗಾವಣೆ ತನಿಖೆಯ ಭಾಗವಾಗಿ ಕಾಂಗ್ರೆಸ್ ಶಾಸಕ ಕೆವೈ ನಂಜೇಗೌಡ ಅವರ ನಿವಾಸ ಮತ್ತು ಅವರಿಗೆ ಸಂಬಂಧಿಸಿದ ಕೆಲವು ಸಂಸ್ಥೆಗಳ ಮೇಲೆ ಜಾರಿ ನಿರ್ದೇಶನಾಲಯ (ಇ.ಡಿ) ಅಧಿಕಾರಿಗಳು ಸೋಮವಾರ ಬೆಳಗ್ಗೆ ದಾಳಿ ನಡೆಸಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ.

61 ವರ್ಷದ ಶಾಸಕರು ಕರ್ನಾಟಕ ವಿಧಾನಸಭೆಯಲ್ಲಿ ಮಾಲೂರು ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ. ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆ ಹಾಲು ಒಕ್ಕೂಟ (ಕೋಚಿಮುಲ್) ಅಧ್ಯಕ್ಷರೂ ಆಗಿದ್ದಾರೆ.

ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್ಎ) ಅಡಿಯಲ್ಲಿ ತನಿಖೆಯ ಭಾಗವಾಗಿ ಮಾಲೂರು ಮತ್ತು ಕೋಲಾರ ಜಿಲ್ಲೆಗಳಲ್ಲಿ ಅವರ ನಿವಾಸ ಮತ್ತು ಅವರಿಗೆ ಸಂಬಂಧಿಸಿದ ಕೆಲವು ಸ್ಥಳಗಳ ಮೇಲೆ ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

ಕೆಲವು ಸ್ಥಳೀಯ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಎಫ್‌ಐಆರ್‌ಗಳ ಆಧಾರದ ಮೇಲೆ ಇ.ಡಿ ಪ್ರಕರಣವನ್ನು ದಾಖಲಿಸಿದೆ ಎಂದು ತಿಳಿದುಬಂದಿದೆ.

ಇತ್ತೀಚೆಗೆ ಕೋಚಿಮುಲ್ ನೇಮಕಾತಿ ವಿಚಾರದಲ್ಲಿ ಅಕ್ರಮ ನಡೆದಿರುವ ಆರೋಪ ಕೇಳಿ ಬಂದಿತ್ತು. ನೇಮಕಾತಿ ವಿಚಾರದಲ್ಲಿ ಕೋಟ್ಯಂತರ ರೂಪಾಯಿ ಅವ್ಯವಹಾರ ನಡೆದಿದೆ ಎಂದು ಬಿಜೆಪಿ ಸಂಸದ ಎಸ್ ಮುನಿಸ್ವಾಮಿ ಆರೋಪಿಸಿದ್ದರು.

# ಸವದತ್ತಿ ಯಲ್ಲಮ್ಮ ಸುಕ್ಷೇತ್ರ ಅಭಿವೃದ್ಧಿಗೆ ಮಾಸ್ಟರ್ ಪ್ಲ್ಯಾನ್
## ಸ್ವಚ್ಛತೆ, ಸಮರ್ಪಕ ಪಾರ್ಕಿಂಗ್ ವ್ಯವಸ್ಥೆಗೆ ಆದ್ಯತೆ: ಸಚಿವ ರಾಮಲಿಂಗಾರೆಡ್ಡಿ

ಬೆಳಗಾವಿ: ಪ್ರತಿವರ್ಷ ಕೋಟ್ಯಂತರ ಜನರು ಭೇಟಿ ನೀಡುವ ಸವದತ್ತಿ ಯಲ್ಲಮ್ಮ ದೇವಸ್ಥಾನ ಹಾಗೂ ಯಲ್ಲಮ್ಮ ಗುಡ್ಡದ ಸಮಗ್ರ ಅಭಿವೃದ್ಧಿಗೆ ಮಾಸ್ಟರ್ ಪ್ಲ್ಯಾನ್ ರೂಪಿಸಲಾಗುವುದು ಎಂದು ಸಾರಿಗೆ ಹಾಗೂ ಮುಜರಾಯಿ ಇಲಾಖೆಯ ಸಚಿವರಾದ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.



ಸವದತ್ತಿ ಯಲ್ಲಮ್ಮ ದೇವಸ್ಥಾನಕ್ಕೆ ಸೋಮವಾರ(ಜ.9) ಭೇಟಿ ನೀಡಿ ದೇವಿ ದರ್ಶನ ಪಡೆದು ಅಧಿಕಾರಿಗಳ ಸಭೆಯನ್ನು ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ಉತ್ತರ ಕರ್ನಾಟಕದ ಅತ್ಯಂತ ಪ್ರಸಿದ್ಧ ಧಾರ್ಮಿಕ ಸ್ಥಳವಾಗಿರುವ ಸವದತ್ತಿ ಯಲ್ಲಮ್ಮ ದೇವಸ್ಥಾನಕ್ಕೆ ಕೋಟ್ಯಂತರ ಜನರು ಭೇಟಿ ನೀಡುತ್ತಾರೆ.

ಜಾತ್ರೆ ಸಂದರ್ಭದಲ್ಲಿ ಸಮರ್ಪಕ ಪಾರ್ಕಿಂಗ್ ವ್ಯವಸ್ಥೆ ಒದಗಿಸುವುದರ ಜತೆಗೆ ಲಕ್ಷಾಂತರ ಜನರಿಗೆ ಸುಗಮ ದರ್ಶನಕ್ಕೆ ಅನುಕೂಲವಾಗುವಂತೆ ಮಾಸ್ಟರ್ ಪ್ಲ್ಯಾನ್ ರೂಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ನಾಲ್ಕೈದು ಗಂಟೆಗಳ ಕಾಲ ಸರತಿ ಸಾಲಿನಲ್ಲಿ ನಿಲ್ಲುವ ಭಕ್ತಾದಿಗಳಿಗೆ ಅನುಕೂಲವಾಗುವಂತೆ ಕುಡಿಯುವ ನೀರು, ನೆರಳು, ಶೌಚಾಲಯ ವ್ಯವಸ್ಥೆ ಮತ್ತಿತರ ಮೂಲಸೌಕರ್ಯಗಳನ್ನು ಒದಗಿಸಬೇಕಾಗುತ್ತದೆ. ಇವೆಲ್ಲವುಗಳನ್ನು ಗಮನದಲ್ಲಿಟ್ಟುಕೊಂಡು ಯೋಜನೆ ರೂಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಮುಜರಾಯಿ ಹಾಗೂ ಪ್ರವಾಸೋದ್ಯಮ ಇಲಾಖೆಗಳ ವತಿಯಿಂದ ಅಭಿವೃದ್ಧಿ ಕಾಮಗಾರಿಗಳಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ.

ಮುಜರಾಯಿ ಇಲಾಖೆಗೆ ಸಂಬಂಧಿಸಿದಂತೆ ಲಭ್ಯವಿರುವ 87 ಎಕರೆ ಪ್ರದೇಶದಲ್ಲಿ ಮುಂದಿನ ಹತ್ತು ವರ್ಷಗಳ ಅವಧಿಯಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸಬಹುದಾದ ಸಮಗ್ರ ಯೋಜನೆ ರೂಪಿಸಲಾಗುವುದು ಎಂದು ಹೇಳಿದರು.

ದೇವಸ್ಥಾನವು ಪ್ರತಿವರ್ಷ ಅಂದಾಜು ರೂ. 20 ಕೋಟಿ ಆದಾಯ ಹೊಂದಿದೆ. ಈ ಆದಾಯದಲ್ಲಿ ದೇವಸ್ಥಾನ ನಿರ್ವಹಣೆ ಬಳಿಕ ಉಳಿಯುವ ಹಣವನ್ನು ಮಾಸ್ಟರ್ ಪ್ಲ್ಯಾನ್ ಅನುಷ್ಠಾನಕ್ಕೆ ಬಳಸಬಹುದಾಗಿದೆ. ಇದಲ್ಲದೇ ಸರಕಾರದಿಂದಲೂ ಹೆಚ್ಚಿನ ಅನುದಾನ ಬಿಡುಗಡೆ ಮಾಡಬಹುದು ಎಂದು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ಇದಲ್ಲದೇ ಪ್ರವಾಸೋದ್ಯಮ ಇಲಾಖೆಯ ವತಿಯಿಂದಲೂ ಪ್ರತ್ಯೇಕ ಯೋಜನೆಯನ್ನು ಕೂಡ ರೂಪಿಸುವ ಮೂಲಕ ಒಟ್ಟಾರೆ ಸವದತ್ತಿ ಯಲ್ಲಮ್ಮ ಕ್ಷೇತ್ರದ ಅಭಿವೃದ್ಧಿಗೆ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಇದಕ್ಕೂ ಮುಂಚೆ ನಡೆದ ಅಧಿಕಾರಿಗಳ ಸಭೆಯಲ್ಲಿಮಾತನಾಡಿದ ಸವದತ್ತಿ ಶಾಸಕರಾದ ವಿಶ್ವಾಸ್ ವೈದ್ಯ, 'ಯಲ್ಲಮ್ಮ ದೇವಿ ದೇವಸ್ಥಾನದ ಒಳಹೋಗಲು ಒಂದು ದ್ವಾರ ಮಾತ್ರ ತೆರೆಯಲಾಗಿದೆ. ಆದರೆ, ಗುಡ್ಡಕ್ಕೆ ಬರುವ ಭಕ್ತರ ಸಂಖ್ಯೆ ಹೆಚ್ಚುತ್ತಿರುವುದರಿಂದ ನಾಲ್ಕೂ ದ್ವಾರಗಳನ್ನು ತೆರೆದು ಅನುಕೂಲ ಕಲ್ಪಿಸಬೇಕು. ಭಕ್ತರು ಸುಲಭವಾಗಿ ದರ್ಶನ ಪಡೆಯಲು ಅನುಕೂಲವಾಗುವಂತೆ ದೇವಸ್ಥಾನದ ಎರಡು ಕಡೆ ಕಾಲುಸೇತುವೆ ನಿರ್ಮಿಸಬೇಕು. ಭಕ್ತರ ಸಂಖ್ಯೆಗೆ ಅನುಗುಣವಾಗಿ ಹೆಚ್ಚಿನ ಮೂಲಸೌಕರ್ಯ ಒದಗಿಸಬೇಕು' ಎಂದು ಸಲಹೆ ನೀಡಿದರು. ಶಾಸಕ ವಿಶ್ವಾಸ್ ವೈದ್ಯ, ಮುಜರಾಯಿ ಇಲಾಖೆಯ ಆಯುಕ್ತರಾದ ಬಸವರಾಜೇಂದ್ರ, ಯಲ್ಲಮ್ಮ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಪಿ.ಬಿ.ಮಹೇಶ್, ಲೋಕೋಪಯೋಗಿ ಇಲಾಖೆ, ನಿರ್ಮಿತಿ ಕೇಂದ್ರ ಸೇರಿದಂತೆ ವಿವಿಧ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಲೈಂಗಿಕ ಕಿರುಕುಳ ಆರೋಪ ; ಪ್ರೊಫೆಸರ್ ವಿರುದ್ಧ ಸಿಎಂಗೆ ಪತ್ರ ಬರೆದ 500ಕ್ಕೂ ಹೆಚ್ಚು ವಿದ್ಯಾರ್ಥಿನಿಯರು

500 ಕ್ಕೂ ಹೆಚ್ಚು ವಿದ್ಯಾರ್ಥಿನಿಯರು, ಪ್ರೊಫೆಸರ್ ಒಬ್ಬರು ಹಲವು ದಿನಗಳಿಂದ ಲೈಂಗಿಕ ಕಿರುಕುಳ ನೀಡುತ್ತಿರುವುದಾಗಿ ಆರೋಪಿಸಿದ ಘಟನೆ ನಡೆದಿದೆ ಎಂದು ವರದಿಯಿಂದ ತಿಳಿದು ಬಂದಿದೆ.



ಗುರುಗಾಂವ್'ನ ಸಿರ್ಸಾದ ಚೌಧರಿ ದೇವಿಲಾಲ್ ವಿಶ್ವವಿದ್ಯಾನಿಲಯದ ಪ್ರೊಫೆಸರ್ ವಿರುದ್ಧ ಇಂತದ್ದೊಂದು ಆರೋಪ ಕೇಳಿಬಂದಿದೆ.

500ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಹರಿಯಾಣ ಮುಖ್ಯಮಂತ್ರಿ ಮನೋಹರಲಾಲ್ ಖಟ್ಟರ್, ಅಲ್ಲಿನ ರಾಜ್ಯಪಾಲರು ಹಾಗೂ ಮಹಿಳಾ ಆಯೋಗಕ್ಕೆ ಪತ್ರ ಬರೆದು ಆಪಾದಿಸಿದ್ದಾರೆ.

ಪ್ರೊಫೆಸರ್ ವಿರುದ್ಧ ವಿದ್ಯಾರ್ಥಿನಿಯರನ್ನು ಅಸಭ್ಯವಾಗಿ ನಡೆಸಿಕೊಳ್ಳಲಾಗುತ್ತಿತ್ತು ಎಂದು ಆಪಾದಿಸಲಾಗಿದೆ.

"ನಮ್ಮನ್ನು ತಮ್ಮ ಕಚೇರಿಯ ಬಾತ್ ರೂಂ ಗೆ ಕರೆಸಿಕೊಂಡು ಅಸಭ್ಯವಾಗಿ ಸ್ಪರ್ಶಿಸಲಾಗುತ್ತಿತ್ತು ನಾವು ಪ್ರತಿಭಟಿಸಿದರೆ, ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂಬ ಬೆದರಿಕೆ ಹಾಕುತ್ತಿದ್ದರು" ಎಂದು ಆಪಾದಿಸಲಾಗಿದೆ.

ಇನ್ನು ಈ ಪತ್ರ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ದೂರಿನ ಬಗ್ಗೆ ತನಿಖೆ ನಡೆಸಲು ವಿಶೇಷ ತನಿಖಾ ತಂಡ ರಚನೆ ಮಾಡಲಾಗಿದೆ.

ಇದು ವಿದ್ಯಾರ್ಥಿನಿಯರು ಬರೆದ ನಾಲ್ಕನೇ ಪತ್ರವಾಗಿದ್ದು, ವಿಶ್ವವಿದ್ಯಾನಿಲಯದ ಆಂತರಿಕ ದೂರು ಸಮಿತಿ ಎರಡು ಬಾರಿ ಈ ಬಗ್ಗೆ ಪ್ರೊಫೆಸರ್ ಗೆ ಕ್ಲೀನ್ ಚಿಟ್ ನೀಡಿದೆ.

ಪ್ರಾಥಮಿಕ ತನಿಖೆ ನಡೆಸಿದ ಬಳಿಕವಷ್ಟೇ ಎಫ್ಐಆರ್ ದಾಖಲಿಸಲು ಸಾಧ್ಯ ಎಂದು ವರದಿಯಾಗಿದೆ.

## ವ್ಯಕ್ತಿ ನಾಪತ್ತೆ

ಬೆಳಗಾವಿ: ಬೆಳಗಾವಿಯ ಮಶಾನ ರೋಡ, ಸಾಗರ ನಗರ, ಕೆ.ಎಚ್. ಕಂಗ್ರಾಳಿ ನಿವಾಸಿಯಾದ ರಾಜು ಕೋಟೇಶ್ವರ ಪಾಟೀಲ (55) ಇವರು ಡಿಸೆಂಬರ 21, 2023 ರಂದು ರಾತ್ರಿ 12 ಗಂಟೆಗೆ ಯಾರಿಗೂ ಹೇಳದೆ ಮನೆಯಿಂದ ಹೋದವರು ಮರಳಿ



ಬಂದಿರುವುದಿಲ್ಲ ಎಂದು ಇತನ ಹೆಂಡತಿ ಸಕ್ಕುಬಾಯಿ ರಾಜು ಪಾಟೀಲ ಅವರು ಎ.ಪಿ.ಎಮ್.ಸಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. **ಕಾಣೆಯಾದ ವ್ಯಕ್ತಿಯ ವಿವರ:**ಎತ್ತರ 6 ಘೂಟ, ಸದೃಢ ಮೈಕಟ್ಟು, ಗೋದಿ ಮೈಬಣ್ಣ ಹೊಂದಿದ್ದು, ಹಾಗೂ ಕನ್ನಡ, ಮರಾಠಿ, ಹಿಂದಿ ಭಾಷೆ ಮಾತನಾಡುತ್ತಾನೆ. ಸದರಿ ವ್ಯಕ್ತಿಯ ಬಗ್ಗೆ ಮಾಹಿತಿ ದೊರೆತಲ್ಲಿ ಬೆಳಗಾವಿ ನಗರ ಪೊಲೀಸ್ ಆಯುಕ್ತರು ಅಥವಾ ಪೊಲೀಸ್ ಇನ್ಸಪೆಕ್ಟರ್ ಎ.ಪಿ.ಎಮ್.ಸಿ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 0831-2405250, ಮೊ.ನಂ; 9480804106, 9480804047 ಗೆ ಸಂಪರ್ಕಿಸಬಹುದು ಎಂದು ಠಾಣಾಧಿಕಾರಿಗಳು ತಿಳಿಸಿದ್ದಾರೆ.

## ಜ.9 ರಂದು ಜಿಲ್ಲೆಗೆ ಕ.ರಾ.ಮ.ಹ.ರ. ಆಯೋಗದ ಸದಸ್ಯ ಶೇಖರಗೌಡ ಭೇಟಿ

ಧಾರವಾಡ: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶೇಖರಗೌಡ ರಾಮತ್ನಾಳ ಅವರು ಜನವರಿ 9 ಮತ್ತು 10 ರಂದು ಧಾರವಾಡದ ಜಿಲ್ಲೆಗೆ ಭೇಟಿ ನೀಡಲಿದ್ದಾರೆ.

ಅವರು ಜನವರಿ 9 ರಂದು ಆಲೂರು ವೆಂಕಟರಾವ್ ಭವನದಲ್ಲಿ ಆಯೋಜಿಸಿರುವ ತರಬೇತಿ ಕಾರ್ಯಗಾರವನ್ನು ಉದ್ಘಾಟಿಸುವರು. ಮಧ್ಯಾಹ್ನ 12 ರಿಂದ 1:30ರವರೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಭೇಟಿ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದಲ್ಲಿ ಮಕ್ಕಳ ಸಮಸ್ಯಗಳ ಕುರಿತು ದೂರುಗಳನ್ನು ಸ್ವೀಕರಿಸಿ, ಸಂಜೆ ವಿವಿಧ ಸರ್ಕಾರಿ ಸಂಸ್ಥೆಗಳಿಗೆ ಭೇಟಿ ನೀಡುವರು.

ಜನವರಿ 10 ರಂದು ಮಕ್ಕಳ ಹಕ್ಕುಗಳ ಕುರಿತು ವಿವಿಧ ಸಮಿತಿಗಳ ಜೊತೆಗೆ ಧಾರವಾಡ ಮತ್ತು ಹುಬಳ್ಳಿಯಲ್ಲಿ ಪ್ರತ್ಯೇಕವಾಗಿ ಪ್ರಗತಿ ಪರಿಶೀಲನಾ ಸಭೆಯನ್ನು ಜರುಗಿಸುವರು ಎಂದು ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೋಷಯುಕ್ತ ಸ್ಲೀವ್ ಕಟಿಂಗ್ ಮಶೀನ್ ಪೂರೈಸಿದ ಬೆಂಗಳೂರಿನ ರಾಶಿ ಅಸೋಶಿಯೇಟ್ಸ್ಗೆ ದಂಡ ವಿಧಿಸಿ, ಪರಿಹಾರ ನೀಡಲು ಆದೇಶ

ಧಾರವಾಡ: ಮಾಳಮಡ್ಡಿ ನಿವಾಸಿ ಅಶ್ವಿನ್ಕುಮಾರ ಘಾರ್ಗಿ ಎಂಬುವವರು ಅಕ್ಯೂರಾ ಇಂಜಿನಿಯರಿಂಗ್ ಎಂಟರ್ಪ್ರೈಜಸ್ನ ಮಾಲೀಕರಾಗಿದ್ದು ಅವರು ರಬ್ಬರ್ ಮತ್ತು ಪ್ಲಾಸ್ಟಿಕ್ ಉತ್ಪನ್ನಗಳ ತಯಾರಕರಾಗಿರುತ್ತಾರೆ. ಅವರು ತಮ್ಮ ಉತ್ಪನ್ನಗಳ ತಯಾರಿಕೆಯನ್ನು ವೃದ್ಧಿಸುವ ನಿಟ್ಟಿನಲ್ಲಿ ರಕ್ಷಣಾ ಪ್ಲಾಸ್ಟಿಕ್ ಕ್ಯಾಪ್ಸಗಳನ್ನು ಸ್ಲೀವ್ ಕಟಿಂಗ್ ಮಶೀನ್ ಸಹಾಯದಿಂದ ತಯಾರಿಸಲು ಯೋಜನೆಯನ್ನು ರೂಪಿಸಿದ್ದರು. ಸದರಿ ಸ್ಲೀವ್ ಕಟಿಂಗ್ ಮಶೀನ್ಗಾಗಿ ಇಂಟರ್ನೆಟ್ನಲ್ಲಿ ಹುಡುಕುತ್ತಿದ್ದಾಗ ಎದುರುದಾರ ಬೆಂಗಳೂರಿನ ರಾಶಿ ಅಶೋಸಿಯೆಟ್ಸ್ ಆ ಮಶೀನುಗಳನ್ನು ತಯಾರಿಸುತ್ತಿರುವುದು ತಿಳಿಯಿತು. ನಂತರ ಉಭಯತರು ಮಾತುಕತೆ ನಡೆಸಿ ರೂ.92,934/- ಕಿಮ್ಮತ್ತಿನ ಮಶೀನನ್ನು ದಿ:10/06/2022 ರಂದು ಕಳುಹಿಸಿದರು.

ಈ ಬಗ್ಗೆ ದೂರುದಾರ ರೂ.80 ಸಾವಿರ ಅಡವಾನ್ಸ್ ಕೊಟ್ಟಿದ್ದರು. ನಂತರ ಎದುರುದಾರರು ವೀಡಿಯೊಕಾಲ್ನಲ್ಲಿ ನೀಡಿದ ಸೂಚನೆಗಳ ಮೇರೆಗೆ ದೂರುದಾರ ಸದರಿ ಮಶೀನ್ ಇನ್ಸ್ಟಾಲ್ ಮಾಡಲು ಪ್ರಯತ್ನಿಸಿದರು.ಆದರೆ ಆ ಮಶೀನ್ ಇನ್ಸ್ಟಾಲ್ ಮಾಡಿಅದನ್ನು ಚಾಲು ಮಾಡಲಾಗಲಿಲ್ಲ. ಅದರಲ್ಲಿ ನ್ಯೂನ್ಯತೆಗಳು ಕಂಡುಬಂದವು. ಅದನ್ನು ಸರಿಪಡಿಸಲು ವಿನಂತಿಸಿದರೂ ಎದುರುದಾರರು ಸರಿಪಡಿಸಲಿಲ್ಲ. ಕೊನೆಗೆ ದಿ.05/09/2022 ರಂದು ಎದುರುದುದಾರರ ವಿನಂತಿ ಮೇರೆಗೆ ದೂರುದಾರ ಸದರಿ ಮಶೀನನ್ನು ವಿ.ಆರ್.ಎಲ್ ಮೂಲಕ ಬೆಂಗಳೂರಿಗೆ ವಾಪಸ್ಸು ಕಳುಹಿಸಿದರು. ಮೂರು ತಿಂಗಳಾದರೂ ಸದರಿ ಮಶೀನ್ ರಿಪೇರಿ ಆಗದೆ ಇದ್ದಾಗ ದೂರುದಾರ ತಾನು ಆ ಮಶೀನು ಖರೀದಿಸಲು ನೀಡಿದಒಟ್ಟು ರೂ.80,000/-ಗಳನ್ನು ಶೇ.18% ಬಡ್ಡಿ ಸಮೇತ ಹಿಂದಿರುಗಿಸಲು ಎದುರುದಾರರಿಗೆ ಕೇಳಿಕೊಂಡರು. ಆದರೆ ಎದುರುದಾರ ಅವರ ಕೋರಿಕೆಯನ್ನು ಪರಿಗಣಿಸಲಿಲ್ಲ.

ಹಾಗಾಗಿ ಎದುರುದಾರ ರಾಶಿ ಅಸೋಶಿಯೆಟ್ಸ್ ರವರುತನಗೆ ಮಶೀನು ರಿಪೇರಿ ಮಾಡಿಕೊಡದೇ ಅಥವಾ ಹಣವನ್ನು ಹಿಂದಿರುಗಿಸದೇ ಮೋಸ ಮಾಡಿದ್ದಾರೆ ಅಂತಾದೂರಿದರು. ಅವರ ಈ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತ ಹೇಳಿ ದೂರುದಾರ ರಾಶಿ ಅಸೋಶಿಯೆಟ್ಸ್ ವಿರುದ್ಧ ಸೂಕ್ತ ಕ್ತಮ ಕೈಗೊಳ್ಳುವಂತೆ ದಿ.09/03/2023 ರಂದು ಈ ದೂರನ್ನು ಧಾರವಾಡ ಜಿಲ್ಲಾಗ್ರಾಹಕರ ಆಯೋಗಕ್ಕೆ ಸಲ್ಲಿಸಿದ್ದು ಇರುತ್ತದೆ.

ಸದರಿದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ.ಕ.ಭೂತೆ, ಸದಸ್ಯರಾದ ವಿಶಾಲಾಕ್ಷಿ.ಅ. ಬೋಳಶೆಟ್ಟಿ ಹಾಗೂ ಶ್ರೀ.ಪ್ರಭು .ಸಿ ಹಿರೇಮಠ ದೂರುದಾರ ರಿಂದ ರೂ.80,000/- ಪಡೆದು ಅವರಿಗೆ ದೋಷಯುಕ್ತ ಸ್ಲೀವ್ ಕಟಿಂಗ್ ಮಶೀನ್ ಪೂರೈಸಿರುವುದು ಸಾಕ್ಷಾಧಾರಗಳಿಂದ ರುಜುವಾತು ಆಗಿದೆ. ಹಣ ಪಡೆದು ಎದುರದಾರರು ದೋಷರಹಿತ ಮಶೀನ್ ಮಾರಾಟ ಮಾಡುವುದು ಅವರ ಕರ್ತವ್ಯವಾಗಿದೆ. ಆದರೆ ಎದುರುದಾರರು ದೋಷಪೂರಿತ ಮಶೀನ್ ಸರಬರಾಜು ಮಾಡಿ ವ್ಯಾಪಾರದ ಅನುಚಿತ ವರ್ತನೆ ತೋರಿ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನ್ಯತೆ ಎಸಗಿದ್ದಾರೆ ಅಂತಾ ಆಯೋಗ ಅಭಿಪ್ರಾಯ ಪಟ್ಟುತೀರ್ಪು ನೀಡಿರುತ್ತದೆ.

ದೂರುದಾರರಿಗೆ ತೀರ್ಪು ನೀಡಿದಒಂದು ತಿಂಗಳ ಒಳಗಾಗಿ ರೂ.80,000/-ಗಳನ್ನು ಶೇ.8% ಬಡ್ಡಿ ಸಮೇತ ಲೆಕ್ಕ ಹಾಕಿ ಕೊಡುವಂತೆ ಎದುರುದಾರ ಬೆಂಗಳೂರಿನ ರಾಶಿ ಅಸೋಸಿಯೆಟ್ಸ್ಗೆ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲ ಮತ್ತು ಮಾನಸಿಕ ಹಿಂಸೆಗಾಗಿ ರೂ.50,000/- ಮತ್ತು ಪ್ರಕರಣದಖರ್ಚು ವೆಚ್ಚ ಅಂತಾ ರೂ.10 ಸಾವಿರ ಎದುರುದಾರರಿಗೆ ಕೊಡಲು ಆದೇಶಿಸಿದೆ.

## ಸಮಾಜ ಕಲ್ಯಾಣ ಇಲಾಖೆ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶ

ಧಾರವಾಡ: ಸಮಾಜ ಕಲ್ಯಾಣ ಇಲಾಖೆಯಿಂದ 2023-24ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇ-ಆಡಳಿತ ಇಲಾಖೆ ಅಭಿವೃದ್ಧಿ ಪಡಿಸಿರುವ ಎಸ್ಎಸ್ಪಿ ಪೋರ್ಟಲ್ನಲ್ಲಿ ಡಿಬಿಟಿ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ.

2023-24ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ ಆನ್ಲೈನ್ನಲ್ಲಿ ನಿಗಧಿತ ಸಮಯದಲ್ಲಿ ಅರ್ಜಿ ಸಲ್ಲಿಸದೇ ಇರುವ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಹಿತದೃಷ್ಟಿಯಿಂದ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರನ್ನು ದೂ.ಸಂ. 0836-2447201, 2440194, 2278066, 08370-284159, 08304-290464,08380-229937 ಗೆ ಸಂಪರ್ಕಿಸಹುದೆಂದು ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಹಿತ್ಯ,ಸಾಂಸ್ಕೃತಿಕ ಚಟುವಟಿಕೆಗಳು ನಿರಂತರವಾಗಿ ಜರುಗಲಿ: ಆನೆಗುಂದಿ

ಶಹಾಪುರ : ಪ್ರಸ್ತುತ ತಂತ್ರಜ್ಞಾನದ ದಿನಮಾನಗಳ ಒತ್ತಡ ಬದುಕಿನಲ್ಲಿ ಸಾಹಿತ್ಯ ಸಂಗೀತ ಮತ್ತು ಸಂಸ್ಕೃತಿಯನ್ನು ಮೈಗೂಡಿಸಿಕೊಂಡು ಸಮಾಜದ ಓರೆ ಕೋರೆಗಳನ್ನು ತಿದ್ದುವಂತ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಿರಂತರವಾಗಿ ಜರುಗಲಿ ಎಂದು ಹಿರಿಯ ಮುಖಂಡರಾದ ಸಿದ್ಧಲಿಂಗಣ್ಣ ಆನೆಗುಂದಿ ಹೇಳಿದರು.

ನಗರದ ಶ್ರೀಮತಿ ಸುಮಿತ್ರಾ ಪತ್ತಾರ ಸ್ಮಾರಕ ರಂಗಮಂದಿರದಲ್ಲಿ ಸಗರದ ಕಲಾನಿಕೇತನ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರುಗಳ ಸಹಯೋಗದಲ್ಲಿ ಸಾಹಿತ್ಯೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಈ ಟ್ರಸ್ಟ್ ಹಲವಾರು ಪ್ರತಿಭೆಗಳಿಗೆ ವೇದಿಕೆ ಕಲ್ಪಿಸಿಕೊಟ್ಟು ಸಾಂಸ್ಕೃತಿಕ ಕಾಳಜಿ ಮೆರೆಯುತ್ತಿದೆ ಎಂದು ಸಂತೋಷ



ವ್ಯಕ್ತಪಡಿಸಿದರು.

ಹೊಸ ತಲೆಮಾರಿನ ಯುವಕರಲ್ಲಿ ಉತ್ತಮ ಸಾಹಿತ್ಯ ಕೃತಿಗಳನ್ನು ಓದುವ ಹವ್ಯಾಸ ರೂಡಿಸಿಕೊಳ್ಳಬೇಕು ಜೊತೆಗೆ ಐತಿಹಾಸಿಕ ಪರಂಪರೆಯನ್ನು ಅರಿತುಕೊಳ್ಳಬೇಕಾಗಿದೆ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಸಿದ್ದರಾಮ ಹೊನಕಲ್ ಲೇಖಕಿ ಸುರಯ್ಯ ಹಾದಿಮನಿ ರಚಿಸಿದ "ಮನದಂಗಳದಿ" ಎಂಬ ಕೃತಿಯನ್ನು ಬಿಡುಗಡೆಗೊಳಿಸಿ ಮಾತನಾಡಿದರು. ಇಷ್ಟಪಟ್ಟು ಓದುವ ಪುಸ್ತಕ ಒಬ್ಬ ವ್ಯಕ್ತಿಯ ವ್ಯಕ್ತಿತ್ವವನ್ನು ಎತ್ತರಕ್ಕೆ ಕೊಂಡೊಯ್ಯುತ್ತದೆ ಎಂದು ನುಡಿದರು.

ಸಾಮರಸ್ಯದ ಜೊತೆಗೆ ಸಮಾಜಕ್ಕೆ ಮೌಲ್ಯಯುತದ ಸಾಹಿತ್ಯ ಬರಹಗಳು ಈ ಕೃತಿಯಲ್ಲಿ ಅಡಗಿವೆ,ಅಲ್ಲದೆ ಅರಿವಿನ ವಿಸ್ತಾರತೆಗೆ ಹಿಡಿದ ಕೈಗನ್ನಡಿಯಾಗಿದೆ,ಯುವ ಸಮೂಹ ಸನ್ಮಾರ್ಗದಲ್ಲಿ ಮುನ್ನಡೆಸುವ ಸಮಗ್ರ ಬರಹಗಳು ಓದುಗರಿಗೆ ತಲುಪಿಸುವ ನಿಟ್ಟಿನಲ್ಲಿ ಅತ್ಯಂತ ಅರ್ಥಗರ್ಭಿತವಾಗಿ ರಚಿಸಿದ್ದಾರೆ ಎಂದು ಹಿರಿಯ ಸಾಹಿತಿ ಶಿವಣ್ಣಇಜೇರಿ ಕೃತಿ ಕುರಿತು ಮಾತನಾಡಿದರು.

ಈ ಸಮಾರಂಭದ ವೇದಿಕೆಯ ಮೇಲೆ,ಲೇಖಕಿ ಸುರಯ್ಯಾ ಹಾದಿಮನಿ,ಶಹಪುರ ಬಸ್ ಘಟಕ ವ್ಯವಸ್ಥಾಪಕರಾದ ಅಕ್ಬರ್ ಭಾಷಾ ಹೊಟಗಿ,ಮುಖ್ಯ ಗುರುಗಳಾದ ಶೈಲಾ ಪತ್ತಾರ,ಹಾಗೂ ಇತರರು ಉಪಸಿತರಿದ್ದರು,ಸುಮಿತ್ರಾ ಪತ್ತಾರ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ರವೀಂದ್ರ ಪತ್ತಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದರು,

ನಂತರದಲ್ಲಿ ಬೂದಯ ಹಿರೇಮಠ ಅವರಿಂದ ಶಾಸ್ತ್ರೀಯ ಸಂಗೀತ,ನಿಂಗಣ್ಣ ಹತ್ತಿಗುಡೂರ ಇವರಿಂದ ಸುಗಮ ಸಂಗೀತ,ಸ್ವಾತಿ ಕಲಬುರಗಿ ಇವರಿಂದ ತತ್ವಪದಗಳು,ಬಸವರಾಜ ಹಯ್ಯಾಳ ಇವರಿಂದ ಜಾನಪದ ಸಂಗೀತ, ಚಂದ್ರಕಲಾ ಪ್ರಲ್ಹಾದ ಅವರಿಂದ ಭಾವಗೀತೆ,ಸವಿತಾ ಶಹಪುರ ಅವರಿಂದ ವಚನ ಗಾಯನ,ಗಂಗಮ್ಮ ಮತ್ತು ತಂಡದವರಿಂದ ಸಂಪ್ರದಾಯ ಪದಗಳು ಹಾಗೂ ಲಕ್ಷ್ಮಿ ಕುಂಬಾರ ನೃತ್ಯ ತಂಡ ಶಹಪುರ ವತಿಯಿಂದ ಸಮೂಹ ಭರತನಾಟ್ಯ,ಶಿಲ್ಪಾ ಮಂಗಳೂರು ತಂಡದ ವತಿಯಿಂದ ಸಮೂಹ ನೃತ್ಯಗಳ ಜೊತೆಗೆ ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು,ನಂತರದಲ್ಲಿ ಎಲ್ಲಾ ಕಲಾವಿದರಿಗೆ ಸನ್ಮಾನಿಸಿ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಟ್ರಸ್ಟ್ ಅಧ್ಯಕ್ಷ ಬಸವರಾಜ ಸಿನ್ನೂರ ಪ್ರಾಸ್ತಾವಿಕ ನುಡಿಗಳಾಡಿದರು,ವಸಂತ ದೇಸಾಯಿ ,ಸ್ವಾಗತಿಸಿದರು ವಂದಿಸಿದರು.

## ಮಹಾನಗರ ಪಾಲಿಕೆ: ನಗರ ಬಡತನ ನಿರ್ಮೂಲನಾ ಕೋಶ: ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ನಗರ ಬಡತನ ನಿರ್ಮೂಲನಾ ಕೋಶದ ಮಹಾನಗರ ಪಾಲಿಕೆ ಅನುದಾನದ ಶೇ.24.10, ಶೇ.7.25 ಹಾಗೂ ಶೇ.5ರ ಯೋಜನೆ ಹಾಗೂ ಎಸ್.ಎಫ್.ಸಿ ಅನುದಾನದ ಶೇ.24.10ರ ಯೋಜನೆಯಡಿಯಲ್ಲಿ ವಿವಿಧ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಆಸಕ್ತಿಯುಳ್ಳ ಫಲಾನುಭವಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಸಣ್ಣ ಉದ್ದಿಮೆದಾರರಿಗೆ ಸಹಾಯಧನ, ಶಸ್ತ್ರ ಚಿಕಿತ್ಸೆಗೆ ಸಹಾಯಧನ, ಎಮ್.ಬಿ.ಬಿ.ಎಸ್/ಬಿ.ಇ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಖರೀದಿಗಾಗಿ, ರಾಜ್ಯ/ರಾಷ್ಟ್ರೀಯ ಮಟ್ಟದ ಕ್ರೀಡೆ/ಕಲೆ/ಸಾಂಸ್ಕೃತಿಕ ಹಾಗೂ ಇತರೇ ವ್ಯಾಸಂಗೇತರ ಚಟುವಟಿಕೆಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಹೊಲಿಗೆ ಯಂತ್ರ, ಯಂತ್ರ ಚಾಲಿತ ತ್ರಿಚಕ್ರ ವಾಹನ ಸೌಲಭ್ಯಗಳನ್ನು ಪಡೆಯಬಹುದಾಗಿದೆ.

ಯೋಜನೆಗಳಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಅರ್ಹತೆ ಹಾಗೂ ಆದ್ಯತೆಯ ಮೇರೆಗೆ ಲಭ್ಯವಿದ್ದ ಅನುದಾನಕ್ಕನುಗುಣವಾಗಿ ಅವಶ್ಯಕವಿದ್ದಲ್ಲಿ ಸ್ಥಳ ಪರಿಶೀಲನೆಯೊಂದಿಗೆ ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ ಸಹಾಯಧನವನ್ನು ಫಲಾನುಭವಿಗಳಿಗೆ/ಸಾಲ ನೀಡಿದ ಬ್ಯಾಂಕುಗಳಿಗೆ ನೇರವಾಗಿ ಚೆಕ್ಕುಗಳನ್ನು ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ನಗರ ಬಡತನ ನಿರ್ಮೂಲನಾ ಕೋಶದ ಅಧಿಕಾರಿಗಳು/ಸಿಬ್ಬಂದಿಗಳಿಗೆ ಸಂಪರ್ಕಿಸಲು ವಿನಂತಿಸಲಾಗಿದೆ ಹಾಗೂ ಸದರಿ ಮಾಹಿತಿಯು ಬೆಳಗಾವಿ ಮಹಾನಗರ ಪಾಲಿಕೆಯ ವೆಬ್ ಸೈಟಿನಲ್ಲಿ **www.belagavicity.mrc.gov.in** ನಲ್ಲಿ ಲಭ್ಯವಿರುತ್ತದೆ ಎಂದು ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರ್.ಸಿ.ಯು ಸ್ನಾತಕೋತ್ತರ ಪದವಿ ವಿವಿಧ ವಿಭಾಗಗಳಲ್ಲಿ ಬಾಕಿ ಸೀಟುಗಳಿಗೆ ಪ್ರವೇಶಾತಿ: ಅರ್ಜಿ ಆಹ್ವಾನ

ಬೆಳಗಾವಿ: 2023-24ನೇ ಶೈಕ್ಷಣಿಕ ಸಾಲಿನ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಸ್ನಾತಕೋತ್ತರ ವಿವಿಧ ವಿಭಾಗಗಳಲ್ಲಿ ಬಾಕಿ ಉಳಿದಿರುವ ಸ್ನಾತಕೋತ್ತರ ಕೋರ್ಸುಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಜ.9 -2024 ರಿಂದ 11-01-2024 ರ ವರೆಗೆ ಆನ್ಲೈನ್ (UUCMS) ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. **(Through UUCMS portal https://uucms.karnataka.gov.in)** ಆದ್ದರಿಂದ ಅರ್ಹ ಅಭ್ಯರ್ಥಿಗಳು ಆಸಕ್ತ ವಿಭಾಗದ ಬಾಕಿ ಉಳಿದಿರುವ ಸೀಟುಗಳ ಕುರಿತು ಸಂಬಂಧಪಟ್ಟ ಸ್ನಾತಕೋತ್ತರ ವಿಭಾಗ ಹಾಗೂ ಮಹಾವಿದ್ಯಾಲಯಗಳಿಂದ ಖಚಿತಪಡಿಸಿಕೊಂಡ ನಂತರವೇ, ಅರ್ಜಿಗಳನ್ನು ಗಗಅಒಖ ತಂತ್ರಾಂಶದ ಮೂಲಕ ಸಲ್ಲಿಸಲು ತಿಳಿಸಲಾಗಿದೆ.

ಈಗಾಗಲೇ ಅರ್ಜಿ ಸಲ್ಲಿಸಿದವರು ಪುನಃ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗಗಳಿಂದ ಹಾಗೂ ಮಹಾವಿದ್ಯಾಲಯಗಳಿಂದ ಪಡೆಯಬಹುದಾಗಿದೆ ಎಂದು ಆರ.ಸಿ.ಯು ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಲಾಶಯಗಳಲ್ಲಿ ನೀರಿನ ಪ್ರಮಾಣ ಕೊರತೆಯಿರುವುದರಿಂದ ಮಿತವಾಗಿ ನೀರು ಬಳಸಲು ಕೋರಿಕೆ

ಬೆಳಗಾವಿ: ಬೆಳಗಾವಿ ನಗರಕ್ಕೆ ನೀರು ಸರಬರಾಜು ಮಾಡುವ ಹಿಡಕಲ್ ಜಲಾಶಯ ಹಾಗೂ ರಕ್ಕಸಕೊಪ್ಪದಲ್ಲಿ ನೀರಿನ ಸಂಗ್ರಹದ ಪ್ರಮಾಣ ಮಳೆ ಇಲ್ಲದೆ ಕೊರತೆಯಾಗಿರುವುದರಿಂದ ದಿನ ನಿತ್ಯದ ನೀರಿನ ಮಟ್ಟ ಇಳಿಕೆಯಾಗುತ್ತಿರುವುದರಿಂದ ಬೇಸಿಗೆ ಕಾಲದಲ್ಲಿ ನೀರನ್ನು ಬೇಡಿಕೆಗೆ ಅನುಗುಣವಾಗಿ ಪೂರೈಸಲು ತೊಂದರೆಯಾಗಬಹುದಾಗಿದೆ.

ಆದಕಾರಣ ಸಾರ್ವಜನಿಕರು ಈಗಿನಿಂದಲೇ ಮಿತವಾಗಿ ನೀರನ್ನು ಬಳಸಿ, ನೀರನ್ನು ಪೋಲು ಮಾಡದಿರಿ. ಬರುವ ಬೇಸಿಗೆಯನ್ನು ಎದುರಿಸಲು ಮಹಾನಗರ ಪಾಲಿಕಗೆ ಸಹಕರಿಸಿ ಎಂದು ಮಹಾನಗರ ಪಾಲಿಕೆಯ ಪರವಾಗಿ ಕೆಯುಐಡಿಎಫ್‌ಸಿ ಅಧೀಕ್ಷಕ ಅಭಿಯಂತರರಾದ ಅಶೋಕ ಬುರಕುಲೆರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುಟ್ಟುಹಬ್ಬ ಅಂದರೆ ಅಸಹ್ಯಪಡುವಂತಾಗಿದೆ: ನಟ ಯಶ್

ಗದಗ: ರಾಕಿಂಗ್ ಸ್ಟಾರ್ ಯಶ್ ಹುಟ್ಟುಹಬ್ಬಕ್ಕೆ ಬ್ಯಾನರ್ ಕಟ್ಟುವಾಗ ಕರೆಂಟ್ ಶಾಕ್ ಹೊಡೆದು ಮೂವರು ಮೃತಪಟ್ಟಿದ್ದು ಈ ಹಿನ್ನೆಲೆಯಲ್ಲಿ ಗದಗ ಸೂರಣಗಿ ಗ್ರಾಮಕ್ಕೆ ತೆರಳಿದ ಯಶ್ ಮೃತರ ಮನೆಗೆ ತೆರಳಿ ಸಾಂತ್ವನ ಹೇಳಿದರು.

ನನ್ನ ಹುಟ್ಟುಹಬ್ಬದ ದಿನ ಕಟೌಟ್ ಕಟ್ಟುವಾಗ ಮೂವರು ಅಭಿಮಾನಿಗಳು ನಿಧನರಾದ ಘಟನೆ ತೀವ್ರ ನೋವುಂಟು ಮಾಡಿದೆ.

ಬ್ಯಾನರ್ ಹಾಕೋದು ಕಟೌಟ್ ಕಟ್ಟೋದು ಬೇಡ. ಇನ್ನುಂದೆ ಈ ರೀತಿ ಮಾಡಬೇಡಿ ಎಂದು ಅಭಿಮಾನಿಗಳಿಗೆ ಯಶ್ ಕಿವಿಮಾತು ಹೇಳಿದ್ದಾರೆ.

ಮೃತ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ನಂತರ ಮಾಧ್ಯಮಗಳ ಜೊತೆ ಮಾತನಾಡಿದ ಯಶ್, ನನ್ನ ಹುಟ್ಟುಹಬ್ಬ ಯಾಕೆ ಬರುತ್ತೋ ಅಂತ ಭಯವಾಗುತ್ತಿದೆ.

ಯಾರೂ ಈ ರೀತಿ ಮಾಡಬೇಡಿ. ಬರ್ತಡೇ ಮಾಡಬೇಡಿ ಎಂದು ಹೇಳಿದರೆ, ಬೇಸರ ಮಾಡಿಕೊಳ್ಳುತ್ತಾರೆ.



ನೀವು ಬ್ಯಾನರ್, ಕಟೌಟ್ ಹಾಕುವುದನ್ನು ನಾನು ಇಷ್ಟಪಡುವುದಿಲ್ಲ. ನನ್ನ ಮೇಲೆ ಪ್ರೀತಿ ಇದ್ದರೆ ಜವಾಬ್ದಾರಿಯಿಂದ ನಡೆದುಕೊಳ್ಳಿ ಎಂದು ಹೇಳಿದ್ದು, ಮನೆ ಮಕ್ಕಳನ್ನು ಕಳೆದುಕೊಂಡಿರುವ ಕುಟುಂಬಸ್ಥರಿಗೆ ಏನು ನೆರವು ಬೇಕೋ ಅದನ್ನು ಮಾಡುತ್ತೇನೆ ಎಂದು ಹೇಳಿದರು.

ಗದಗ ಜಿಲ್ಲೆ ಲಕ್ಷ್ಮೇಶ್ವರ ತಾಲೂಕಿನ ಸೂರಣಗಿ ಗ್ರಾಮದಲ್ಲಿ ಕಳೆದ ರಾತ್ರಿ ಕಟೌಟ್ ಕಟ್ಟುವಾಗ ವಿದ್ಯುತ್ ಶಾಕ್ನಿಂದ ಅಭಿಮಾನಿಗಳಾದ ಹನುಮಂತ ಹರಿಜನ (21), ಮುರಳಿ ನಡವಿನಮನಿ (20) ಮತ್ತು ನವೀನ್ (19) ಮೃತಪಟ್ಟಿದ್ದು ಗ್ರಾಮದಲ್ಲಿ ನೀರವ ಮೌನ ಆವರಿಸಿದೆ.

ಸೂರಣಗಿ ಗ್ರಾಮಕ್ಕೆ ಜನಸಾಗರ ಹರಿದು ಬಂದಿದೆ. ಯಶ್ ಅವರ ಆಗಮನದ ಹಿನ್ನೆಲೆಯಲ್ಲಿ ಸಾವಿರಾರು ಅಭಿಮಾನಿಗಳು ಜಮಾಯಿಸಿದ್ದಾರೆ. ಅಕ್ಕಪಕ್ಕದ ಗ್ರಾಮಸ್ಥರು ಯಶ್ ಅವರನ್ನು ನೋಡಲು ಆಗಮಿಸಿದ್ದಾರೆ. ಜನರನ್ನು ನಿಯಂತ್ರಿಸಲು ಪೊಲೀಸರು ಹರಸಹಾಸಪಟ್ಟಿದ್ದಾರೆ.

### ಕಟೌಟ್ ಗಳಿಗೆ ಸರ್ಕಾರ ನಿರ್ಬಂಧ ವಿಧಿಸಬೇಕು, ನಟರು ಸಹ ಎಚ್ಚರಿಕೆ ವಹಿಸಬೇಕು: ಆರ್ ಅಶೋಕ್



ಬೆಂಗಳೂರು: ರಾಕಿಂಗ್ ಸ್ಟಾರ್ ಯಶ್ ಹುಟ್ಟುಹಬ್ಬ ಸಂದರ್ಭದಲ್ಲಿ ಕಟೌಟ್ ಕಟ್ಟಲು ಹೋಗಿದ್ದ ಗದಗ ಜಿಲ್ಲೆಯ ಸೂರಣಗಿ ಗ್ರಾಮದ ಮೂವರು ಯುವಕರು ವಿದ್ಯುತ್ ತಂತಿ ತಲುಗಿ ಸಾವಿಗೀಡಾಗಿದ್ದು ಬಹಳ ನೋವಿನ ಸಂಗತಿ. ಇಂತಹ ಘಟನೆಗಳು ಆಗದಂತೆ ಸರ್ಕಾರ ಮತ್ತು ಚಿತ್ರನಟರು ಬಹಳ ಎಚ್ಚರಿಕೆಯನ್ನು ವಹಿಸಬೇಕು ಎಂದು ವಿಧಾನಸಭೆ ವಿರೋಧ ಪಕ್ಷ ನಾಯಕ ಆರ್ ಅಶೋಕ್ ಹೇಳಿದ್ದಾರೆ.

# ಸಾಸ್-ಪ್ಲಾಟ್‌ಫಾರ್ಮ್ ಯುನಿಕಾಮರ್ಸ್ ಇಸೊಲ್ಯೂಷನ್ಸ್ ಸೆಬಿಗೆ ಡಿಆರ್‌ಹೆಚ್‌ಪಿ ಸಲ್ಲಿಕೆ

ಹುಬ್ಬಳ್ಳಿ: ಯೂನಿಕಾಮರ್ಸ್ ಇಸೊಲ್ಯೂಷನ್ಸ್ ಲಿಮಿಟೆಡ್, ಇದು ಭಾರತದ ಅತಿದೊಡ್ಡ ಇ-ಕಾಮರ್ಸ್ ಸಕ್ರಿಯಗೊಳಿಸುವಿಕೆ ಸಾಫ್ಟ್‌ವೇರ್-ಆಸ್-ಎ-ಸರ್ವಿಸ್ ("ಸಾಸ್") ಪ್ಲಾಟ್‌ಫಾರ್ಮ್ ವಹಿವಾಟು ಪ್ರಕ್ರಿಯೆಯ ಮೌಲ್ಯದಲ್ಲಿ ಮಾರ್ಚ್ 31, 2022 ಕ್ಕೆ ಕೊನೆಗೊಂಡ ಹಣಕಾಸು ವರ್ಷದ ಆದಾಯದ ಪ್ರಕಾರ, ಪ್ರಾಥಮಿಕ ಸಾರ್ವಜನಿಕ ಕೊಡುಗೆಗಾಗಿ ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಗೆ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಹೆಚ್‌ಪಿ) ಸಲ್ಲಿಸಿದೆ.

2022 ರ ಆರ್ಥಿಕ ವರ್ಷದಲ್ಲಿ ಭಾರತದಲ್ಲಿ ಈ ವಿಭಾಗದಲ್ಲಿ ಅಗ್ರ ಐದು ಕಂಪೆನಿಗಳ ಪೈಕಿ ಯುನಿಕಾಮರ್ಸ್ ಏಕೈಕ ಲಾಭದಾಯಕ ಕಂಪನಿಯಾಗಿದೆ. 2012 ರಲ್ಲಿ ಸ್ಥಾಪಿತವಾದ ಯುನಿಕಾಮರ್ಸ್ ಕಂಪೆನಿ 2021 ರ ಹಣಕಾಸು ವರ್ಷದಿಂದ ಲಾಭಾಂಶ ಹೆಚ್ಚಿಸಿಕೊಳ್ಳುತ್ತಾ ಸಾಗಿದೆ. ಡಿಆರ್‌ಹೆಚ್‌ಪಿ ಪ್ರಕಾರ ಕಂಪನಿಯು 23 ರ ಹಣಕಾಸು ವರ್ಷ ಮತ್ತು 22 ರ ಹಣಕಾಸು ವರ್ಷದಲ್ಲಿ ಕ್ರಮವಾಗಿ 52.56% ಮತ್ತು 47.55% ಆದಾಯದ ಬೆಳವಣಿಗೆಯೊಂದಿಗೆ ಲಾಭದಾಯಕತೆ ಮತ್ತು ಬೆಳವಣಿಗೆಯ ಸ್ಥಿರ ದಾಖಲೆ ಹೊಂದಿದೆ. , ಕ್ರಮವಾಗಿ. ಸೆಪ್ಟೆಂಬರ್ 2023 ಕ್ಕೆ ಕೊನೆಗೊಂಡ ಅವಧಿಗೆ, ಯೂನಿಕಾಮರ್ಸ್ ರೂ 103.74 ಕೋಟಿಗಳ ವಾರ್ಷಿಕ ಮರುಕಳಿಸುವ ಆದಾಯ ಗಳಿಸಿದೆ.

ಈ ಕೊಡುಗೆಯು ಷೇರುದಾರ"ಮೂಲಕ 2,98,40,486 ಈಕ್ವಿಟಿ ಷೇರುಗಳನ್ನು ಒಟ್ಟುಗೂಡಿಸಿ ಒಂದು ಈಕ್ವಿಟಿ ಷೇರಿಗೆ ಒಂದು ರೂ ಮುಖಬೆಲೆಯೊಂದಿಗೆ ಮಾರಾಟದ ಕೊಡುಗೆಯನ್ನು ಒಳಗೊಂಡಿದೆ.

ಏಸ್ ವೆಕ್ಟರ್ ಲಿಮಿಟೆಡ್ ನಿಂದ 1,14,59,840 ಈಕ್ವಿಟಿ ಷೇರುಗಳನ್ನು ಮಾರಾಟದ ಕೊಡುಗೆ ಒಳಗೊಂಡಿದೆ

ಆಂಕೊರೇಜ್ ಕ್ಯಾಪಿಟಲ್ ಫಂಡ್, ಮಾಧುರಿ ಮಧುಸೂದನ್ ಕೇಲಾ, ರಿಜ್ವಾನ್ ಕೊಯಿಟಾ ಮತ್ತು ಜಗದೀಶ್ ಮೂರ್ಜಾನಿ, ದಿಲೀಪ್ ವೆಲ್ಲೋಡಿ ಮತ್ತು ಇತರರು ಸೇರಿದಂತೆ ಹೆಸರಾಂತ ಹೂಡಿಕೆದಾರರು ಇತ್ತೀಚೆಗೆ ಕಂಪನಿಯಲ್ಲಿ ಷೇರುಗಳನ್ನು ಸ್ವಾಧೀನಪಡಿಸಿಕೊಂಡಿದ್ದರು.

ಐಐಎಫ್ಎಲ್ ಸೆಕ್ಯುರಿಟೀಸ್ ಲಿಮಿಟೆಡ್ ಮತ್ತು ಸಿಎಲ್ಎಸ್ಎ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಈ ಷೇರು ಮಾರಾಟಕ್ಕೆ ರನ್ನಿಂಗ್ ಲೀಡ್ ಮ್ಯಾನೇಜರ್ ಆಗಿವೆ.

ಯೂನಿಕಾಮರ್ಸ್ ಭಾರತದಲ್ಲಿ ಮಾರ್ಕ್ಯೂ ಕ್ಲೈಂಟ್‌ಗಳ ದೊಡ್ಡ ಮತ್ತು ಬೆಳೆಯುತ್ತಿರುವ ನೆಲೆ ಒದಗಿಸುತ್ತದೆ. ಇವುಗಳಲ್ಲಿ, ಲೆನ್ಸ್‌ಕಾರ್ಟ್, ಫ್ಯಾಬಿಂಡಿಯಾ, ಜಿವಾಮೆ, ಟಿಸಿಎನ್‌ಎಸ್, ಮಾಮಾರ್ತ, ಇಮಾಮಿ, ಶುಗರ್, ಬೋಟ್, ಪೋರ್ಟ್‌ರೋನಿಕ್ಸ್, ಫಾರ್ಮಿಸಿ, ಜಿಎನ್‌ಸಿ, ಸೆಲ್ಲೋ, ಅರ್ಬನ್ ಕಂಪನಿ, ಮೆನ್ಸಾ, ಜಿಒಎಟಿ, ಶಿಪ್ರೊಕೆಟ್, ಎಕ್ಸ್‌ಪ್ರೆಸ್‌ಬೀಸ್ ಮತ್ತು ಇತರವು ಸೇರಿವೆ.

ಸೆಪ್ಟೆಂಬರ್ 30, 2023 ಕ್ಕೆ ಕೊನೆಗೊಂಡ ತ್ರೈಮಾಸಿಕದಲ್ಲಿ, ಕಂಪನಿಯು 743 ಉದ್ಯಮ ಕಕ್ಷಿದಾರರು ಮತ್ತು 2,830 ಸಣ್ಣ ಮತ್ತು ಮಧ್ಯಮ ಕಕ್ಷಿದಾರರಿಂದ 763.82 ಮಿಲಿಯನ್ ಆರ್ಡರ್ ಐಟಂಗಳನ್ನು ಪ್ರಕ್ರಿಯೆಗೊಳಿಸುವ ವಾರ್ಷಿಕ ಸರಾಸರಿ ಹೊಂದಿತ್ತು. ರೆಡ್‌ಸೀರ್ ವರದಿ ಪ್ರಕಾರ 2022 ರ ಹಣಕಾಸು ವರ್ಷದಲ್ಲಿ ಕಂಪನಿ ಭಾರತದ ಇ-ಕಾಮರ್ಸ್ ಡ್ರಾಪ್‌ಶಿಪ್ ಪರಿಮಾಣದ ಸರಿಸುಮಾರು 20-25% ಅನ್ನು ಪ್ರಕ್ರಿಯೆಗೊಳಿಸಿದೆ.

ಯುನಿಕಾಮರ್ಸ್ ತನ್ನ ಬಹುಪಾಲು ಗ್ರಾಹಕರನ್ನು ಪ್ರಾಥಮಿಕವಾಗಿ ಆಗ್ನೇಯ ಏಷ್ಯಾ ಮತ್ತು ಮಧ್ಯಪ್ರಾಚ್ಯ ಮತ್ತು ಭಾರತದ ಜೊತೆಗೆ, ಕಂಪನಿಯು ಇತರ ಆರು ದೇಶಗಳಲ್ಲಿ ಗ್ರಾಹಕರನ್ನು ಹೊಂದಿದೆ,

ಹೆಚ್ಚುತ್ತಿರುವ ಸಾಗಣೆ ಪ್ರಮಾಣಗಳು, ಬ್ರ್ಯಾಂಡ್‌ಗಳ ಹೊರಹೊಮ್ಮುವಿಕೆ, ಸಾಂಪ್ರದಾಯಿಕ ಬ್ರ್ಯಾಂಡ್‌ಗಳನ್ನು ಮುಖ್ಯ ವಾಹಿನಿಗೆ ಪರಿವರ್ತಿಸುವುದು ಮತ್ತು ಭಾರತದಲ್ಲಿ ವೇರ್‌ಹೌಸಿಂಗ್ ಉದ್ಯಮದ ವಿಸ್ತರಣೆ ಗುರಿ ಹೊಂದಿದೆ.

ಯೂನಿಕಾಮರ್ಸ್ ಕಂಪೆನಿಯನ್ನು ಅದರ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕಪಿಲ್ ಮಖಿಜಾ ನೇತೃತ್ವ ವಹಿಸಿದ್ದಾರೆ.

ಇವರ ಜತೆಗೇ ಮನೋಜ್ ಕೊಹ್ಲಿ, ಉಲ್ಲಾಸ್ ಕಾಮತ್ ಮತ್ತು ಸಾಯಿ ಚಾಹಲ್ ಅವರನ್ನು ಸ್ವತಂತ್ರ ನಿರ್ದೇಶಕರಾಗಿ ಮತ್ತು ಕುನಾಲ್ ಬಹ್ಲ್ ಮತ್ತು ರೋಹಿತ್ ಬನ್ಸಾಲ್ ಅವರನ್ನು ಕಾರ್ಯನಿರ್ವಾಹಕೇತರ ನಿರ್ದೇಶಕರಾಗಿ ಸೇರಿಸಿಕೊಳ್ಳುವ ಮೂಲಕ ಯುನಿಕಾಮರ್ಸ್ ಇತ್ತೀಚೆಗೆ ತನ್ನ ಮಂಡಳಿಯ ನಿರ್ದೇಶಕರನ್ನು ವಿಸ್ತರಿಸಿದೆ.

# ಧಾರವಾಡದ ನಗರ ಸಾರಿಗೆ ಬಸ್ ನಿಲ್ದಾಣ ಕಾಮಗಾರಿಗೆ ಶಂಕು ಸ್ಥಾಪನೆ

## ಒಂದು ವರ್ಷದಲ್ಲಿ ಬಳಕೆಗೆ ಸಿದ್ಧ: ಸಚಿವ ರಾಮಲಿಂಗಾರೆಡ್ಡಿ

ಧಾರವಾಡ: ಧಾರವಾಡದ ನಗರ ಸಾರಿಗೆಯ ನೂತನ ಸಿಬಿಟಿ ಬಸ್ ನಿಲ್ದಾಣ ನಿರ್ಮಾಣ ಕಾಮಗಾರಿಗೆ ರಾಜ್ಯ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರು ಇಂದು ಬೆಳಿಗ್ಗೆ ಧಾರವಾಡ ಸಿಬಿಟಿ ಆವರಣದಲ್ಲಿ ಶಂಕು ಸ್ಥಾಪನೆ ನೆರವೇರಿಸಿ, ಭೂಮಿ ಪೂಜೆ ಮಾಡಿದರು.

ನಂತರ ಅವರು ಮಾತನಾಡಿ, ಧಾರವಾಡ ನಗರ ಸಾರಿಗೆಯ ಸಿಬಿಟಿ ಬಸ ನಿಲ್ದಾಣಕ್ಕೆ ಅಗತ್ಯವಿರುವ ನೂತನ ಕಟ್ಟಡವನ್ನು 13.11 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ಧಾರವಾಡ ಸಿಬಿಟಿ ಬಹಳ ಹಳೆಯದಾದ ಕಟ್ಟಡಗಳನ್ನು ಹೊಂದಿದೆ. ಈಗ ಈ ನಿಲ್ದಾಣವನ್ನು ಮೇಲ್ದರ್ಜೆಗೆ ಏರಿಸಲಾಗುತ್ತಿದೆ. ಒಂದು ವರ್ಷದ ಅವಧಿಯಲ್ಲಿ ನಿಲ್ದಾಣದ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ಸೂಚನೆ ಕೊಟ್ಟಿದ್ದೇನೆ ಎಂದು ಸಚಿವರು ತಿಳಿಸಿದರು.



ನಗರ ಸಾರಿಗೆ ಸೇರಿದಂತೆ ರಾಜ್ಯದ ಅನೇಕ ಕಡೆಗಳಲ್ಲಿ ಹೆಚ್ಚುವರಿ ಬಸ್ಗಳ ಖರೀದಿ ಮಾಡಲಾಗುತ್ತಿದ್ದು, ಇದರಿಂದ ಬಸ್ಗಳ ಕೊರತೆ ನೀಗಲಿದೆ. ಅಂದಾಜು 50 ವರ್ಷಗಳ ಹಳೆಯದಾದ ಧಾರವಾಡದ ಸಿಬಿಟಿಯನ್ನು ಇದೀಗ ಮೇಲ್ದರ್ಜೆಗೆ ಏರಿಸಲಾಗುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

13.11 ಕೋಟಿ ರೂ.ಗಳಲ್ಲಿ ಧಾರವಾಡ ನಗರ ಸಾರಿಗೆ ಬಸ್ ನಿಲ್ದಾಣ ನಿರ್ಮಾಣ ಕಾಮಗಾರಿ, 23.48 ಕೋಟಿ ರೂ.ಗಳಲ್ಲಿ ಹುಬ್ಬಳ್ಳಿ ಗೋಕುಲ ರಸ್ತೆಯ ಬಸ್ ನಿಲ್ದಾಣವನ್ನು ಮೇಲ್ದರ್ಜೆಗೇರಿಸುವ ಕಾಮಗಾರಿ ಕೈಗೊಳ್ಳಲಾಗುತ್ತಿದೆ.

ಧಾರವಾಡ ನಗರ ಸಾರಿಗೆ ಬಸ್ ನಿಲ್ದಾಣ ಕಾಮಗಾರಿಯಲ್ಲಿ ಮುಖ್ಯ ಕಟ್ಟಡ, ಮಹಿಳೆಯರಿಗೆ ವಿಶ್ರಾಂತಿ ಗೃಹ, ಮಹಿಳೆಯರಿಗೆ, ಪುರುಷರಿಗೆ ಪ್ರತ್ಯೇಕವಾಗಿ ಶೌಚಾಲಯ, ಆವರಣದಲ್ಲಿ ಕಾಂಕ್ರೀಟ್ ಅಳವಡಿಸುವುದು, ಬಸ್ಗಳ ನಿಲುಗಡೆಗೆ 4 ಅಂಕಣ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ (ಆರ್.ಓ.ಪ್ಲಾಂಟ್), ವಿದ್ಯುತ್ ಕೆಲಸ, ಪ್ರಯಾಣಿಕರಿಗೆ ಕುಳಿತುಕೊಳ್ಳಲು ಆಸನದ ವ್ಯವಸ್ಥೆ, ಮುಖ್ಯ ಕಟ್ಟಡದ ನೆಲಹಾಸುಗೆ ಗ್ರಾನೈಟ್ ಅಳವಡಿಸುವುದು, ಉಪಹಾರ ಗೃಹ ಮತ್ತು ವಾಣಿಜ್ಯ ಮಳಿಗೆಗಳು, ಸಿಬ್ಬಂದಿ ವಿಶ್ರಾಂತಿ ಕೊಠಡಿ ಹಾಗೂ ಸಂಚಾರ ನಿಯಂತ್ರಣಾ ಕೊಠಡಿ, ಮೊದಲನೇ ಮಹಡಿಯಲ್ಲಿ ಕಛೇರಿ ಉಪಯೋಗಕ್ಕಾಗಿ ಕೊಠಡಿ ನಿರ್ಮಾಣ ಮಾಡಲಾಗುವುದು ಎಂದು ಅವರು ಹೇಳಿದರು.

ಕಾರ್ಮಿಕ ಸಚಿವರು ಹಾಗೂ ಧಾರವಾಡ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಮಾತನಾಡಿದರು. ಶಾಸಕ ಎನ್.ಎಚ್.ಕೋನರಡ್ಡಿ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕ ಭರತ್ ಎಸ್. ಸೇರಿದಂತೆ ವಿವಿಧ ಅಧಿಕಾರಿಗಳು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಯುವಕ ಕಾಣೆ: ಪತ್ತೆಗೆ ಮನವಿ

ಬಳ್ಳಾರಿ: ತಾಲೂಕಿನ ಕೆ.ಕೆ.ಹಾಳ್ ಗ್ರಾಮದ ವೀರೇಶ್ ಎನ್ನುವ 23 ವರ್ಷದ ಯುವಕ ನಗರದ ರೇಣುಕಾ ಬೇಕರಿಗೆ ಕೆಲಸಕ್ಕೆ ಹೋಗಿಬರುತ್ತೇನೆ ಎಂದು ಡಿ.17 ರಂದು ಹೇಳಿಹೋದವನು ಮನೆಗೆ ಬಾರದೇ ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಮೋಕ ಪೋಲಿಸ್ಠಾಣೆಯ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಕಾಣೆಯಾದ ಯುವಕನ ಚಹರೆ ಗುರುತು: ಎತ್ತರ 5.6 ಅಡಿ, ಕೋಲುಮುಖ, ಗೋಧಿ ಮೈಬಣ್ಣ ಹೊಂದಿದ್ದು, ಬಲಗೈ ಹತ್ತಿರ ಓಂ ಚಕ್ರದ ಅಚ್ಚೆ, ಮೊಣಕೈ ಕೆಳಗೆ ಆಂಜನೇಯ ದೇವರ ಅಚ್ಚೆ, ಬಲ ಮುಷ್ಟಿ ಹತ್ತಿರ ಅಮ್ಮ ಹಾಗೂ ಓಂ ಅಂತಾ ಅಚ್ಚೆ ಗುರುತು ಇರುತ್ತದೆ. ಕಾಣೆಯಾದ ಸಂಧರ್ಭದಲ್ಲಿ ಪಾಚಿ ಕಲರ್ನ ಚೆಕ್ಸ್ ಗೆರೆಗಳು ಇರುವ ತುಂಬು ತೋಳಿನ ಅಂಗಿ, ಸಿಮೆಂಟ್ ಕಲರ್ನ ಪ್ಯಾಂಟ್ನಧರಿಸಿರುತ್ತಾನೆ. ಮೇಲ್ಕಂಡ ಚಹರೆಯುಳ್ಳ ಯುವಕನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಮೋಕಾ ಪೊಲೀಸ್ ಠಾಣೆಯ ಪಿ.ಎಸ್.ಐ ಮೊ:9480803050, ದೂ:08392-293228, ಸಿರುಗುಪ್ಪ ಉಪವಿಭಾಗ ಡಿಎಸ್ಪಿ ಅವರ ಮೊ.9480803021, ಪಿಡಿ ಹಳ್ಳಿ ವೃತ್ತ ಸಿಪಿಐ ಅವರ ಮೊ.9480803031 ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸುಮಲತಾ ಬಿಜೆಪಿ ಪರವಾಗಿದ್ದರೇ ಮಾತುಕತೆ ನಡೆಸುತ್ತೇವೆ: ಹೆಚ್.ಡಿ. ಕುಮಾರಸ್ವಾಮಿ



ಬೆಂಗಳೂರು: ಸಂಸದೆ ಸುಮಲತಾ ಅವರು ಬಿಜೆಪಿಯಲ್ಲಿ ಮುಂದುವರಿಯೋದಾದರ, ಬಿಜೆಪಿ ಪರವಾಗಿದ್ದರೆ ಅವರನ್ನು ಭೇಟಿಯಾಗಿ ಲೋಕಸಭಾ ಚುನಾವಣೆ ಸಿದ್ಧತೆಗಳ ಕುರಿತು ಮಾತುಕತೆ ನಡೆಸುತ್ತೇವೆ ಎಂದು ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಸುಮಲತಾರ ಆಪ್ತ ಸಚ್ಚಿದಾನಂದ ಭೇಟಿ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಸುಮಲತಾರನ್ನೂ ಭೇಟಿ ಆಗ್ತೀವಿ. ಅವರು ಬಿಜೆಪಿಯಲ್ಲಿ ಮುಂದುವರಿಯೋದಾದರೆ, ಬಿಜೆಪಿ ಪರವಾಗಿದ್ದರೆ ಅವರನ್ನು ಭೇಟಿ ಮಾಡ್ತೀವಿ. ನಾವೇನು ಇಂತಹ ಕ್ಷೇತ್ರದಿಂದಲೇ ನಿಲ್ತೀವಿ ಅಂತ ಹೇಳಿಲ್ಲ. ಮತ್ತೊಬ್ಬರಿಗೆ ತೊಂದ್ರೆ ಕೊಟ್ಟು ನಿಲ್ಲಬೇಕೂ ಅಂತಲೂ ಇಲ್ಲ. ಯಾವುದು ಸಹ ಇನ್ನೂ ಚರ್ಚೆಯಾಗಿಲ್ಲ. ಪ್ರಾರಂಭಿಕ ಹಂತದ ಬೆಳವಣಿಗೆಗಳು ನಡೆಯುತ್ತಿವೆ. ಬಿಜೆಪಿ-ಜೆಡಿಎಸ್ನವರು ಸೌಹಾರ್ದಯುತವಾಗಿ ಕೆಲಸ ಮಾಡೋದಕ್ಕೆ ಎಲ್ಲರ ಜೊತೆಗೂ ಮಾತುಕತೆ ನಡೆಸುತ್ತೇವೆ ಎಂದು ಸ್ಪಷ್ಟಪಡಿಸಿದ್ದಾರೆ.

## ಕುಕ್ಕುಟ-ಜಾನುವಾರು ಆಹಾರ ತಯಾರಿಕಾ ಘಟಕಗಳು ಪರವಾನಗಿ ಪಡೆಯುವುದು ಕಡ್ಡಾಯ

ಶಿವಮೊಗ್ಗ: ಕುಕ್ಕುಟ (ಕೋಳಿ) ಮತ್ತು ಜಾನುವಾರು (ಪಶು) ಆಹಾರ ತಯಾರಿಕಾ ಘಟಕಗಳು ಮತ್ತು ಮಾರಾಟ ಮಾಡುವ ಅಂಗಡಿ ಮತ್ತು ಸಂಘ ಸಂಸ್ಥೆಗಳು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಸರಿಯಾದ ಗುಣಮಟ್ಟದ ಕೋಳಿ, ಜಾನುವಾರು ಆಹಾರ ಉತ್ಪಾದಿಸಲು ಮತ್ತು ಮಾರಾಟ ಮಾಡಲು ಪರವಾನಗಿ (ಲೈಸೆನ್ಸ್) ಪಡೆಯುವುದು ಕಡ್ಡಾಯವಾಗಿದೆ.

ಈಗಾಗಲೇ ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆ ಮತ್ತು ಸ್ಥಳೀಯವಾಗಿ ಕೈಗಾರಿಕಾ ಇಲಾಖೆಯಿಂದ ಪರವಾನಗಿ ಪಡೆದಿದ್ದರೂ ಕೂಡ ಕರ್ನಾಟಕ ಕುಕ್ಕುಟ, ಜಾನುವಾರು ಆಹಾರ (ತಯಾರಿಕೆ ಮತ್ತು ಮಾರಾಟ ನಿಯಂತ್ರಣ) ಆಜ್ಞೆ 1987 ರ ಪ್ರಕಾರ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಪರವಾನಗಿ ಪಡೆಯುವುದು ಕಡ್ಡಾಯವಾಗಿದೆ ಮತ್ತು ಈ ರೀತಿ ಪಡೆದ ಪರವಾನಗಿಯು ಪ್ರತಿ ವರ್ಷ ಡಿಸೆಂಬರ್-31 ಕ್ಕೆ ಮುಕ್ತಾಯವಾಗುವುದರಿಂದ ನವೀಕರಣವನ್ನು ಜನವರಿ-01 ರಿಂದ ಪಡೆಯಬೇಕಾಗಿರುತ್ತದೆ.

ಪ್ರಸ್ತುತ ವರ್ಷ 2024ನೇ ಸಾಲಿಗೆ ಕುಕ್ಕುಟ ಮತ್ತು ಜಾನುವಾರು ಆಹಾರ ಉತ್ಪಾದಕರು ಮತ್ತು ಮಾರಾಟಗಾರರು ನೂತನ ಪರವಾನಗಿ ಪಡೆಯಲು ಮತ್ತು ನವೀಕರಿಸಲು ಸೇವಾ ಸಿಂಧು ಎಂಬ ಜಾಲತಾಣವನ್ನು ಪ್ರಾರಂಭಿಸಲಾಗಿದ್ದು, ಕುಕ್ಕುಟ, ಜಾನುವಾರು ಆಹಾರ ಉತ್ಪಾದಕರು ಮತ್ತು ಮಾರಾಟಗಾರರು **evasinndhusevices.karnataka.gov.in** ಮೂಲಕ ಆನ್ಲೈನ್ನಲ್ಲಿ ಸೂಕ್ತ ದಾಖಲಾತಿಗಳನ್ನು ಅಪ್ಲೋಡ್ ಮಾಡಿ ಪರವಾನಗಿ ಪಡೆಯಲು ಕೋರಲಾಗಿದೆ.

ಪರವಾನಗಿ ಪಡೆಯದೆ ಕುಕ್ಕುಟ ಮತ್ತು ಜಾನುವಾರು ಆಹಾರ ಉತ್ಪಾದಕರು ಮತ್ತು ಮಾರಾಟಗಾರರು (ಉತ್ಪಾದನೆ ಮತ್ತು ಮಾರಾಟ ನಿಯಂತ್ರಣ) ಆಜ್ಞೆ 1987 ರ ಕಂಡಿಕೆ 8, 9(1) ಹಾಗೂ 11(1)(ಅ) ಪ್ರಕಾರ ನಿಯಮಾನುಸಾರ ಕ್ರಮವಹಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಮೀಪದ ಪಶುಪಾಲನಾ ಇಲಾಖೆಯ ಸಂಸ್ಥೆಗಳನ್ನು ಸಂಪರ್ಕಿಸಬಹುದೆಂದು ಪರವಾನಗಿ ಪ್ರಾಧಿಕಾರ ಮತ್ತು ಉಪನಿರ್ದೇಶಕರು, ಜಿಲ್ಲಾ ಪಶು ಆಸ್ಪತ್ರೆ, ಪಾಲಿಕ್ಲಿನಿಕ್, ಕುವೆಂಪು ನಗರ, ಶಿವಮೊಗ್ಗದ ಡಾ. ಬಸವೇಶ ಹೂಗಾರ -9980253737 ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಸಿತ ಭಾರತ ಸಂಕಲ್ಪ ಯಾತ್ರೆ ಯಶಸ್ವಿ: ವೈ.ಎಂ.ಸತೀಶ್

ಬಳ್ಳಾರಿ: ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳನ್ನು ಗ್ರಾಮೀಣ ಪ್ರದೇಶದ ಜನರಿಗೂ ತಲುಪಿಸುವ ನಿಟ್ಟಿನಲ್ಲಿ ವಿಕಸಿತ ಭಾರತ ಸಂಕಲ್ಪ ಯಾತ್ರೆ ಅಭಿಯಾನ ಯಶಸ್ವಿಯಾಗಿ ನಡೆಯುತ್ತಿದೆ ಎಂದು ವಿಧಾನಪರಿಷತ್ ಶಾಸಕ ವೈ.ಎಂ.ಸತೀಶ್ ಅವರು ಹೇಳಿದರು.

ಕುರುಗೋಡು ತಾಲ್ಲೂಕಿನ ಬಾದನಹಟ್ಟಿ ಗ್ರಾಮದಲ್ಲಿ ಬ್ಯಾಂಕ್ ಆಫ್ ಇಂಡಿಯಾ ಶಾಖೆ ಬಾದನಹಟ್ಟಿ ವತಿಯಿಂದ ಇತ್ತೀಚಿಗೆ ನಡೆದ ವಿಕಸಿತ ಭಾರತ ಸಂಕಲ್ಪ ಯಾತ್ರೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ನಾಗರೀಕರ ಅಭಿವೃದ್ಧಿಗೆ ನೂರಾರು ಯೋಜನೆಗಳನ್ನು ರೂಪಿಸಿದೆ. ಈ ಯೋಜನೆಗಳ ಲಾಭವನ್ನು ಪಡೆದ ಫಲಾನುಭವಿಗಳು ದೇಶದ ಪ್ರತಿ ಮನೆಯಲ್ಲೂ




ಇದ್ದಾರೆ, ಕೇಂದ್ರ ಸರ್ಕಾದ ಯೋಜನೆಗಳು ಸಮಾಜದ ಕಟ್ಟ ಕಡೆಯ ನಾಗರೀಕರಿಗೂ ತಲುಪಿಸುವುದೇ ಕೇಂದ್ರ ಸರ್ಕಾರದ ಗುರಿಯಾಗಿದೆ ಎಂದರು.

ಕೇಂದ್ರದ ಸರ್ಕಾರದ ಮುದ್ರಾಯೋಜನೆ, ಜನಧನ್ ಯೋಜನೆ, ಪಿ.ಎಂ ವಿಶ್ವಕರ್ಮ ಯೋಜನೆ, ಉಜ್ವಲ ಯೋಜನೆ, ಕೃಷಿ ಸಮ್ಮಾನ್ ಯೋಜನೆ, ಅನ್ನ ಭಾಗ್ಯ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಮಾಹಿತಿ ಎಲ್ಇಡಿ ಪರದೆಯ ವಾಹನಗಳ ಮೂಲಕ ಗ್ರಾಪಂ ಹಾಗೂ ನಗರ ಪ್ರದೇಶದಲ್ಲಿ ಸಂಚರಿಸಿ ಜನರಿಗೆ ಜಾಗೃತಿ ಮೂಡಿಸುವ ಸಲುವಾಗಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಹೇಳಿದರು.

ಡ್ರೋನ್ನಂತಹ ಸುಧಾರಿತ ತಂತ್ರಜ್ಞಾನದ ಬಳಕೆಯಾಗಬೇಕು. ನ್ಯಾನೋ ಯೂರಿಯಾ ಮತ್ತು ಇತರ ಕೀಟನಾಶಕಗಳನ್ನು ಸಿಂಪಡಿಸಲು ಕೈಗೆಟುಕುವ ದರದಲ್ಲಿ ರೈತರಿಗೆ ದೊರೆಯುತ್ತಿದೆ ಕೇಂದ್ರ ಸರ್ಕಾರದ ಯೋಜನೆಗಳನ್ನು ಅಧಿಕಾರಿಗಳು ಸಾರ್ವಜನಿಕರಿಗೆ ಸಮರ್ಪಕವಾಗಿ ತಲುಪಿಸುವ ಮೂಲಕ ಅರಿವು ಮೂಡಿಸಬೇಕು ಎಂದರು.

ನಬಾರ್ಡ್ನ ವ್ಯವಸ್ಥಾಪಕ ನಿರ್ದೇಶಕ ಯುವರಾಜ್ ಕುಮಾರ್ ಅವರು ಮಾತನಾಡಿ, ಕೆಸಿಸಿ, ಪಿಎಂಜೆಜೆಬಿವೈ, ಪಿಎಂಎಸ್ಬಿವೈ, ಎಪಿವೈ, ಪಿಎಂ ಸ್ವಾನಿಧಿ, ಪಿಎಂ ವಿಶ್ವಕರ್ಮ, ಮುದ್ರಾ ಯೋಜನೆ, ಉಜ್ವಲಾ ಯೋಜನೆ ಮುಂತಾದ ಎಲ್ಲಾ ಕೇಂದ್ರ ಸರ್ಕಾರದ ಯೋಜನೆಗಳ ಲಾಭ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ್ ಮಾತನಾಡಿ, ಸರ್ಕಾರಿ ಮತ್ತು ನೊಂದಾಯಿತ ಖಾಸಗಿ ಆಸ್ಪತ್ರೆಗಳಲ್ಲಿ ನಗದು ರಹಿತ ಚಿಕಿತ್ಸೆ ಪಡೆಯಲು ಎಲ್ಲಾ ನಾಗರಿಕರು ಆಯುಷ್ಮಾನ್ ಭಾರತ್ ಆರೋಗ್ಯ ವಿಮಾ ಕಾರ್ಡ್ ಪಡೆಯಬೇಕು ಎಂದು ತಿಳಿಸಿದರು.

ಕೇಂದ್ರ ಸರ್ಕಾರವು ಟಿಬಿ ನಿರ್ಮೂಲನಾ ಕಾರ್ಯಕ್ರಮದಡಿ ಫಲಾನುಭವಿಗಳ ಪೌಷ್ಟಿಕಾಂಶದ ವೆಚ್ಚಗಳಿಗಾಗಿ ಮಾಸಿಕ ರೂ.500 ಗಳನ್ನು ಡಿಬಿಟಿ ಮೂಲಕ ನೀಡಲಾಗುತ್ತಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಪ್ರತಿಜ್ಞಾವಿಧಿ ಭೋದಿಸಲಾಯಿತು. ಕೇಂದ್ರ ಸರ್ಕಾರದಿಂದ ಸಾರ್ವಜನಿಕರಿಗೆ ಸರ್ಕಾರದ ಯೋಜನೆಗಳ ಮಾಹಿತಿಯ ಕಿರುಪುಸ್ತಕ ಹಾಗೂ 2024 ರ ಕ್ಯಾಲೆಂಡರ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಭಾರಿ ಜಿ.ಗೋಪಾಲಕೃಷ್ಣ, ಉಕ್ಕು ಸಚಿವಾಲಯದ ಉಪ ಕಾರ್ಯದರ್ಶಿ ಜಿ.ಪಿ.ಅಧ್ಯಕ್ಷ ಸಿದ್ದೇಶ್, ಎಲ್ಡಿಎಂ ಸೋಮನಗೌಡ ಐನಾಪೂರ ಸೇರಿದಂತೆ ಗ್ರಾಪಂ ಅಧ್ಯಕ್ಷರು, ಸದಸ್ಯರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

## ಸಹಕಾರ ಬ್ಯಾಂಕ್‌ಗಳಿಂದ 439.7 ಕೋಟಿ ರೂಪಾಯಿ ಸಾಲ ಪಡೆದು ವಂಚನೆ ಆರೋಪ: ರಮೇಶ್ ಜಾರಕಿಹೊಳಿ ವಿರುದ್ಧ ಎಫ್‌ಐಆರ್ ದಾಖಲು



ಬೆಂಗಳೂರು: ಸಹಕಾರಿ ಬ್ಯಾಂಕ್‌ನಿಂದ 439.7 ಕೋಟಿ ರೂಪಾಯಿ ಸಾಲ ಪಡೆದು ಮರುಪಾವತಿ ಮಾಡದೆ ವಂಚಿಸಿದ ಆರೋಪದ ಮೇಲೆ ಮಾಜಿ ಸಚಿವ, ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಈ ಸಂಬಂಧ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ಲಿಮಿಟೆಡ್‌ನ ಪ್ರಧಾನ ವ್ಯವಸ್ಥಾಪಕ ರಾಜಣ್ಣ (56) ಅವರು ಶುಕ್ರವಾರ ದೂರು ದಾಖಲಿಸಿದ್ದಾರೆ.

ರಮೇಶ್ ಜಾರಕಿಹೊಳಿ ಅವರು ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಬೆಳಗಾವಿಯ ಸೌಭಾಗ್ಯ ಲಕ್ಷ್ಮಿ ಶುಗರ್ಸ್ ಲಿಮಿಟೆಡ್ ಸಕ್ಕರೆ ಕಾರ್ಖಾನೆಯ ಸ್ಥಾಪನೆ, ವಿಸ್ತರಣೆ ಹಾಗೂ ನಿರ್ವಹಣೆಗಾಗಿ 2013 ರಿಂದ 2017ರವರೆಗೆ ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ಮತ್ತು ಅದರ ಸಮೂಹ ಬ್ಯಾಂಕ್‌ಗಳಿಂದ ಸಾಲ ಪಡೆದಿದ್ದರು. ನಂತರ ಆ ಸಾಲ ಹಿಂದಿರುಗಿಸದೆ ವಂಚಿಸಿದ್ದಾರೆ ಎಂದು ಆರೋಪಿಸಿದ್ದಾರೆ.

ಕಾರ್ಖಾನೆಗೆ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್‌ನಿಂದ ಹಾಗೂ ಅದರ ಸಮೂಹ ಬ್ಯಾಂಕ್‌ಗಳಾದ ವಿಜಯಪುರ ಜಿಲ್ಲಾಕೇಂದ್ರ ಸಹಕಾರ ಬ್ಯಾಂಕ್, ತುಮಕೂರು ಜಿಲ್ಲಾಕೇಂದ್ರ ಸಹಕಾರ ಬ್ಯಾಂಕ್, ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ಮತ್ತು ಉತ್ತರ ಕನ್ನಡ ಜಿಲ್ಲಾಕೇಂದ್ರ ಸಹಕಾರ ಬ್ಯಾಂಕ್‌ನಿಂದ 2013ರ ಜುಲೈನಿಂದ 2017ರ ಮಾರ್ಚ್‌ವರೆಗೆ ಹಂತ- ಹಂತವಾಗಿ 232 ಕೋಟಿ ರೂ. ಸಾಲ ಪಡೆಯಲಾಗಿದೆ. ನಂತರ ಸಾಲ ಕಟ್ಟಿಲ್ಲ. ಅಸಲು ಮತ್ತು ಬಡ್ಡಿ ಸೇರಿ 2023ರ ಆಗಸ್ಟ್ ಅಂತ್ಯಕ್ಕೆ ಒಟ್ಟಾರೆ 439 ಕೋಟಿ ರೂ. ಬಾಕಿ ಉಳಿಸಿಕೊಳ್ಳಲಾಗಿದೆ ಎಂದು ದೂರಿನಲ್ಲಿ ರಾಜಣ್ಣ ಹೇಳಿದ್ದಾರೆ. ಸಾಲ ಮರುಪಾವತಿಸುವವರೆಗೂ ಬ್ಯಾಂಕ್‌ನ ಅನುಮತಿ ಇಲ್ಲದೆ ಸೌಭಾಗ್ಯ ಲಕ್ಷ್ಮಿ ಶುಗರ್ಸ್ ಲಿಮಿಟೆಡ್‌ನ ಆಡಳಿತ ಮಂಡಳಿ ಯ ವ್ಯವಸ್ಥಾಪಕ ನಿರ್ದೇಶಕರು ಮತ್ತು ನಿರ್ದೇಶಕರನ್ನು ಬದಲಿಸ ಬಾರದೆಂದು ಸಾಲ ಮಂಜೂರಾತಿ ಸಂದರ್ಭದಲ್ಲೇ ಷರತ್ತು ವಿಧಿಸಲಾಗಿತ್ತು. ಆದರೆ, ಆರೋಪಿಗಳು ಸಾಲ ಮರುಪಾವತಿ ಮಾಡುವುದರಿಂದ ತಪ್ಪಿಸಿಕೊಳ್ಳಲು ಮತ್ತು ಬ್ಯಾಂಕ್‌ಗೆ ಮೋಸ ಮಾಡುವ ದುರುದ್ದೇಶಕ್ಕೆ ಕಾರ್ಖಾನೆ ಆಡಳಿತ ಮಂಡಳಿಯ ಹುದ್ದೆಗಳಿಂದ ಹೊರ ನಡೆದಿದ್ದಾರೆ. ಈ ಬಗ್ಗೆ ಬ್ಯಾಂಕ್‌ಗೆ ಮಾಹಿತಿ ಸಹ ಕೊಟ್ಟಿಲ್ಲ. ಜತೆಗೆ, ಕಾರ್ಖಾನೆಗೆ ಸಂಬಂಧಪಡದ ವ್ಯಕ್ತಿಗಳನ್ನು ಆಡಳಿತ ಮಂಡಳಿಯ ನಿರ್ದೇಶಕರ ಹುದ್ದೆಗೆ ನೇಮಿಸಿ ನಂಬಿಕೆ ದ್ರೊ?ಹ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಈ ಸಂಬಂಧ ವಿಶ್ವೇಶ್ವರಪುರಂ ಪೊಲೀಸರು ಐಪಿಸಿ ಸೆಕ್ಷನ್ 406 (ಕ್ರಿಮಿನಲ್ ನಂಬಿಕೆ ದ್ರೋಹ) ಮತ್ತು 420 (ವಂಚನೆ) ಅಡಿಯಲ್ಲಿ ರಮೇಶ್ ಜಾರಕಿಹೊಳಿ ಅವರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

### ಸಂಭ್ರಮದ ರಾಜ್ಯ ಮಟ್ಟದ ಯುವಜನೋತ್ಸವ

## ಯುವ ಪ್ರತಿಭೆಗಳ ಕಲಾಪ್ರದರ್ಶನ ಅನಾವರಣ

ಬಳ್ಳಾರಿ: ಕರ್ನಾಟಕ ರಾಜ್ಯದ ವೈವಿಧ್ಯಮಯ ಕಲೆ, ಸಂಸ್ಕೃತಿ ಸಾಹಿತ್ಯ ಮತ್ತು ಭಾಗಫಗಳಲ್ಲಿನ ಶ್ರೀಮಂತಿಕೆಯನ್ನು ಯುವಜನರಿಗೆ ಪರಿಚಯಿಸಲು ಮತ್ತು ಮೆಲುಕು ಹಾಕಲು ಬಳ್ಳಾರಿ ನಗರದಲ್ಲಿ ಎರಡು ದಿನಗಳ ಕಾಲ ವಿಜೃಂಭಣೆಯಿಂದ ನಡೆದ ರಾಜ್ಯ ಮಟ್ಟದ ಯುವಜನೋತ್ಸವವು ಸಾಕ್ಷಿಯಾಯ್ತು.

ರಾಜ್ಯದ ವಿವಿಧೆಡೆಯಿಂದ ಆಗಮಿಸಿದ್ದ ಕಲಾತಂಡಗಳು, ಸ್ಪರ್ಧಾಳುಗಳು ಉತ್ಸಾಹ ಮತ್ತು ಕ್ರಿಯಾಶೀಲತೆಯಿಂದ ಪ್ರದರ್ಶಿಸಿದ ಸಂಸ್ಕೃತಿ ಕಾರ್ಯ ಕ್ರಮಗಳ ವೈಭವದ ಮೆರುಗು, ಹೊರಜಿಲ್ಲೆಗಳ ಕಲಾಪ್ರದರ್ಶನ ಸೇರಿದಂತೆ ಭರಪೂರ ಮನರಂಜನೆಯೊಂದಿಗೆ ತಮ್ಮ ಪ್ರತಿಭೆಗಳು ಅನಾವರಣಗೊಂಡವು.

ಬಳ್ಳಾರಿ ನಗರದ ಶ್ರೀ ಮಹರ್ಷಿ ವಾಲ್ಮೀಕಿ ಸಮುದಾಯ ಭವನದಲ್ಲಿ ಶನಿವಾರದಂದು ಯುವ ಸಬಲೀಕರಣ, ಕ್ರೀಡೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ನಾಗೇಂದ್ರ



ಅವರಿಂದ ಉದ್ಘಾಟನೆಗೊಂಡ ರಾಜ್ಯ ಮಟ್ಟದ ಯುವಜನೋತ್ಸವವು ವಿವಿಧ ಕಲಾ ವೈಭೋಗದ ಸಾಕ್ಷಿಯಾಗಿ ವೈವಿಧ್ಯತೆಯನ್ನು ಸಾರಿತು.

ವಾಲ್ಮೀಕಿ ಸಮುದಾಯ ಭವನದಲ್ಲಿ ಚಾಮರಾಜ ನಗರ-ಡೊಳ್ಳು ಕುಣಿತ, ಹಾವೇರಿ-ಗೊರವ, ಪೂಜಾ ಕುಣಿತ ವೀರಾಗಾಸೆ, ಮಂಡ್ಯ- ಜಾತ್ರೆ ಉತ್ಸವದ ನೃತ್ಯ ನವಿಲು ಕುಣಿತ, ಬೆಂಗಳೂರು ಗ್ರಾಮಾಂತರ- ಡೊಳ್ಳು ಕುಣಿತ, ಮೈಸೂರು - ಕಂಸಾಳೆ ನೃತ್ಯ, ರಾಮನಗರ- ಕರಗ, ದೇವಿ ಕುಣಿತ, ಉಡುಪಿ-ಕಂಗಿಲು ಕುಣಿತ ಸೇರಿದಂತೆ ನಾನಾ ಜಿಲ್ಲೆಗಳಿಂದ ಆಗಮಿಸಿದ್ದ ಸ್ಪರ್ಧಾರ್ಥಿಗಳು ತಮ್ಮ ಜನಪದ (ಗುಂಪು) ನೃತ್ಯ ಪ್ರದರ್ಶನ ನೀಡಿದರು.

ಅದರಂತೆ ಜನಪದ ಗೀತೆ ಗುಂಪು ಪ್ರದರ್ಶನ ಕಮ್ಮ ಭವನ, ವೈಯಕ್ತಿಕ ಜನಪದ ನೃತ್ಯವನ್ನು ಪಾರ್ವತಿ ಕಲ್ಯಾಣ ಮಂಟಪ, ಎಂಆರ್ಕೆ ಹಾಲ್ನಲ್ಲಿ ಗೀತ ಗಾಯನ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹೊಂಗಿರಣ ಸಭಾಂಗಣದಲ್ಲಿ ಕಥೆ ಬರೆಯುವ ಸ್ಪರ್ಧೆ, ಬಿಡಿಎಎ ಸಭಾಂಗಣದಲ್ಲಿ ಪೋಸ್ಟರ್ ರಚನೆ, ಭಾಷಣ ಸ್ಪರ್ಧೆ ಹಾಗೂ ಜಿಲ್ಲಾ ಕ್ರೀಡಾಂಗಣದಲ್ಲಿ ಪೋಟೋಗ್ರಾಫಿ ಸ್ಪರ್ಧೆ ನಡೆದವು.

ವಿವಿಧ ವೇದಿಕೆಗಳಲ್ಲಿ ವಿವಿಧ ಜಿಲ್ಲೆಗಳ ಜಾನಪದ ನೃತ್ಯಗಳು ಗಮನ ಸೆಳೆದವು ಸಂಸ್ಕೃತಿಸಂಗೀತ, ಜಾನಪದ ಗೀತೆಗಳ ಸೊಗಡು ಯುವಜನೋತ್ಸವಕ್ಕೆ ಮೆರುಗು ತಂದಿತು. ಅಂತರ್ ಜಿಲ್ಲೆಯ ಕಲಾವಿದರು ಪೈಪೋಟಿಗೆ ಬಿದ್ದವರಂತೆ ತಮ್ಮ ಪ್ರಾಂತ್ಯದ ಕಲೆ, ಸಂಸ್ಕೃತಿ ಸೊಗಡಿನ ಸಿಹಿ ಉಣಬಡಿಸಿದರು.

ಯುವಜನೋತ್ಸವದ ಜಾನಪದ ನೃತ್ಯ ಸ್ಪರ್ಧೆಯಲ್ಲಿ ಭಾಗವಹಿಸಿದ ಕಲಾತಂಡಗಳು ನೃತ್ಯಕ್ಕೆ ಪೂರಕವಾದ ಪರಿಕರಗಳನ್ನು ಬಳಸಿ, ನುಡಿಸಿ ಗಮನ ಸೆಳೆದರು. ಕೊಳಲು, ತಬಲಾ, ತಮಟೆ, ಡೋಲು, ಮದ್ದಳೆ, ಢಮರು, ಮೃದಂಗ, ಹಾರ್ಮೋನಿಯಂ ಹೀಗೆ ಪ್ರತಿಯೊಂದು ವಾದ್ಯಗಳನ್ನು ಬಳಸಿದ್ದು ವಿಶೇಷವಾಗಿತ್ತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ರಾಜ್ಯ ಮಟ್ಟದ ಯುವಜನೋತ್ಸವನ್ನು ಅತ್ಯಂತ ಸಮರ್ಥವಾಗಿ ನಿರ್ವಹಿಸಿತು.

ಇದೇ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ನಗದು ಬಹುಮಾನ, ಪ್ರಶಸ್ತಿ ಪತ್ರ ವಿತರಿಸಲಾಯಿತು.

# ಬೆಸ್ಕಾಂ ಕುಂದು ಕೊರತೆ ಸಭೆ: ರೈತರ ಪಂಪ್‌ಸೆಟ್‌ಗಳ ನಿರಂತರ 7 ಗಂಟೆ ವಿದ್ಯುತ್ ಪೂರೈಕೆಗೆ ಬದ್ಧ

## ಬೇಸಿಗೆ ನಿರ್ವಹಣೆಗೆ ಸಾವಿರ ಮೆಗಾವ್ಯಾಟ್ ವಿದ್ಯುತ್ ಖರೀದಿಗೆ ಟೆಂಡರ್; ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಂತೇಶ್ ಬೀಳಗಿ

ದಾವಣಗೆರೆ: ಸರ್ಕಾರದ ಸೂಚನೆಯಂತೆ ಬೆಸ್ಕಾಂ ರೈತರ ಪಂಪ್ಸೆಟ್ಗಳಿಗೆ ನಿರಂತರ ವಿದ್ಯುತ್ ಪೂರೈಕೆಗೆ ಬದ್ಧವಾಗಿದ್ದು ಮಳೆಯ ಕೊರತೆಯ ನಡುವೆ ಬೇಸಿಗೆ ನಿರ್ವಹಣೆಗಾಗಿ ಸಾವಿರ ಮೆಗಾವ್ಯಾಟ್ ವಿದ್ಯುತ್ ಖರೀದಿಗೆ ಟೆಂಡರ್ ಕರೆಯಲಾಗಿದೆ ಎಂದು ಬೆಸ್ಕಾಂ ಎಂ.ಡಿ. ಮಹಂತೇಶ್ ಬೀಳಗಿ ತಿಳಿಸಿದರು.

ಅವರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜನಪ್ರತಿನಿಧಿಗಳೊಂದಿಗೆ ದಾವಣಗೆರೆ ಜಿಲ್ಲಾ ಬೆಸ್ಕಾಂ ಕುಂದು ಕೊರತೆಯ ಸಭೆಯಲ್ಲಿ ಮಾತನಾಡಿದರು. ಈ ವರ್ಷ ಮುಂಗಾರು ಮಳೆಯ ಕೊರತೆಯಿಂದ ಜಲಾಶಯಗಳಲ್ಲಿ ನೀರು ಸಂಗ್ರಹ ಕಡಿಮೆಯಾಗಿದ್ದು ರೈತರು ಪಂಪ್ಸೆಟ್ಗಳ ಮೇಲೆಯೇ ಜೂನ್ ತಿಂಗಳಿನಿಂದಲೂ ಅವಲಂಭಿತವಾಗಿದ್ದರಿಂದ ತೀವ್ರ ವಿದ್ಯುತ್ ಕೊರತೆಯನ್ನು ಎದುರಿಸಬೇಕಾಗಿದೆ. ಕೊರತೆಯನ್ನು ನೀಗಿಸಲು ಈಗಾಗಲೇ ಜಿಂದಾಲ್, ಸಕ್ಕರೆ ಕಾರ್ಖಾನೆಗಳು, ಯು.ಪಿ.ಸಿ.ಎಲ್, ಸೋಲಾರ್, ವಿಂಡ್ಮಿಲ್ ಮೂಲಕ ವಿದ್ಯುತ್ ಖರೀದಿ ಮಾಡಲಾಗುತ್ತಿದೆ. ಈಗ ಯಾವುದೇ ವಿದ್ಯುತ್ ಕೊರತೆಯಾಗದಂತೆ ಪೂರೈಕೆ ಮಾಡಲಾಗುತ್ತಿದೆ. ಬೇಸಿಗೆ ಆರಂಭವಾಗುತ್ತಿದ್ದು ಈ ದಿನಗಳಲ್ಲಿ ಇನ್ನಷ್ಟು ವಿದ್ಯುತ್ ಅಭಾವವಾಗಬಹುದೆಂದು ಸಾವಿರ ಮೆಗಾವ್ಯಾಟ್ ವಿದ್ಯುತ್ ಖರೀದಿಗೆ ಟೆಂಡರ್ ಕರೆಯಲಾಗಿದ್ದು ಬೇಸಿಗೆಯಲ್ಲಿ ನಿರಂತರವಾಗಿ ವಿದ್ಯುತ್ ಪೂರೈಕೆ ಮಾಡಲಾಗುತ್ತದೆ. ಈ ಬಗ್ಗೆ ಯಾರಿಗೂ ಆತಂಕ ಬೇಡ ಎಂದು ಎಂ.ಡಿ. ತಿಳಿಸಿದರು.

ಹೊನ್ನಾಳಿ ಶಾಸಕರಾದ ಡಿ.ಜಿ.ಶಾಂತನಗೌಡರವರು ಸಭೆಯಲ್ಲಿ ಪ್ರಸ್ತಾಪಿಸಿ ರೈತರಿಗೆ ನಿರಂತರವಾಗಿ 7 ಗಂಟೆ ವಿದ್ಯುತ್ ಪೂರೈಕೆ ಮಾಡಲಾಗುತ್ತದೆ ಎಂಬ ಭರವಸೆಯಿಂದ ಬೆಳೆಗಳನ್ನು ಹಾಕಿರುವರು. ಎಷ್ಟು ಗಂಟೆಗಳ ಕಾಲ ವಿದ್ಯುತ್ ಪೂರೈಕೆಯಾಗಲಿದೆ ಎಂದು ರೈತರಿಗೆ ನಿಖರವಾಗಿ ತಿಳಿಸಿದಲ್ಲಿ ವಿದ್ಯುತ್ ಪೂರೈಕೆಯನ್ನಾಧರಿಸಿ ಬೆಳೆಯನ್ನು ಬೆಳೆಯುತ್ತಾರೆ ಎಂದಾಗ ಬೆಸ್ಕಾಂ ಎಂ.ಡಿ.ಯವರು ಕಳೆದ ಅಕ್ಟೋಬರ್ ತಿಂಗಳಲ್ಲಿ ವಿದ್ಯುತ್ ಕೊರತೆಯಾಗಿದ್ದರಿಂದ ವ್ಯತ್ಯಯವಾಗಿದ್ದು ಮುಂದಿನ ದಿನಗಳಲ್ಲಿ 7 ಗಂಟೆಗಳ ಕಾಲ ವಿದ್ಯುತ್ ಪೂರೈಕೆಗೆ ಬೆಸ್ಕಾಂ ಬದ್ಧವಾಗಿದೆ ಎಂದರು.

ಕಾಲಮಿತಿಯಲ್ಲಿ ಟಿ.ಸಿ.ಬದಲಾವಣೆ; ಎಲ್ಲಾ ತಾಲ್ಲೂಕುಗಳಲ್ಲಿ ಸ್ಥಳೀಯವಾಗಿ ಟಿ.ಸಿ.ರಿಪೇರಿ ಕೇಂದ್ರಗಳಿದ್ದು ರೈತರಿಗೆ ಕಾಲಮಿತಿಯಲ್ಲಿ ಸುಟ್ಟ ಟಿ.ಸಿ.ಗಳನ್ನು ಬದಲಾಯಿಸಬೇಕು. ಈ ವೇಳೆ ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ಪ್ರಸ್ತಾಪಿಸಿ




ನವಿಲೆಹಾಳ್ನಲ್ಲಿ ಕಳೆದ 10 ದಿನಗಳಿಂದ ಸುಟ್ಟ ಟಿ.ಸಿ.ಬದಲಾವಣೆ ಮಾಡಿಲ್ಲ ಎಂದಾಗ ಟಿ.ಸಿ.ಸುಟ್ಟಾಗ ತಕ್ಷಣ ಬದಲಾವಣೆ ಮಾಡಬೇಕು, ಟಿ.ಸಿ.ಬ್ಯಾಂಕ್ನಲ್ಲಿ 150 ಟಿ.ಸಿ.ಗಳು ದಾಸ್ತಾನಿದ್ದರೂ ಬದಲಾಯಿಸದಿರಲು ಕಾರಣವೇನು ಎಂದು ಬೆಸ್ಕಾಂ ಎಇಇ ಗೆ ಪ್ರಶ್ನಿಸಿದ ಎಂ.ಡಿ. ಮುಂದಿನ ದಿನಗಳಲ್ಲಿ ಈ ತರಹದ ದೂರುಗಳು ಬಂದಲ್ಲಿ ಕ್ರಮ ಜರುಗಿಸುವ ಎಚ್ಚರಿಕೆ ನೀಡಿದರು.

ಶಾಸಕರಾದ ಡಿ.ಜಿ.ಶಾಂತನಗೌಡರವರು ಹೊನ್ನಾಳಿ ತಾಲ್ಲೂಕಿನ ಟಿ.ಸಿ. ರಿಪೇರಿ ಕೇಂದ್ರದಲ್ಲಿ ಆಯಿಲ್ ದಾಸ್ತಾನಿಲ್ಲ ಎಂದು ಟಿ.ಸಿ.ರಿಪೇರಿ ನಿಲ್ಲಿಸಲಾಗಿತ್ತು ಎಂದಾಗ ಎಂ.ಡಿ.ಯವರು ಏನು ಕಾರಣ ಎಂದಾಗ ಹೊನ್ನಾಳಿ ಎ.ಇಇ ಆಯಿಲ್ ಕೊರತೆ ಇತ್ತು, ಟೆಂಡರ್ ಅವಧಿ ಮುಗಿದ ಕಾರಣ ಆಯಿಲ್ ದಾಸ್ತಾನು ಇರಲಿಲ್ಲ, ಟೆಂಡರ್ ಅವಧಿಯನ್ನು ವಿಸ್ತರಣೆ ಮಾಡಿದ್ದರಿಂದ ಈಗ ಯಾವುದೇ ಸಮಸ್ಯೆ ಇಲ್ಲ ಎಂದರು.

ಸೋಲಾರ್ ಪಂಪ್ಸೆಟ್ಗೆ ಆದ್ಯತೆ; ರೈತರ ಪಂಪ್ಸೆಟ್ಗಳ ಅಕ್ರಮ ಸಕ್ರಮ ಯೋಜನೆಯನ್ನು 2023 ರ ಸೆಪ್ಟೆಂಬರ್ 22 ಕ್ಕೆ ನೊಂದಣಿಯನ್ನು ಸ್ಥಗಿತಗೊಳಿಸಲಾಗಿದೆ. 500 ಮೀಟರ್ ವ್ಯಾಪ್ತಿಯ ಒಳಗೆ ಇರುವ ಪಂಪ್ ಸೆಟ್ಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಿ ವಿದ್ಯುತ್ ಸಂಪರ್ಕ ಸಕ್ರಮ ಮಾಡಲಾಗುತ್ತದೆ.

500 ಮೀಟರ್ಗಿಂತ ಹೆಚ್ಚಿದ್ದಲ್ಲಿ ಸೋಲಾರ್ ಪಂಪ್ಸೆಟ್ ಅಳವಡಿಕೆಗೆ ಪ್ರೋತ್ಸಾಹಿಸಲಾಗುತ್ತದೆ. ಸೋಲಾರ್ ಪಂಪ್ ಸೆಟ್ ಅಳವಡಿಕೆಗೆ ಪಿಎಂ ಕುಸುಮ.ಬಿ ಯೋಜನೆಯಡಿ ಅವಕಾಶ ಇದ್ದು ಫಲಾನುಭವಿ ವಂತಿಗೆ ಶೇ 20 ರಷ್ಟು ಪಾವತಿಸಬೇಕು. ಈಗಾಗಲೇ ಮಹಾರಾಷ್ಟ್ರದಲ್ಲಿ ಈ ಯೋಜನೆ ಯಶಸ್ವಿಯಾಗಿದ್ದು ಸಾವಿರ ಅಡಿ ಆಳ, ಎರಡು ಕಿ.ಮೀ ದೂರದವರೆಗೆ 7.5 ಹೆಚ್ಪಿ ಸೋಲಾರ್ ಪಂಪ್ಸೆಟ್ ನಿರಂತರವಾಗಿ ನೀರನ್ನು ತಳ್ಳುತ್ತದೆ. ಈ ಸ್ಥಳಗಳನ್ನು ಬೆಸ್ಕಾಂ ತಾಂತ್ರಿಕ ತಂಡ ಸ್ಥಳ ಪರಿಶೀಲನೆ ಮಾಡಿಕೊಂಡು ಬಂದಿದ್ದು ಮುಂದಿನ ದಿನಗಳಲ್ಲಿ ಇದಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಲಾಗುತ್ತದೆ ಎಂದಾಗ ರೈತರಿಗೆ ಜಾಗೃತಿ ಮೂಡಿಸಿದಲ್ಲಿ ರೈತರೇ ಅಳವಡಿಕೆಗೆ ಮುಂದಾಗುವರು ಎಂದು ಶಾಸಕರಾದ ಡಿ.ಜಿ.ಶಾಂತನಗೌಡ ಮತ್ತು ಬಸವಂತಪ್ಪ ತಿಳಿಸಿ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ. ಯೋಜನೆಯಡಿ ಗಂಗಾ ಕಲ್ಯಾಣ ಫಲಾನುಭವಿಗಳಿಗೆ ಸೋಲಾರ್ ಅಳವಡಿಸಿ ಎಂದರು.

ಅಕ್ರಮ ಸಕ್ರಮಕ್ಕೆ 310 ಕೋಟಿ; 2023 ರ ಸೆಪ್ಟೆಂಬರ್ 22 ರೊಳಗಾಗಿ ಅಕ್ರಮ ಸಕ್ರಮದಲ್ಲಿ ನೊಂದಾಯಿಸಿದ ರೈತರ ಪಂಪ್ಸೆಟ್ಗಳನ್ನು ಸಕ್ರಮ ಮಾಡಲು ಈಗಾಗಲೇ ಟೆಂಡರ್ ಕರೆದು ಅನುಮೋದನೆ ನೀಡಿ ಜಿಲ್ಲೆಯಲ್ಲಿ ನೊಂದಾಯಿಸಿದ ಹರಪನಹಳ್ಳಿ ಮತ್ತು ತೆಲಗಿ ಸೇರಿದಂತೆ ದಾವಣಗೆರೆ ಜಿಲ್ಲೆಯಲ್ಲಿ 15615 ಪಂಪ್ಸೆಟ್ಗಳ ಸಕ್ರಮಕ್ಕಾಗಿ 310 ಕೋಟಿ ಅನುದಾನ ಹಂಚಿಕೆ ಮಾಡಿ ಬಿಡುಗಡೆ ಮಾಡಲಾಗಿದೆ ಎಂದು ಎಂ.ಡಿ.ಯವರು ತಿಳಿಸಿದರು.

ಹೊಸ ಸ್ಟೇಷನ್, ಹಳೆ ಸ್ಟೇಷನ್ ಮೇಲ್ದರ್ಜೆಗೇರಿಸಲು ಕ್ರಮ; ರೈತರಿಗೆ ಮತ್ತು ಗ್ರಾಹಕರಿಗೆ ಗುಣಮಟ್ಟದ ವಿದ್ಯುತ್ ಪೂರೈಕೆಗಾಗಿ ಹೊಸ ವಿದ್ಯುತ್ ವಿತರಣಾ ಕೇಂದ್ರಗಳನ್ನು ಸ್ಥಾಪಿಸಲು ಮತ್ತು ಈಗಿರುವ ಕೇಂದ್ರಗಳನ್ನು 12.5 ಮೆಗಾವ್ಯಾಟ್ನಿಂದ 20 ಮೆಗಾವ್ಯಾಟ್ಗೆ ಹೆಚ್ಚಿಸಲು ಮನವಿ ಸಲ್ಲಿಸಿದ ಶಾಸಕರಾದ ಡಿ.ಜಿ.ಶಾಂತನಗೌಡ, ಕೆ.ಎಸ್.ಬಸವಂತಪ್ಪ, ಲತಾ ಮಲ್ಲಿಕಾರ್ಜುನ್ ರವರು ಆನಗೋಡು, ಮೆಳ್ಳೆಕಟ್ಟೆ, ಅತ್ತಿಗಟ್ಟೆ ಇವುಗಳನ್ನು ಮೇಲ್ದರ್ಜೆಗೇರಿಸಲು ಮತ್ತು ಕಬ್ಬೂರು, ತೋಳಹುಣಸೆ ಹೊಸಸ್ಟೇಷನ್ ಬೇಗ ಆರಂಭಿಸಬೇಕು. ಮತ್ತು ಹೊನ್ನಾಳಿ ತಾ; ನ್ಯಾಮತಿ, ಕ್ಯಾಸಿನಕೆರೆ ಸ್ಟೇಷನ್, ಚೀಲೂರು ಹೊಸ ಮಾರ್ಗ ನಿರ್ಮಾಣ, ಹರಪನಹಳ್ಳಿಯಲ್ಲಿ ಈಗಿರುವ ಸ್ಟೇಷನ್ಗಳನ್ನು ಮೇಲ್ದರ್ಜೆಗೇರಿಸಿ ಹೊಸದಾಗಿ ಕನಿಷ್ಠ 4 ಕಡೆ ಸ್ಟೇಷನ್ ಆರಂಭಿಸಲು ಮನವಿ ಮಾಡಿ ವಿದ್ಯುತ್ ಪೂರೈಕೆ ಬೆಸ್ಕಾಂಗೆ ಹರಪನಹಳ್ಳಿ ಬರಲಿದ್ದು ಕೆ.ಪಿ.ಟಿ.ಸಿ.ಎಲ್ ಗುಲ್ಬರ್ಗಕ್ಕೆ ಬರುತ್ತದೆ. ಇದನ್ನ ಸರಿಪಡಿಸಲು ಲತಾ ಮಲ್ಲಿಕಾರ್ಜುನ್ ಮನವಿ ಮಾಡಿದರು.

ಹೊಸ ಬಡಾವಣೆಗಳ ಸಮೀಕ್ಷೆ; ಗ್ರಾಮಾಂತರ ಪ್ರದೇಶದಲ್ಲಿ ಹೊಸದಾಗಿ ಅಲ್ಲಲ್ಲಿ ಗುಚ್ಛ ಮನೆ ಮತ್ತು ರಸ್ತೆ ಬದಿಯಲ್ಲಿ ತಮ್ಮ ಜಮೀನುಗಳಲ್ಲಿ ಮನೆ ನಿರ್ಮಾಣ ಮಾಡಿಕೊಂಡಿದ್ದು ಇಂತಹ ಜನವಸತಿ ಪ್ರದೇಶಕ್ಕೆ ನಿರಂತರ ಜ್ಯೋತಿ ವಿದ್ಯುತ್ ಸಂಪರ್ಕ ಕಲ್ಪಿಸಲು ಸಮೀಕ್ಷೆ ಮಾಡಿ ಅಂದಾಜು ಪಟ್ಟಿ ನೀಡಲು ಬೆಸ್ಕಾಂ ಇಂಜಿನಿಯರ್ಗಳಿಗೆ ತಿಳಿಸಿದರು.

ಸಭೆಯಲ್ಲಿ ಬೆಸ್ಕಾಂ ತಾಂತ್ರಿಕ ನಿರ್ದೇಶಕ ಹೆಚ್.ಜೆ.ರಮೇಶ್, ಮುಖ್ಯ ಇಂಜಿನಿಯರ್ ಗೋವಿಂದಪ್ಪ, ಕೆ.ಪಿ.ಟಿ.ಸಿ.ಎಲ್. ಮುಖ್ಯ ಇಂಜಿನಿಯರ್ ಉಮೇಶ್, ಅಧೀಕ್ಷಕ ಇಂಜಿನಿಯರ್ ಜಗದೀಶ್ ಹಾಗೂ ಬೆಸ್ಕಾಂ ಇಂಜಿನಿಯರ್ಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಪ್ರೇಮಿಗಳೆಂದು ಅಕ್ಕ- ತಮ್ಮನನ್ನು ಅಪಹರಿಸಿ ಥಳಿತ ಪ್ರಕರಣ:

### 17 ಜನರ ಪೈಕಿ 8 ಜನರ ಬಂಧನ



ಬೆಳಗಾವಿ: ಕೋಟೆಕೆರೆ ಉದ್ಯಾನದಲ್ಲಿ ಶನಿವಾರ ಸಂಜೆ ಮಾತನಾಡುತ್ತಾ ಕುಳಿತಿದ್ದ ಅಕ್ಕ- ತಮ್ಮನನ್ನು ಪ್ರೇಮಿಗಳೆಂದು ತಿಳಿದು ಅಲ್ಲಿಂದ ಅಪಹರಿಸಿ ಹಲ್ಲೆ ನಡೆಸಿದ ಗುಂಪನ್ನು ಪತ್ತೆ ಹಚ್ಚುವಲ್ಲಿ ಪೊಲೀಸರು ಕೊನೆಗೂ ಯಶಸ್ವಿಯಾಗಿದ್ದಾರೆ. ಈ ಸಂಬಂಧ ಬೆಳಗಾವಿ ಪೊಲೀಸರು ಭಾನುವಾರ ಎಂಟು ಜನರನ್ನು ಬಂಧಿಸಿದ್ದಾರೆ. ಒಟ್ಟು 17 ಜನರ ವಿರುದ್ಧ ದಾಖಲಾಗಿದೆ. ತನಿಖೆ ಮುಂದುವರಿದಿದೆ ಎಂದು ನಗರ ಪೊಲೀಸ್ ಆಯುಕ್ತ ಎಸ್.ಎನ್. ಸಿದ್ದರಾಮಪ್ಪ ತಿಳಿಸಿದ್ದಾರೆ.

## ಪ್ರಶಾಂತ ಮಾವರಕರಗೆ ಪಿಎಚ್‌ಡಿ ಪದವಿ



ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಪ್ರಶಾಂತ ಮಾವರಕರ ಭೂಗೋಳಶಾಸ್ತ್ರದಲ್ಲಿ ಮಂಡಿಸಿದ ಮಾರಪೊ ಮೆಟ್ರಿಕ್ ಎಸಾಲೈಸಿಸ್ ಆಪ್ ಹಿರಣ್ಯಕೇಶಿ ರಿವರ್ ಬೆಸಿನ್: ಅ ಜಿಯೊಮಾರಪೊಜಿಕಲ್ ಸ್ಟಡಿಸ್ ಗೆ ಪಿಎಚ್‌ಡಿ ಪದವಿ ನೀಡಿದೆ.

ಆರ್‌ಸಿಯುನ ಭೂಗೋಳಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಹಾಗೂ ಸಂಶೋಧನಾ ಮಾರ್ಗದರ್ಶಕ ಡಾ.ಎಂ.ಬಿ.ಚಲವಾದಿ ಮಾರ್ಗದರ್ಶನದಲ್ಲಿ ಪ್ರಶಾಂತ ಮಾವರಕರ ಸಂಶೋಧನೆ ನಡೆಸಿದ್ದಾರೆ.

# ಕೆಆರ್‌ಎಸ್ ಅಣೆಕಟ್ಟು ಸುತ್ತಮುತ್ತ 20 ಕಿಮೀ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಿರ್ಬಂಧ: ಹೈಕೋರ್ಟ್ ಮಹತ್ವದ ಆದೇಶ

ಬೆಂಗಳೂರು : ಕೆಆರ್‌ಎಸ್ ಅಣೆಕಟ್ಟೆಯ ಸುತ್ತಮುತ್ತ ಗಣಿಗಾರಿಕೆಗೆ ನಿರ್ಬಂಧ ಹೇರಿ ಕರ್ನಾಟಕ ಹೈಕೋರ್ಟ್ ಆದೇಶಿಸಿದೆ. ಕೃಷ್ಣರಾಜಸಾಗರ ಅಣೆಕಟ್ಟೆಯ 20 ಕಿಲೋಮೀಟರ್ ವ್ಯಾಪ್ತಿಯಲ್ಲಿ ಗಣಿಗಾರಿಕೆಗೆ ನಿರ್ಬಂಧ ಹೇರಲಾಗಿದೆ. ಮುಖ್ಯ ನ್ಯಾಯಮೂರ್ತಿ ಪ್ರಸನ್ನ ಬಿ ವರಾಳೆ, ನ್ಯಾಯಮೂರ್ತಿ ಕೃಷ್ಣ ದೀಕ್ಷಿತ್ ಅವರಿದ್ದ ಪೀಠ ಆದೇಶ ನೀಡಿದೆ.

ಕೃಷ್ಣರಾಜಸಾಗರ ಡ್ಯಾಮ್ ಈಗಾಗಲೇ ಸಂಕಷ್ಟದಲ್ಲಿದೆ, ಕೆಆರ್‌ಎಸ್ ಡ್ಯಾಂ ಬಳಿ ಹಲವು ಭಾರಿ ದೊಡ್ಡ ಶಬ್ಬಗಳು ಕೇಳಿ ಬಂದಿದೆ. ಅಣೆಕಟ್ಟಿನ ಬಳಿ ಗಣಿಗಾರಿಕೆ ನಡೆಸಿದರೆ ಅಪಾಯವಾಗುವ ಸಂಭವವಿದೆ ಎಂದು ಹೈಕೋರ್ಟ್ ನಿರ್ಬಂಧ ವಿಧಿಸಿ ಆದೇಶ ಹೊರಡಿಸಿದೆ.

ಕೃಷ್ಣ ರಾಜ ಸಾಗರ ಅಣೆಕಟ್ಟನ್ನು 1924 ರಲ್ಲಿ ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಿಗೆ ಜೀವ ನೀಡುವ ನದಿಯಾದ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲಾಯಿತು. ಅತ್ಯಂತ ಪಖಖಲವತ್ತಾದ ಮೈಸೂರು ಮತ್ತು ಮಂಡ್ಯದಲ್ಲಿ ನೀರಾವರಿಗೆ ಪ್ರಮುಖ ನೀರಿನ ಮೂಲವಾಗಿದೆ.

ಕೆಆರ್‌ಎಸ್ ಜಲಾಶಯಕ್ಕೆ ಹಾನಿ ಮಾಡುವುದು ತಡೆಗಟ್ಟಬೇಕಿದೆ. ಇಲ್ಲಿ ಕೆಆರ್‌ಎಸ್ ಸುರಕ್ಷತೆ ಮುಖ್ಯವಾಗಿದೆ ಎಂದು ಅಭಿಪ್ರಾಯಪಟ್ಟ ಮುಖ್ಯ ನ್ಯಾಯಮೂರ್ತಿ ಪಿ.ಬಿ ವರಾಳೆ ಮತ್ತು ನ್ಯಾ. ಕೃಷ್ಣ ಎಸ್ ದೀಕ್ಷಿತ್ ಅವರನ್ನು ಒಳಗೊಂಡ ವಿಭಾಗೀಯ ಪೀಠವು, ಸರ್ಕಾರದ ನಿರ್ದೇಶನದಂತೆ ವೈಜ್ಞಾನಿಕ ಸಮೀಕ್ಷೆಗೆ ಆದೇಶಿಸಲಾಗಿದೆ. ಹೀಗಾಗಿ, ಅಲ್ಲಿಯವರೆಗೆ ಗಣಿಗಾರಿಕೆಗೆ ಅನುಮತಿಸುವುದಿಲ್ಲ ಎಂದು ಹೇಳಿತು. ಈ ನಿಷೇಧವು ಅಸ್ತಿತ್ವದಲ್ಲಿರುವ ಗಣಿಗಾರಿಕೆ ಪರವಾನಗಿಗಳ ಮೇಲೂ ಅನ್ವಯಿಸುತ್ತದೆ ಅಥವಾ ಹಿಂದಿನ ಸುತ್ತಿನ ವ್ಯಾಜ್ಯಗಳಲ್ಲಿ ಉಚ್ಚ ನ್ಯಾಯಾಲಯವು ಅನುಮತಿ ನೀಡಿದ ಪ್ರದೇಶದಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿದೆ.



ಕೆಆರ್‌ಎಸ್ ಡ್ಯಾಂ ನಿರ್ಮಾಣಕ್ಕೆ ಜನರು ರಕ್ತ, ಬೆವರು ಹರಿಸಿದ್ದಾರೆ. ತೀ.ತಾ. ಶರ್ಮರ ಸರ್.ಎಂ. ವಿಶ್ವೇಶ್ವರಯ್ಯ ಕುರಿತ ಪುಸ್ತಕದಲ್ಲಿ ಈ ಬಗ್ಗೆ ಉಲ್ಲೇಖವಿದೆ. ಕೆಆರ್‌ಎಸ್ಗೆ ಧಕ್ಕೆಯಾಗುವ ಯಾವುದೇ ಚಟುವಟಿಕೆಗೆ ಅವಕಾಶವಿಲ್ಲ. ಮೂರು ರಾಜ್ಯಗಳು ಕಾವೇರಿ ನೀರಿಗಾಗಿ ಹೋರಾಡುತ್ತಿವೆ. ಆದರೆ ಕೆಆರ್‌ಎಸ್ ಅಣೆಕಟ್ಟೆ ಸಂರಕ್ಷಣೆಗೆ ಪ್ರಯತ್ನಿಸುತ್ತಿಲ್ಲ. ಅಣೆಕಟ್ಟೆಗೆ ತೊಂದರೆಯಾದರೆ ಆಗುವ ಅನಾಹುತಗಳ ಅರಿವಿದೆಯೇ? ಅಣೆಕಟ್ಟೆಗೆ ತೊಂದರೆಯಾದರೆ ಇಡೀ ರಾಜ್ಯಕ್ಕೇ ಗಂಭೀರ ಆಪತ್ತು ಬರಲಿದೆ. ಹೀಗಾಗಿ ಕೆಆರ್‌ಎಸ್ ಅಣೆಕಟ್ಟೆ ಬಳಿ ಗಣಿಗಾರಿಕೆಗೆ ನಿರ್ಬಂಧ ವಿಧಿಸಲಾಗಿದೆ ಎಂದು ನ್ಯಾಯಪೀಠ ಹೇಳಿದೆ.

ಕೆ.ಆರ್.ಎಸ್ ಸುತ್ತಮುತ್ತ 20 ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಿಷೇಧ ಮಾಡಿ ಹೊರಡಿಸಿರುವ ಹೈಕೋರ್ಟ್ ಮುಖ್ಯ ವಿಭಾಗೀಯ ಪೀಠದ ಆದೇಶ ಅತ್ಯಂತ ಸೂಕ್ತವಾಗಿದೆ. ಇಂಥದ್ದೊಂದು ಮಹತ್ವದ ಆದೇಶವನ್ನು ನೀಡಿರುವ ಹೈಕೋರ್ಟಿನ ನ್ಯಾಯಮೂರ್ತಿಗಳಾದ ಮಾನ್ಯ ಶ್ರೀ ಪಿ. ಬಿ. ವರಾಳೆ ಹಾಗೂ ಶ್ರೀ ಕೃಷ್ಣ.ಎಸ್. ದೀಕ್ಷಿತ್ ಅವರಿಗೆ ಧನ್ಯವಾದಗಳನ್ನು ಅರ್ಪಿಸುವೆ ಎಂದು ಸುಮಲತಾ ಪ್ರತಿಕ್ರಿಯಿಸಿದ್ದಾರೆ. ಕೆ.ಆರ್.ಎಸ್ ಸುತ್ತಮುತ್ತ ಗಣಿಗಾರಿಕೆ ನಿಷೇಧಿಸಬೇಕು ಎನ್ನುವ ನನ್ನ ಬಹುದಿನದ ಹೋರಾಟಕ್ಕೆ ಈ ಆದೇಶ ಮತ್ತಷ್ಟು ಬಲ ತಂದಿದೆ. ನಾವೆಲ್ಲರೂ ಕೆ.ಆರ್. ಎಸ್ ಅನ್ನು ಉಳಿಸಿಕೊಳ್ಳಬೇಕಿದೆ ಎಂದಿದ್ದಾರೆ.

## ಮಂಗನ ಕಾಯಿಲೆಗೆ ಯುವತಿ ಸಾವು

ಶಿವಮೊಗ್ಗ: ಮಂಗನ ಕಾಯಿಲೆಯಿಂದ 18 ವರ್ಷದ ಯುವತಿ ಸಾವನ್ನಪ್ಪಿರುವಂತಹ ಘಟನೆ ಜಿಲ್ಲೆಯ ಹೊಸನಗರ ತಾಲೂಕಿನ ಅರಳಿಕೊಪ್ಪ ಗ್ರಾಪಂ ವ್ಯಾಪ್ತಿಯ ಬೊಪ್ಪನಮನೆ ಗ್ರಾಮದಲ್ಲಿ ನಡೆದಿದೆ.

ಆ ಮೂಲಕ ಇದು ಮಂಗನ ಕಾಯಿಲೆಗೆ ಈ ವರ್ಷ ಮೃತಪಟ್ಟ ಮೊದಲ ಪ್ರಕರಣವಾಗಿದೆ. ಬೊಪ್ಪನೆಮನೆ ಗ್ರಾಮದ ನಿವಾಸಿ ಅನನ್ಯ ಮೃತ ಯುವತಿ. ಚಳಿ ಜ್ವರದಿಂದ ಬಳಲುತ್ತಿದ್ದ ಯುವತಿಯನ್ನು ಮೆಗ್ಗಾನ್ ಆಸ್ಪತ್ರೆಯಲ್ಲಿ ಮೂರು ದಿನ ಚಿಕಿತ್ಸೆ ನೀಡಿದ್ದು, ಹೆಚ್ಚಿನ ಚಿಕಿತ್ಸೆಗೆ ಮಣಿಪಾಲ್ ಕೆಎಂಸಿ ಆಸ್ಪತ್ರೆಗೆ ಪೋಷಕರು ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಿಸದೇ ಮುಂಜಾನೆ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾಳೆ.

ಈ ಮಂಗನ ಕಾಯಿಲೆಯನ್ನು ಕ್ಯಾಸನೂರು ಫಾರೆಸ್ಟ್ ಕಾಯಿಲೆ ಎಂದು ಕೂಡ ಕರೆಯುತ್ತಾರೆ.

ಈ ಕುರಿತು ಡಿಎಓ ರಾಜೇಶ್ ಸುರಗಿಹಳ್ಳಿ ಪ್ರತಿಕ್ರಿಯೆ ನೀಡಿದ್ದು, ಕೆಎಫ್ಡಿ ಪಾಸಿಟಿವ್ ಬಂದಿದ್ದ ಯುವತಿ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾಳೆ. ಡಿ. 27 ಕ್ಕೆ ಜ್ವರದಿಂದ ಯುವತಿ ಬಳಲುತ್ತಿದ್ದಳು. ಮೊದಲು ಮೆಗ್ಗಾನ್ ಜಿಲ್ಲಾಸ್ಪತ್ರೆಗೆ ಬಳಿಕ ಹೆಚ್ಚಿನ ಚಿಕಿತ್ಸೆಗೆ ಮಣಿಪಾಲ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ. ಇಂದು ಯುವತಿಯು ಮೃತ ಪಟ್ಟಿರುವ ಮಾಹಿತಿ ಸಿಕ್ಕಿದೆ ಎಂದಿದ್ದಾರೆ.

ತೀವ್ರ ಮೆದಳು ಜ್ವರ ಮತ್ತು ರಕ್ತ ಹೀನತೆಯಿಂದ ಯುವತಿ ಬಳಲುತ್ತಿದ್ದಳು. ಇದೊಂದು ಕೆಎಫ್ಡಿಯಿಂದ ಮೃತ ಪಟ್ಟಿರುವುದು ವರದಿಯಿಂದ ಖಚಿತ ಆಗಬೇಕಿದೆ. ಈಗಾಗಲೇ ಎಲ್ಲ ರೀತಿಯಿಂದ ಆರೋಗ್ಯ ಇಲಾಖೆ ಮುಂಜಾಗ್ರತೆ ವಹಿಸಿದೆ ಎಂದು ತಿಳಿಸಿದ್ದಾರೆ.

ಗ್ರಾಮದಲ್ಲಿ ಕೆಎಫ್ಡಿ ಕುರಿತು ಎಲ್ಲ ಮುಂಜಾಗ್ರತೆ ವಹಿಸಲಾಗಿದೆ. ಜ್ವರ ಕಂಡು ಬಂದ ತಕ್ಷಣ ಅವರಿಗೆ ಪರೀಕ್ಷೆ ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ. ಇಲ್ಲಿಯ ವರೆಗೆ 2911 ಕೆಎಫ್ಡಿ ಪರೀಕ್ಷೆ ಮಾಡಲಾಗಿದೆ. ಅದರಲ್ಲಿ ಕೇವಲ ಎರಡು ಮಾತ್ರ ಪಾಸಿಟಿವ್ ಕೇಸ್ ಪತ್ತೆಯಾಗಿದ್ದು, ಅದರಲ್ಲಿ ಒಬ್ಬರು ಮೃತಪಟ್ಟಿದ್ದಾರೆ.

## ಹೆತ್ತ ತಾಯಿಯನ್ನು ಕೊಂದ ಮಗಳು, ಅಳಿಯನ ಬಂಧನ

ಮಂಡ್ಯ: ತಾನು ಮುದ್ದಾಗಿ ಸಾಕಿ, ಬೆಳೆಸಿದ್ದ ತನ್ನ ಏಕೈಕ ಮಗಳಿಂದಲೇ ಮಹಿಳೆಯೊಬ್ಬರು ಹತ್ಯೆಗೀಡಾಗಿರುವ ಆಘಾತಕಾರಿ ಘಟನೆ ಮಂಡ್ಯ ಜಿಲ್ಲೆಯ ಹೆಬ್ಬಕವಾಡಿ ಗ್ರಾಮದಲ್ಲಿ ಸೋಮವಾರ ವರದಿಯಾಗಿದೆ.

ಘಟನೆ ನಡೆದು 13 ತಿಂಗಳ ಬಳಿಕ ಪ್ರಕರಣವನ್ನು ಭೇದಿಸಿದ ಪೊಲೀಸರು ಹೆತ್ತ ತಾಯಿಯನ್ನು ಹತ್ಯೆ ಮಾಡಿದ ಮಹಿಳೆ ಹಾಗೂ ಆಕೆಯ ಪತಿಯನ್ನು ಬಂಧಿಸಿದ್ದಾರೆ.

ಆರೋಪಿಗಳನ್ನು ಮೈಸೂರು ಜಿಲ್ಲೆಯ ಹಾರೋಹಳ್ಳಿ ನಿವಾಸಿ ಅನುಷಾ ಮತ್ತು ಆಕೆಯ ಪತಿ ದೇವರಾಜು ಎಂದು ಗುರುತಿಸಲಾಗಿದೆ.

ದೇವರಾಜು, ಹತ್ಯೆಯಾದ 52 ವರ್ಷದ ತನ್ನ ಅತ್ತೆ ಶಾರದಮ್ಮ ಅವರ ಶವವನ್ನು ಮುಚ್ಚಿಡಲು ಪತ್ನಿಗೆ ಸಹಾಯ ಮಾಡಿದ್ದಕ್ಕಾಗಿ ಬಂಧಿಸಲಾಗಿದೆ.

ಪೊಲೀಸರ ಪ್ರಕಾರ, ಶಾರದಮ್ಮನನ್ನು ಕೊಂದ ನಂತರ, ಅನುಷಾ ತಾನು ಅವರೊಂದಿಗೆ ಇರಲಿಲ್ಲ ಎಂದು ಹೇಳಿಕೊಂಡಿದ್ದಾಳೆ. ಆದರೆ, ಈ ಸಂಬಂಧ ಮೈಸೂರು ಜಿಲ್ಲೆಯ ವರುಣಾ ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಾಗಿತ್ತು.

ದಂಪತಿಗಳು ವ್ಯತಿರಿಕ್ತ ಹೇಳಿಕೆ ನೀಡಿದ ನಂತರ, ಪೊಲೀಸರು ಅನುಮಾನಗೊಂಡು ಅವರನ್ನು ತೀವ್ರ ವಿಚಾರಣೆಗೆ ಒಳಪಡಿಸಿದಾಗ, ಶಾರದಮ್ಮ ಅವರನ್ನು ಹತ್ಯೆ ಮಾಡಿ, ಹೂತು ಹಾಕಿರುವುದಾಗಿ ಒಪ್ಪಿಕೊಂಡಿದ್ದಾರೆ.

ಶಾರದಮ್ಮಅವರ ಏಕೈಕ ಮಗಳಾಗಿದ್ದ ಅನುಷಾ,



ನವೆಂಬರ್ 22, 2022 ರಂದು ತಾಯಿಯ ಮನೆಗೆ ಹೋಗಿದ್ದಳು, ಈ ವೇಳೆ ಅವರ ಕಣ್ಣಿನ ಚಿಕಿತ್ಸೆ ವಿಚಾರಕ್ಕೆ ತಾಯಿಯೊಂದಿಗೆ ಜಗಳವಾಡಿದ್ದಳು.

ಶಾರದಮ್ಮ ಕೋಪದಿಂದ ಮಗಳಿಗೆ ದೊಣ್ಣೆಯಿಂದ ಹೊಡೆಯಲು ಹೋಗಿದ್ದಾರೆ. ಈ ವೇಳೆ ಅನುಷಾ ತಾಯಿಯನ್ನು ಜೋರಾಗಿ ತಳ್ಳಿದ್ದಾಳೆ.

ಶಾರದಮ್ಮನ ತಲೆ ಮಂಚದ ಅಂಚಿಗೆ ಬಡಿದು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಬಂಧನದ ಭೀತಿಯಿಂದ ದಂಪತಿ ಶವವನ್ನು ಗ್ರಾಮದ ಹೊರವಲಯದಲ್ಲಿರುವ ಸ್ಮಶಾನಕ್ಕೆ ಸಾಗಿಸಿ ಅಲ್ಲಿಯೇ ಹೂತು ಹಾಕಿದ್ದರು.

ಸಂಬಂಧಿಕರ ಒತ್ತಡ ಹೆಚ್ಚಾದಾಗ ಅನುಷಾ ಪೊಲೀಸರಿಗೆ ನಾಪತ್ತೆ ದೂರು ನೀಡಿದ್ದರು.

ಇದೀಗ ಪ್ರಕರಣವನ್ನು ಮಂಡ್ಯ ಗ್ರಾಮಾಂತರ ಪೊಲೀಸರಿಗೆ ಹಸ್ತಾಂತರಿಸಲಾಗಿದ್ದು, ಮೃತದೇಹವನ್ನು ಹೊರತೆಗೆದು ಮುಂದಿನ ಕ್ರಮಕೈಗೊಳ್ಳುವುದಾಗಿ ತಿಳಿಸಿದ್ದಾರೆ.

# ನಟ ದರ್ಶನಗೆ ಪೊಲೀಸರಿಂದ ನೋಟಿಸ್ ಜಾರಿ

ಬೆಂಗಳೂರು: ಜೆಟ್ ಲಾಗ್ ಪಬ್ನಲ್ಲಿ ಮುಂಜಾನೆವರೆಗೂ ಸೆಲೆಬ್ರಿಟಿಗಳ ಪಾರ್ಟಿ ಮಾಡಿರುವ ವಿಚಾರವಾಗಿ ನಟ ದರ್ಶನ್ ಸೇರಿದಂತೆ ಅನೇಕ ಸೆಲೆಬ್ರಿಟಿಗಳಿಗೆ ಸುಬ್ರಮಣ್ಯನಗರ ಪೊಲೀಸರು ನೋಟೀಸ್ ನೀಡಿದ್ದಾರೆ.

ಸದ್ಯ ನಟ ದರ್ಶನ್ ಗೆ ನೋಟಿಸ್ ನೀಡಲಾಗಿದ್ದು, ರಾಕ್ ಲೈನ್ ವೆಂಕಟೇಶ್, ಅಭಿಷೇಕ್ ಅಂಬರೀಶ್, ಚಿಕ್ಕಣ್ಣ, ಪ್ರಜ್ವಲ್ ದೇವರಾಜ್ ಸೇರಿದಂತೆ ಕೆಲ ಸೆಲೆಬ್ರಿಟಿಗಳಿಗೆ ನೋಟೀಸ್ ನೀಡಲು ಸಿದ್ದತೆ ನಡೆಸಲಾಗುತ್ತಿದೆ ಎನ್ನಲಾಗಿದೆ.

ಸೆಲೆಬ್ರಿಟಿಗಳು ರಾತ್ರಿ ಒಂದು ಗಂಟೆ ಬಳಿಕ ಪಾರ್ಟಿಯಲ್ಲಿ ಭಾಗಿಯಾಗಿದ್ದರು ಎಂದು ಹೇಳಲಾಗುತ್ತಿದ್ದು, ಹೀಗಾಗಿ



ಪಬ್ ಓಪನ್ ಇದ್ದ ಬಗ್ಗೆ ಹೇಳಿಕೆ ದಾಖಲಿಸಿಕೊಳ್ಳಲು ಸುಬ್ರಮಣ್ಯನಗರ ಪೊಲೀಸರು ನೋಟೀಸ್ ನೀಡದ್ದಾರೆ. ಸದ್ಯ ಪಾರ್ಟಿಯಲ್ಲಿ ಭಾಗಿಯಾಗಿದ್ದ ಟಾಪ್ ಟೆನ್ ಸೆಲೆಬ್ರಿಟಿಗಳಿಗೆ ನೋಟೀಸ್ ನೀಡಲಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತರು ಬಿ. ದಯಾನಂದ್ ಮಾಹಿತಿ ಹಂಚಿಕೊಂಡಿದ್ದಾರೆ. ಸೆಲೆಬ್ರಿಟಿಗಳಿಗೆ ನೋಟೀಸ್ ನೀಡಿ ಹೇಳಿಕೆ ಪಡೆಯುವಂತೆ ನಗರ ಪೊಲೀಸ್ ಆಯುಕ್ತರು ಸೂಚನೆ ನೀಡಿದ್ದಾರೆ. ಈಗಾಗಲೇ ಠಾಣೆಯ ಅಧಿಕಾರಿಗೆ ಆಯುಕ್ತರು ಸೂಚಿಸಿದ್ದಾರೆ.

ಇದಲ್ಲದೆ, ಆರು ಜನ ಪೊಲೀಸರಿಗೂ ನೋಟೀಸ್ ಕಳುಹಿಸಲಾಗಿದೆ. ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಠಾಣಾಧಿಕಾರಿ, ಒಬ್ಬ ಸಬ್ ಇನ್ಸ್ಪೆಕ್ಟರ್ ಹಾಗೂ ನಾಲ್ವರು ಕಾನ್ಸ್ ಟೇಬಲ್ ಗಳಿಗೆ ನೋಟೀಸ್ ಕಳುಹಿಸಲಾಗಿದೆ. ಮಧ್ಯರಾತ್ರಿ ಒಂದು ಗಂಟೆಗೆ ಅವಧಿ ಮುಗಿದಿದ್ರು 3:15 ರವರೆಗೂ ಪೊಲೀಸರು ಯಾಕೆ ಹೋಗಿರಲಿಲ್ಲ. ಹೊಯ್ಸಳದಿಂದ ಠಾಣೆಗೆ ಪಾರ್ಟಿ ನಡೆಯುವ ಬಗ್ಗೆ ಮಾಹಿತಿ ನೀಡಿಲ್ಲ. ಈ ಎಲ್ಲದರ ಬಗ್ಗೆ ಉತ್ತರ ನೀಡುವಂತೆ ಪೊಲೀಸರಿಗೆ ನೋಟೀಸ್ ಕಳುಹಿಸಲಾಗಿದೆ.

## ಹಣ ದುರ್ಬಳಕೆ ಮಾಡಿದ ಪಶು ಆಸ್ಪತ್ರೆ ಮುಖ್ಯವೈದ್ಯಾಧಿಕಾರಿ ಅಮಾನತು




ಮಂಡ್ಯ: ನಕಲಿ ಫಲಾನುಭವಿಗಳನ್ನು ಸೃಷ್ಟಿಸಿ ಸರ್ಕಾರಿ ಹಣ ದುರ್ಬಳಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪಶು ಆಸ್ಪತ್ರೆ ಮುಖ್ಯವೈದ್ಯಾಧಿಕಾರಿಯೊಬ್ಬರನ್ನು ಅಮಾನತು ಮಾಡಿರುವ ಘಟನೆ ಮಂಡ್ಯದಲ್ಲಿ ನಡೆದಿದೆ.

ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಪಶು ಆಸ್ಪತ್ರೆ ಮುಖ್ಯವೈದ್ಯಾಧಿಕಾರಿ ಪ್ರವೀಣ್ ಅಮಾನತುಗೊಂಡವರು.

ಪಾಂಡವಪುರ ಪಶು ಆಸ್ಪತ್ರೆಯಲ್ಲಿ ಸಹಾಯಕ ನಿರ್ದೇಶಕರಾಗಿದ್ದಾಗ 2018–19ನೇ ಸಾಲಿನ ಎಸ್ ಸಿಪಿ, ಟಿಎಸ್ ಪಿ ಯೋಜನೆಯಡಿಯಲ್ಲಿ ಹಣ ದುರ್ಬಳಕೆ ಮಾಡಿಕೊಂಡಿದ್ದರು. ಈ ಹಿನ್ನೆಲೆಯಲ್ಲಿ ಪಶುಸಂಗೋಪನೆ ಮತ್ತು ಮೀನುಗಾರಿಕಾ ಇಲಾಖೆ ಅಧೀನ ಕಾರ್ಯದರ್ಶಿ ಮದ್ದೂರು ಪಶು ಆಸ್ಪತ್ರೆ ಮುಖ್ಯವೈದಾಧಿಕಾರಿಯನ್ನು ಸಸ್ಪೆಂಡ್ ಮಾಡಿ ಆದೇಶ ಹೊರಡಿಸಿದ್ದಾರೆ.

## ಹೆಲ್ಮೆಟ್‌ನಿಂದ ಹೊಡೆದು 3 ತಿಂಗಳ ಗರ್ಭಿಣಿ ಕೊಲೆ

ದಾವಣಗೆರೆ: ವ್ಯಕ್ತಿಯೊಬ್ಬ ತನ್ನ ಪತ್ನಿಯನ್ನು ಹೆಲ್ಮೆಟ್‌ನಿಂದ ಹೊಡೆದು ಕೊಂದು ಬಳಿಕ ಅಪಘಾತದ ನಾಟಕವಾಡಿದ್ದು, ಪೊಲೀಸರು ಆತನನ್ನು ಬಂಧಿಸಿದ್ದಾರೆ.

ಮೃತಳನ್ನು ಯಶೋದಾ ಎಂದು ಗುರುತಿಸಲಾಗಿದ್ದು, ಈಕೆ 3 ತಿಂಗಳ ಗರ್ಭಿಯಾಗಿದ್ದರು. ಇದೇ ತಿಂಗಳ 4 ರಂದು ದಾವಣಗೆರೆ ಜಿಲ್ಲೆಯ ಚನ್ನಗಿರಿ ತಾಲೂಕಿಗ ನುಗ್ಗಿಹಳ್ಳಿ ಕ್ರಾಸ್ ಬಳಿ ಈ ಘಟನೆ ನಡೆದಿದೆ.

ಚನ್ನಗಿರಿ ತಾಲೂಕಿನ ಸಾರಥಿ ಹೊಸೂರು ಗ್ರಾಮದ ನಿವಾಸಿ ಯಶೋದಾ, ನರಗನಹಳ್ಳಿ ಗ್ರಾಮದ ತಿಪ್ಪೇಶ್ (28) ಎಂಬಾತನನ್ನ



ಪ್ರೀತಿಸಿ ಆರು ತಿಂಗಳ ಹಿಂದೆ ಮದುವೆ ಆಗಿದ್ದರು. ಅಂತೆಯೇ ಜನವರಿ 4 ರಂದು ಪತಿ ಜೊತೆ ಯಶೋದಾ ತವರಿಗೆ ಬಂದಿದ್ದರು. ತವರು ಮನೆಯಿಂದ ವಾಪಸ್ ಹೋಗುವಾಗ ಬೈಕ್ ಅಪಘಾತವಾಗಿ ಯಶೋದಾ ಸಾವನ್ನಪ್ಪಿದ್ದಾಳೆ ಎಂದು ಸಂಬಂಧಿಕರಿಗೆ ಪತಿ ತಿಪ್ಪೇಶ್ ಮಾಹಿತಿ ನೀಡಿದ್ದ.

ಇತ್ತ ಯಶೋದಾಳ ಶವ ನೋಡಿದ ತಂದೆ ಚಂದ್ರಪ್ಪಗೆ ಕೊಲೆ ಶಂಕೆ ವ್ಯಕ್ತವಾಗಿದೆ. ತನ್ನ ಪುತ್ರಿ ಬೈಕ್ ಅಪಘಾತದಲ್ಲಿ ಸಾವನ್ನಪ್ಪಿಲ್ಲ ಕೊಲೆಯಾಗಿದೆ ಎಂದು ದೂರು ನೀಡಿದ್ದಾರೆ. ದೂರು ದಾಖಲಿಸಿಕೊಂಡು ಪೊಲೀಸರು ತನಿಖೆ ನಡೆಸಿದಾಗ ಸತ್ಯ ಬಹಿರಂಗವಾಗಿದೆ.

ತಾನೇ ಹೊಡೆದು ಸಾಯಿಸಿದ್ದಾಗಿ ತಪ್ಪೊಪ್ಪಿಕೊಂಡಿದ್ದಾನೆ. ಈ ಸಂಬಂಧ ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಉಪ ತಹಶೀಲ್ದಾರ್ ಕಿರುಕುಳಕ್ಕೆ ಕಂಪ್ಯೂಟರ್ ಆಪರೇಟರ್ ಆತ್ಮಹತ್ಯೆ



ಮೈಸೂರು : ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ಹುಲ್ಲಹಳ್ಳಿ ಗ್ರಾಮದ ನಾಡಕಚೇರಿಯಲ್ಲಿ ಉಪ ತಹಶೀಲ್ದಾರರಿಂದ ಮಾನಸಿಕ ಕಿರುಕುಳಕ್ಕೆ ಬೇಸತ್ತು ಕಂಪ್ಯೂಟರ್ ಆಪರೇಟರ್ ಆಗಿ ಕೆಲಸ ಮಾಡ್ತಿದ್ದ ವ್ಯಕ್ತಿ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾದ ಘಟನೆ ನಡೆದಿದೆ.

ಆತ್ಮಹತ್ಯೆಗೆ ಶರಣಾದ ವ್ಯಕ್ತಿ ಹರತಲೆ ಗ್ರಾಮದ ಹೆಚ್. ಎಸ್. ಪರಮೇಶ್ (36) ಎಂದು ತಿಳಿದುಬಂದಿದೆ.

ನಾಡಕಚೇರಿಯಲ್ಲೇ ಡೆತ್ ನೋಟ್ ಬರೆದಿಟ್ಟು ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಅಲ್ಲೇ ಇದ್ದ ಸ್ಥಳೀಯರು ಹುಲ್ಲಹಳ್ಳಿ ಗ್ರಾಮದ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ.

ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆಆರ್ ಆಸ್ಪತ್ರೆಗೆ ರವಾನೆ ಮಾಡುತ್ತಿದ್ದ ವೇಳೆ ಮಾರ್ಗ ಮಧ್ಯೆ ಮೃತಪಟ್ಟಿದ್ದಾರೆ ಎನ್ನಲಾಗಿದೆ.

ಪರಮೇಶ್ ಅಂಗವಿಕಲನಾಗಿದ್ದು, ಹುಲ್ಲಹಳ್ಳಿ ನಾಡಕಚೇರಿಯಲ್ಲಿ ಕಂಪ್ಯೂಟರ್ ಆಪರೇಟರ್ ಆಗಿ ಕೆಲಸ ಮಾಡುತ್ತಿದ್ದರು.

ಆದರೆ ಅದೇ ನಾಡಕಚೇರಿಯಲ್ಲಿ ಉಪತಹಸೀಲ್ದಾರ್ ಆಗಿರುವ ಎನ್‌ಪಿ ಶಿವಕುಮಾರ ಅವರು ದಿನನಿತ್ಯ ಮಾನಸಿಕ ಕಿರುಕುಳ ನೀಡುತ್ತಿದ್ದರು. ಇದರಿಂದ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

## ವಂಚನೆ, ಲೈಂಗಿಕ ಕಿರುಕುಳದ ಆರೋಪ

### ಗ್ರಾಪಂ ಸದಸ್ಯನ ವಿರುದ್ಧ ದೂರು ದಾಖಲು

ಬಾಗಲಕೋಟೆ : ಮದುವೆ ಮಾಡಿಸುವುದಾಗಿ ವಂಚಿಸಿ, ಲೈಂಗಿಕ ಕಿರುಕುಳದ ಆರೋಪ ಕೇಳಿಬಂದಿದ್ದು, ಹುನಗುಂದ ತಾಲ್ಲೂಕಿನ ಅಮೀನಗಢ ಪಟ್ಟಣ ಪಂಚಾಯಿತಿ ಸದಸ್ಯ ಸಂಜು ಐಹೊಳಿ ವಿರುದ್ಧ ದೂರು ದಾಖಲಾಗಿದೆ.

ಅಮೀನಗಢ ಪಟ್ಟಣದ ಯುವತಿ ಭಾಗ್ಯಲಕ್ಷ್ಮಿ ಯಂಕಂಚಿ ಎಂಬ ಯುವತಿ, ತನ್ನ ಪ್ರಿಯಕರನೊಂದಿಗೆ ಮದುವೆ ಮಾಡಿಸುವುದಾಗಿ ಬರೊಬ್ಬರಿ 9 ಲಕ್ಷ ರೂ. ಹಣ ಪಡೆದು ವಂಚನೆ ಮಾಡಿದ್ದಾನೆ ಎಂದು ಯುವತಿ ಆರೋಪಿಸಿದ್ದಾಳೆ.

ಇದಕ್ಕೆ ಆರೋಪಕ್ಕೆ ಗುರಿಯಾದ ವೃತ್ತಿಯಲ್ಲಿ ವಕೀಲ, ಪಟ್ಟಣ ಪಂಚಾಯತಿ ಸದಸ್ಯ ಹಾಗೂ ಜಯಕರ್ನಾಟಕ ಸಂಘಟನೆ



ಹುನಗುಂದ ತಾಲ್ಲೂಕಾಧ್ಯಕ್ಷ ಆಗಿರುವ ಸಂಜು ಐಹೊಳಿ ಅಲ್ಲಗಳೆದಿದ್ದಾರೆ.


ಇದೆಲ್ಲ ಕಟ್ಟುಕಥೆ ಶುದ್ದು ಸುಳ್ಳು ಎಂದ ಆರೋಪಕ್ಕೆ ಗುರಿಯಾದ ಸಂಜು ಐಹೊಳಿ

ಇನ್ನು ಘಟನೆ ಕುರಿತು ಆರೋಪಕ್ಕೆ ಗುರಿಯಾದ ವಕೀಲ ಸಂಜು ಐಹೊಳಿ ಮಾತನಾಡಿ 'ಇದೆಲ್ಲ ಕಟ್ಟುಕಥೆ, ಶುದ್ದು ಸುಳ್ಳು. ಆಕೆಯ ಲವರ್ ಸಾಗರ್ ಎಂಬಾತ ಲವ್ ಮಾಡಿ ಮದುವೆ ಮಾಡಿಕೊಳ್ಳಲು ಒಪ್ಪುತ್ತಿಲ್ಲ ಎಂದು ಭಾಗ್ಯಲಕ್ಷ್ಮಿ ಹಾಗೂ ಕುಟುಂಬಸ್ಥರು ನನ್ನ ಬಳಿ ಬಂದಿದ್ದರು. ನಾನೇ ನಮ್ಮ ಜಯಕರ್ನಾಟಕ ಸಂಘಟನೆ ಮೂಲಕ ಇಬ್ಬರ ಮದುವೆಯನ್ನು ಮಾಡಿಸಿದ್ದೇನೆ.

## ವಿದ್ಯುತ್ ಸ್ಪರ್ಶಿಸಿ 3 ಜನ ಸಾವು

ಗದಗ: ಚಲನಚಿತ್ರ ನಟ ಯಶ್ ಹುಟ್ಟುಹಬ್ಬಕ್ಕೆ ಬೃಹತ್ ಗಾತ್ರದ ಕಟೌಟ್ ಕಟ್ಟಲು ಹೋಗಿ ವಿದ್ಯುತ್ ಸ್ಪರ್ಶದಿಂದ 3 ಜನ ಸಾವನ್ನಪ್ಪಿದ ಘಟನೆ ಲಕ್ಷ್ಮೇಶ್ವರದ ಸೂರಣಗಿ ಗ್ರಾಮದಲ್ಲಿ ನಡೆದಿದೆ. ಘಟನೆಯಲ್ಲಿ ಮೂವರು ಗಂಭೀರವಾಗಿ ಗಾಯಗೊಂಡಿದ್ದು ಅವರಿಗೆ ಚಿಕಿತ್ಸೆ ನೀಡಲಾಗುತ್ತಿದೆ.

ಮೃತರನ್ನು ಹನುಮಂತ ಹರಿಜನ್ (24), ಮುರಳಿ ನಡುವಿನಮನಿ (20) ಹಾಗೂ ನವೀನ್ ಗಾಜಿ (20) ಎಂದು ಗುರುತಿಸಲಾಗಿದೆ. ಘಟನೆಯಲ್ಲಿ ಮಂಜುನಾಥ್, ಪ್ರಕಾಶ್ ಹಾಗೂ ಹನುಮಂತ ಎಂಬವರಿಗೆ ಗಂಭೀರ ಗಾಯಾಳಾಗಿವೆ. ಮಧ್ಯರಾತ್ರಿ 1 ಗಂಟೆ ವೇಳೆ ಕಟೌಟ್ ಕಟ್ಟುವ ವೇಳೆ ಈ ದುರ್ಘಟನೆ ನಡೆದಿದೆ. ಗಾಯಾಳುಗಳನ್ನು ಲಕ್ಷ್ಮೇಶ್ವರ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು ಚಿಕಿತ್ಸೆ ನೀಡಲಾಗುತ್ತಿದೆ.



ಮಧ್ಯರಾತ್ರಿ ವೇಳೆ, ಹತ್ತಾರು ಜನ ಯುವಕರು ಸೇರಿಕೊಂಡು ತಮ್ಮ ನೆಚ್ಚಿನ ನಟನ ಕಟೌಟ್ ಕಟ್ಟಲು ಮುಂದಾಗಿದ್ದಾರೆ. ರಾತ್ರಿ ಸಮಯ ಆಗಿದ್ದರಿಂದ ವಿದ್ಯುತ್ ತಂತಿ ಯುವಕರ ಗಮನಕ್ಕೆ ಬಂದಿಲ್ಲ. ಇದರಿಂದ ಈ ದುರ್ಘಟನೆ ಸಂಭವಿಸಿದೆ. ಮೃತರ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದ್ದು, ಗ್ರಾಮದಲ್ಲಿ ಸೂತಕದ ಛಾಯೆ ಮನೆ ಮಾಡಿದೆ. ಈ ಸಂಬಂಧ ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬಿಗ್‌ಬಾಸ್ ಶೋ ಹೆಸರಲ್ಲಿ ಮೋಸ ಹೋದ ನಟಿ

ನವದೆಹಲಿ : ಬಿಗ್ ಬಾಸ್ ಶೋನಲ್ಲಿ ಭಾಗವಹಿಸಲು ಅವಕಾಶ ಕೊಡುವುದಾಗಿ ನಂಬಿಸಿ ನಟಿಯಿಂದ ಹಣವನ್ನು ಪಡೆದು ವ್ಯಕ್ತಿಯೊಬ್ಬ ಆಕೆಗೆ ಮೋಸ ಮಾಡಿದ್ದಾನೆ. ಮೋಸ ಹೋದ ನಟಿ ಪೊಲೀಸರ ಮೊರೆ ಹೋಗಿದ್ದಾಳೆ.

ಬಿಗ್ ಬಾಸ್ ಶೋ ಎಂದರೆ ಜನರಲ್ಲಿ ಭಾರೀ ಕ್ರೇಜ್. ಮತ್ತು ಇದರಲ್ಲಿ ಭಾಗವಹಿಸಲು ಉತ್ಸುಕರಾಗಿರುವ ಸೆಲೆಬ್ರಿಟಿಗಳೂ ಇದ್ದಾರೆ. ಅವರಲ್ಲಿ ಖಮ್ಮಂ ಜಿಲ್ಲೆಯ ಸ್ವಪ್ನಾ ಚೌಧರಿ ಕೂಡ ಒಬ್ಬರು. ಅವರು ನಮಸ್ತೆ ಸೆಟ್ ಜೀ ಮತ್ತು ಮಿಸ್ಟರಿ ಚಿತ್ರಗಳ ಮೂಲಕ ನಟಿಯಾಗಿದ್ದಾರೆ ಮತ್ತು ಕಾರ್ಯಕ್ರಮಗಳಲ್ಲಿಯೂ ಸಹ ನಿರೂಪಕಿಯಾಗಿ ಮಾಡುತ್ತಾರೆ. ಬಿಗ್ ಬಾಸ್ ಶೋನಲ್ಲಿ ಭಾಗವಹಿಸುವುದು



ಸ್ವಪ್ನಾ ಚೌಧರಿ ಅವರ ಕನಸು. ತಮ್ಮಳ್ಳಿ ರಾಜು ಎಂಬ ವ್ಯಕ್ತಿ ಇದನ್ನು ತಿಳಿದುಕೊಂಡು ಬಲೆ ಬಿಸಿದ್ದಾನೆ.

ಆಂಕರ್ ಸ್ವಪ್ನಾ ಚೌಧರಿ ಅಲಿಯಾಸ್ ಅಮ್ಮಿನೇನಿ ಸ್ವಪ್ನಾ (ಅಮ್ಮಿನೇನಿ ಸ್ವಪ್ನಾ ಚೌದರಿ) ಉದ್ಯಮದಲ್ಲಿ ಅನೇಕರಿಗೆ ಪರಿಚಿತರು. ಆಯಂಕರ್ ಆಗಿ ಮಾತ್ರವಲ್ಲದೆ ನಟಿಯಾಗಿಯೂ ಸಿನಿಮಾಗಳಲ್ಲಿ ನಟಿಸಿದ್ದಾರೆ. ಬಿಗ್ ಬಾಸ್ ಸೀಸನ್ 7ರಲ್ಲಿ ತನ್ನನ್ನು ಸ್ಪರ್ಧಿಯಾಗಿ ಕಳುಹಿಸುವುದಾಗಿ ನಂಬಿಸಿ ತಮ್ಮಾಲಿ ರಾಜು ಎಂಬ ವ್ಯಕ್ತಿ ಆಕೆಯಿಂದ 2.50 ಲಕ್ಷ ರೂಪಾಯಿ ಪಡೆದಿದ್ದಾನೆ. ಆ ಹಣದಲ್ಲಿ ಬಿಗ್ ಬಾಸ್ ನಲ್ಲಿ ಧರಿಸುವ ಕಾಸ್ಟ್ಯೂಮ್ ಗಳನ್ನು ಕಳುಹಿಸಿಕೊಡುವುದಾಗಿ ಹೇಳಿದ್ದಾರೆ. ಅದೂ ಅಲ್ಲದೆ ಫೋಟೋ ಶೂಟ್ ಗೆ ಇನ್ನೂ 25 ಸಾವಿರ ರೂ. ಇವೆಲ್ಲವನ್ನೂ ಅಗ್ರಿಮೆಂಟ್ ಪೇಪರ್ ಮೇಲೆ ಬರೆದು ಸಹಿ ಮಾಡಿ ಕೊಡಲಾಗಿದೆ. ಹೀಗಾಗಿ ಸ್ವಪ್ನಾ ಚೌಧರಿ ಬಿಗ್ ಬಾಸ್ ಪ್ರವೇಶಿಸುವುದು ಖಚಿತ ಎಂದು ನಿರ್ಧರಿಸಿದ್ದಾಳೆ. ಸ್ವಲ್ಪ ದಿನಗಳ ನಂತರ ಸ್ವಪ್ನಾ ಚೌಧರಿ ಆತನ ಬಳಿ ಕೇಳಿದ್ದಾರೆ.

## ಸಖತ್ ಕುತೂಹಲ ಹುಟ್ಟಿಸಿದ ಟೀಸರ್

ಬೆಂಗಳೂರು: ರಿಯಲ್ ಸ್ಟಾರ್ ಉಪೇಂದ್ರ ಬಹು ಸಮಯದ ಬಳಿಕ ಡೈರೆಕ್ಟರ್ ಕ್ಯಾಪ್ ತೊಟ್ಟು, ಅಭಿನಯಿಸಿರುವ ಪ್ಯಾನ್ ಇಂಡಿಯಾ 'ಯುಐ' ಸಿನಿಮಾದ ಬಹು ನಿರೀಕ್ಷಿತ ಎರಡನೇ ಟೀಸರ್ ಇಂದು ರಿಲೀಸ್ ಆಗಲಿದೆ.

ಟೀಸರ್ ಸಂಭ್ರಮಕ್ಕೆ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್, ಡಾಲಿ ಧನಂಜಯ ಖ್ಯಾತ ನಿರ್ಮಾಪಕ ಅಲ್ಲು ಅರವಿಂದ್ ಜೊತೆಯಾಗಿದ್ದು, ಕಿಚ್ಚ ಸುದೀಪ್ ಚಿತ್ರೀಕರಣದಲ್ಲಿ ಬ್ಯುಸಿಯಾಗಿರುವುದರಿಂದ, ಸೋಶಿಯಲ್ ಮೀಡಿಯಾ ಮೂಲಕ ಟೀಸರ್ ರಿಲೀಸ್ ಮಾಡಿ, ಉಪ್ಪಿ 'ಯುಐ'ಗೆ ಸಾಥ್ ನೀಡಿದ್ದಾರೆ.

ಉಪೇಂದ್ರ ಅಂದ್ಮೇಲೆ ಅಲ್ಲಿ ತಲೆಗ ಹುಳು ಬಿಡುವ ಅಂಶಗಳಿರುತ್ತವೆ. ಅದರಂತೆ ಟೀಸರ್ ಎಂದು ಬರೀ ಕತ್ತಲೆಯಲ್ಲಿ ಸೌಂಡ್ ಹಾಕಿ ಇದೇ ಟೀಸರ್ ಎಂದು ಪ್ರೇಕ್ಷಕರ ತಲೆ ಓಡುವಂತೆ ಮಾಡಿದ್ದರು. ಇದಾದ ಬಳಿಕ ಕುದುರೆ ಹೆಜ್ಜೆ ತೋರಿಸಿ ಟೀಸರ್ ಡೇಟ್ ಗೆಸ್ ಮಾಡಿ ಎಂದಿದ್ದರು.

ಅಂತೂ ಎಲ್ಲರೂ ಕಾಯುತ್ತಿದ್ದ 'ಯುಐ' ಟೀಸರ್




ರಿಲೀಸ್ ಆಗಿದೆ. ಮೊದಲ ದೃಶ್ಯದಲ್ಲಿ ಎರಡು ವಿಭಿನ್ನ ಜೀವಿಗಳು ದೂರದೂರನ್ನು ನೋಡುವ ನೋಟವನ್ನು ತೋರಿಸಲಾಗಿದೆ. ಅವತಾರ್ ಸಿನಿಮಾದಲ್ಲಿರುವ ಜೀವಿಗಳ ಹಾಗೆ ತೋರುತ್ತಾರೆ. ಇದು ಎಐ ವರ್ಲ್ಡ್ ಅಲ್ಲ ಯುಐ ವರ್ಲ್ಡ್ ಎಂದು, ತಮ್ಮದೇ ಆದ ಜಗತ್ತನ್ನು ತೋರಿಸಿದ್ದಾರೆ. ಇಲ್ಲಿ ಒಂದು ಜಗತ್ತಿದೆ. ಆ ಜಗತ್ತಿಗೆ ಒಬ್ಬ ಸೇನಾದಿಪತಿ, ದೇವ, ಸೈನ್ಯವೇ ಇದೆ. ಉಪ್ಪಿ ಕೊಂಬು ಇರುವ ಕುದುರೆ ಏರಿ ಬಂದಿದ್ದಾರೆ. ರವಿ ಶಂಕರ್ ಹಾಗೂ ಸಾಧಕೋಕಿಲ ಭಿನ್ನ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ.

## ನಮ್ಮ ಮೆಟ್ರೋ ದಲ್ಲಿ ಯುವತಿಗೆ ಲೈಂಗಿಕ ಕಿರುಕುಳ



ಬೆಂಗಳೂರು: ನಮ್ಮ ಮೆಟ್ರೋ ರೈಲಿನಲ್ಲಿ ಯುವತಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಕೇಳಿ ಬಂದಿದೆ. ಯುವತಿಯ ಖಾಸಗಿ ಅಂಗಾಂಗ ಸ್ಪರ್ಶಿಸಿ ವ್ಯಕ್ತಿ ಕಿರುಕುಳ ನೀಡಿದ್ದಾನೆ. ಜನವರಿ 1ರಂದು ಮೆಜೆಸ್ಟಿಕ್ ನಿಲ್ದಾಣದಲ್ಲಿ ನಡೆದ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಸಂತ್ರಸ್ತ ಯುವತಿ ನಮ್ಮ ಮೆಟ್ರೋ ಭದ್ರತಾ ಸಿಬ್ಬಂದಿಗೆ ನಡೆದ ಘಟನೆಯ ಬಗ್ಗೆ ಮಾಹಿತಿ ನೀಡಿದ್ದು, ಕೂಡಲೇ ವ್ಯಕ್ತಿಯ ವಿಚಾರಣೆ ನಡೆಸಿದ ಸಿಬ್ಬಂದಿ ಪೊಲೀಸರಿಗೆ ಒಪ್ಪಿಸಿದ್ದಾರೆ. ಲೈಂಗಿಕ ಕಿರುಕುಳ ನೀಡಿದ್ದಾಗಿ ಪೊಲೀಸರ ಮುಂದೆ ವ್ಯಕ್ತಿ ತಪ್ಪೊಪ್ಪಿಕೊಂಡಿದ್ದಾನೆ. ಮತ್ತೊಮ್ಮೆ ಹೀಗೆ ಮಾಡುವುದಿಲ್ಲವೆಂದು ಆರೋಪಿ ಕ್ಷಮೆಯಾಚಿಸಿದ್ದಾನೆ ಎನ್ನಲಾಗಿದ್ದು, ಹೆಚ್ಚಿನ ವಿವರ ನಿರೀಕ್ಷಿಸಲಾಗಿದೆ.

VOL. 04 ISSUE. 287 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089